ಸಂಪುಟ: 06 ಸಂಚಿಕೆ: 76 ಪುಟಗಳು: 08 ಶನಿವಾರ 30 ಮೇ 2026

www.udayavahini.in epaper.udayavahini.in Udaya vahini news Udaya vahini news Udayavahini news youGÓ...qbe udayavahininews@gmail.

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಗೆಲುವಿಗೆ ಮೊದಲ ಮೆಟ್ಟಿಲೆಂದರೆ ನಾವು ಮಾಡಬೇಕಾದ ಕೆಲಸವನ್ನು ಪ್ರೀತಿಸಬೇಕು. ಶ್ರದ್ಧೆಯೇ ಎರಡನೇ ಹಂತ. ಅಲ್ಲಿಂದ ಗೆಲುವು ದೂರವಿಲ್ಲ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮಾಜಿ ಸಚಿವ ವೆಂಕಟರಮಣಪ್ಪ ಹೃದಯಾಘಾತದಿಂದ ನಿಧನ

• ಉದಯವಾಹಿನಿ, ಬೆಂಗಳೂರು



ಪಾವಗಡ ಕ್ಷೇತ್ರದ ಮಾಜಿ ಶಾಸಕ ಹಾಗೂ ಮಾಜಿ ಸಚಿವ ವೆಂಕಟರಮಣಪ್ಪ (80) ಅವರು ಹೃದಯಾಘಾತದಿಂದ ನಿಧನರಾಗಿದ್ದಾರೆ. ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಮುಂಜಾನೆ 5 ಗಂಟೆ ಸುಮಾರಿಗೆ ನಿಧನರಾಗಿದ್ದಾರೆ. ಪಾವಗಡ ಕ್ಷೇತ್ರದ ಹಾಲಿ ಶಾಸಕ ಎಚ್. ವಿ. ವೆಂಕಟೇಶ್ ಸೇರಿದಂತೆ ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿಯನ್ನು ಅವರು ಅಗಲಿದ್ದಾರೆ. 2008ರ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಪಾವಗಡ ಕ್ಷೇತ್ರದಿಂದ ಗೆಲುವು ಸಾಧಿಸಿದ್ದ ಅವರು, ನಂತರ ಬಿ. ಎಸ್. ಯಡಿಯೂರಪ್ಪ ಅವರ ನೇತೃತ್ವದ ಸರ್ಕಾರದಲ್ಲಿ ರೇಷ್ಮೆ ಕೃಷಿ ಮತ್ತು ಸಣ್ಣ ಕೈಗಾರಿಕೆಗಳ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಅಲ್ಲದೆ 2018ರ ಕಾಂಗ್ರೆಸ್ ಹಾಗೂ ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಕಾರ್ಮಿಕ ಸಚಿವರಾಗಿಯೂ ಕಾರ್ಯ ನಿರ್ವಹಿಸಿದ್ದರು. ಪಾವಗಡದ ಪಟ್ಟಣದ ಗುರುಭವನದಲ್ಲಿ ಮೃತರ ಪಾರ್ಥಿವ ಶರೀರ ಅಂತಿಮ ದರ್ಶನಕ್ಕೆ ಇರಿಸಲಾಗುವುದು ಎಂದು ಕುಟುಂಬಸ್ಥರು ಮಾಹಿತಿ ನೀಡಿದ್ದಾರೆ.

## ಮೆಟ್ರೋ ನೇರಳೆ ಮಾರ್ಗದಲ್ಲಿ ಸಂಚಾರ ವ್ಯತ್ಯಯ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ನೇರಳೆ ಮಾರ್ಗದ ಅತ್ತಿಗುಪ್ಪೆ ಮತ್ತು ವಿಜಯನಗರ ನಿಲ್ದಾಣಗಳ ನಡುವಿನ ಭಾಗದಲ್ಲಿ ಅಗತ್ಯ ತಾಂತ್ರಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವುದರಿಂದ ಮೇ 31ರಂದು ದೀಪಾಂಜಲಿನಗರ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ (ಕೆಎಸ್‌ಆರ್) ಮೆಟ್ರೋ ನಿಲ್ದಾಣಗಳ ನಡುವಿನ ಮೆಟ್ರೋ ಸೇವೆಯಲ್ಲಿ ತಾತ್ಕಾಲಿಕ ವ್ಯತ್ಯಯವಾಗಲಿದೆ. ಸುಗಮವಾಗಿ ಕಾಮಗಾರಿ ನಿರ್ವಹಿಸುವ ಉದ್ದೇಶದಿಂದ ನೇರಳೆ ಮಾರ್ಗದ ದೀಪಾಂಜಲಿನಗರ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ (ಕೆಎಸ್‌ಆರ್) ಮೆಟ್ರೋ ನಿಲ್ದಾಣಗಳ ನಡುವಿನ ಮೆಟ್ರೋ ರೈಲು ಸಂಚಾರವನ್ನ ಬೆಳಗ್ಗೆ 7ರಿಂದ 9 ಗಂಟೆಯವರೆಗೆ (ಎರಡು ತಾಸು) ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ತಿಳಿಸಿದೆ. ಈ ಅವಧಿಯಲ್ಲಿ ಚಲಘಟ್ಟದಿಂದ ಮೈಸೂರು ರಸ್ತೆಯವರೆಗೆ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದಿಂದ ವೈಟ್‌ಫೀಲ್ಡ್ (ಕಾಡುಗೋಡಿ)ವರೆಗೆ, ಮಾದಾವರದಿಂದ ಸಿಲ್ಕ್ ಇನ್‌ಸ್ಟಿಟ್ಯೂಟ್‌ವರೆಗೆ ಹಾಗೂ ಆರ್.ವಿ. ರಸ್ತೆಯಿಂದ ಬೊಮ್ಮಸಂದ್ರವರೆಗೆ ಎಂದಿನಂತೆ ಸಾಮಾನ್ಯ ಸೇವೆ ಇರಲಿದೆ.

ತಾಂತ್ರಿಕ ನಿರ್ವಹಣಾ ಕಾಮಗಾರಿ ಹಿನ್ನೆಲೆ ಮೆಟ್ರೋದ ನೇರಳೆ ಮಾರ್ಗದಲ್ಲಿ ಮೇ 17ರಂದೂ ಸಹ ಸಂಚಾರ ವ್ಯತ್ಯಯ ಉಂಟಾಗಿತ್ತು. ಹೊಸಹಳ್ಳಿ-ಕಬ್ಬನ್ ಪಾರ್ಕ್ ನಿಲ್ದಾಣಗಳ ನಡುವೆ ಬೆಳಗ್ಗೆ 7 ಗಂಟೆಯಿಂದ 9 ಗಂಟೆಯವರೆಗೆ ಒಟ್ಟು ಎರಡು ಗಂಟೆಗಳ ಅವಧಿಗೆ ಮೆಟ್ರೋ ರೈಲು ಸಂಚಾರದಲ್ಲಿ ಭಾಗಶಃ ವ್ಯತ್ಯಯವುಂಟಾಗಿತ್ತು.

## ಸಿದ್ದರಾಮಯ್ಯ ಅವರ ನಡೆ ನಿಜಕ್ಕೂ ಮಾದರಿ

• ಉದಯವಾಹಿನಿ, ಬೆಂಗಳೂರು

ಹೈಕಮಾಂಡ್ ತೀರ್ಮಾನದಂತೆ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರ ನಡೆ ನಿಜಕ್ಕೂ ಮಾದರಿ, ಅವರು ನಮ್ಮ ಪ್ರಶ್ನಾತೀತ ನಾಯಕರು ಎಂದು ಮಾಜಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಾಧ್ಯಮದವರ ಜೊತೆ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಬದಲಾವಣೆ ಇದೊಂದು ಪ್ರಕ್ರಿಯೆ. ಹೈಕಮಾಂಡ್ ತೀರ್ಮಾನದಂತೆ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದಾರೆ. ಈ ಹಿಂದೆಯೂ ಅವರು ನಾನು ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಹೇಳಿದ್ದರು. ಅದರಂತೆ ನಡೆದುಕೊಂಡಿದ್ದಾರೆ. ಅವರ ನಡೆ ನಿಜಕ್ಕೂ ಮಾದರಿ ಎಂದಿದ್ದಾರೆ. ಹೊಸ ಸಚಿವ ಸಂಪುಟದಲ್ಲಿ ನೀವು ಇರುತ್ತೀರಾ? ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜಕೀಯದಲ್ಲಿ ಯಾವುದೂ ಪರ್ಮನೆಂಟ್ ಅಲ್ಲ, ಸದ್ಯಕ್ಕೆ ಆ ಚರ್ಚೆ ಅನಗತ್ಯ, ಮೊದಲು ಶಾಸಕಾಂಗ ಪಕ್ಷದ ಸಭೆ ಬಳಿಕ ಮುಖ್ಯಮಂತ್ರಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

## ಸಿದ್ದರಾಮಯ್ಯನವರ ಮಾರ್ಗದರ್ಶನದಲ್ಲಿ ಅಹಿಂದ ಧ್ವಜ ಕೊಂಡೊಯ್ಯುವೆ: ಜಾರಕಿಹೊಳಿ

• ಉದಯವಾಹಿನಿ, ಬೆಂಗಳೂರು

ಒಪ್ಪಂದದಂತೆ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಅಹಿಂದ ಧ್ವಜವನ್ನು ಕೊಂಡೊಯ್ಯುವೆ ಎಂದು ಹಿರಿಯ ಕಾಂಗ್ರೆಸ್ ನಾಯಕ ಸತೀಶ್ ಜಾರಕಿಹೊಳಿ ತಿಳಿಸಿದರು. ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇನ್ನು ಎರಡು ವರ್ಷಗಳ ನಂತರವಾದರೂ ಸಿದ್ದರಾಮಯ್ಯ ಇಳಿಯಲೇಬೇಕಲ್ವಾ?, ಎಲ್ಲಾ ಸಂದರ್ಭದಲ್ಲಿಯೂ ನಾವು ರೆಡಿ ಇರಬೇಕು.

ಅಹಿಂದ ವರ್ಗದಲ್ಲಿ ಸುಮಾರು 500 ಜಾತಿಗಳಿವೆ. ನಾನು ಅಹಿಂದ ಧ್ವಜ ಕೊಂಡೊಯ್ಯುತ್ತೇನೆ. ಯಾರಾದರೂ ಒಬ್ಬರು ಅಹಿಂದ ಧ್ವಜ ಒಯ್ಯಲೇಬೇಕಲ್ವಾ? ಹೊಸ ಅಹಿಂದ ನಾಯಕ ಉದಯವಾಗಲೇಬೇಕು. ಆ ವ್ಯವಸ್ಥೆ ರಾಜ್ಯದಲ್ಲಿದೆ ಎಂದರು. ಸಿದ್ದರಾಮಯ್ಯ ಕೆಳಗಿಳಿಯಲೇಬೇಕಿತ್ತು. ನಾಯಕತ್ವ ವಿಚಾರದ ಕುರಿತು ದೆಹಲಿಯಲ್ಲಿ ಎಲ್ಲಾ ಮಾತುಕತೆ ಆಗಿದೆ. ಈ ಬಗ್ಗೆ ಬೆಂಗಳೂರಲ್ಲಿ ಏನೂ ಆಗಿಲ್ಲ. ನಮ್ಮನ್ನು ಯಾರೂ ಆಗಲೂ ಕೇಳಿರಲಿಲ್ಲ. ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದಿದ್ದಾರೆ ಎಂದು ಹೇಳಿದರು.

**ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಭಾರತವನ್ನು ಹೊಗಳುವ ಯಾವುದೇ ಅವಕಾಶವನ್ನು ಕಳೆದುಕೊಳ್ಳುವುದಿಲ್ಲ. ಭಾರತದ ಬಗ್ಗೆ ಯಾವಾಗಲೂ ಒಳ್ಳೆಯ ಮಾತುಗಳನ್ನಾಡುವ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಗೆಳೆತನವನ್ನೂ ಆಗ್ಗಾಗ್ಗೆ ಸ್ಮರಿಸುತ್ತಾರೆ. ಮತ್ತೊಮ್ಮೆ ಭಾರತವನ್ನು ಕೊಂಡಾಡಿರುವ ಇಸ್ರೇಲ್ ಪ್ರಧಾನಿ, ಇಡೀ ವಿಶ್ವವೇ ನಮ್ಮನ್ನು ದೂರ ತಳ್ಳಿದರೂ, ಭಾರತ ಮಾತ್ರ ಎಂದಿಗೂ ನಮ್ಮ ಕೈಬಿಡುವುದಿಲ್ಲ.**

# ಇಡೀ ವಿಶ್ವವೇ ದೂರವಾದರೂ ಭಾರತ ನಮ್ಮ ಜೊತೆ ನಿಂತಿದೆ

**ನನಗೆ ಭಾರತದಲ್ಲಿ ಅತಿ ಹೆಚ್ಚು ಅನುಯಾಯಿಗಳಿದ್ದಾರೆ**

**ಭಾರತದ ಬಲ ನಮ್ಮಗೆ ಬೆಂಬಲ**

**ಭಾರತದ ಮೇಲೆ ಪ್ರೀತಿ**

**ಭಾರತದಲ್ಲಿ ಅತಿ ಹೆಚ್ಚು ಅನುಯಾಯಿಗಳಿದ್ದಾರೆ ಇದೆ**

**ಭಾರತ ಬಗ್ಗೆ ಬೆಂಜಮಿನ್ ನೆತನ್ಯಾಹು ಬಣ್ಣನೆ**

**1** ಇಸ್ರೇಲ್‌ಗೆ ಭಾರತದ ಬೆಂಬಲವನ್ನು ಸ್ಮರಿಸಿದ ಬೆಂಜಮಿನ್ ನೆತನ್ಯಾಹು.

**2** ಭಾರತ ಎಂದಿಗೂ ಇಸ್ರೇಲ್ ಜೊತೆಗೆ ಕಠಿಣವಾಗಿ ವರ್ತಿಸಲ್ಲ ಎಂದ ನೆತನ್ಯಾಹು.

**3** ಇಸ್ರೇಲ್ ಪ್ರಧಾನಿ ಪದೇ ಪದೇ ಭಾರತವನ್ನು ಹೊಗಳುತ್ತಿರುವುದೇಕೆ?



• ಉದಯವಾಹಿನಿ, ನವದೆಹಲಿ

ಜಾಗತಿಕ ಮಟ್ಟದಲ್ಲಿ ಇಸ್ರೇಲ್ ವಿರುದ್ಧ ಟೀಕೆಗಳು, ಪ್ರತಿಭಟನೆಗಳು ಮತ್ತು ರಾಜತಾಂತ್ರಿಕ ಒತ್ತಡಗಳು ಹೆಚ್ಚುತ್ತಿರುವ ನಡುವೆಯೂ ಭಾರತ ಮಾತ್ರ ತಮ್ಮ ದೇಶದ ಪರವಾಗಿ ನಿಂತಿದೆ ಎಂದು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಅವರು ಹೇಳಿದ್ದಾರೆ.

ವೆಸ್ಟ್ ಬ್ಯಾಂಕ್‌ನಲ್ಲಿ ನಡೆದ ಉನ್ನತ ಮಟ್ಟದ ಸಮ್ಮೇಳನವೊಂದರಲ್ಲಿ ಮಾತನಾಡಿದ ಅವರು, ವಿಶ್ವದಾದ್ಯಂತ ಇಸ್ರೇಲ್ ಅನ್ನು ಪ್ರತ್ಯೇಕಿಸುವ ಯತ್ನಗಳು ನಡೆಯುತ್ತಿದ್ದರೂ, ಭಾರತದಲ್ಲಿ ಮಾತ್ರ ನಮ್ಮ ಮೇಲೆ ಹುಚ್ಚರಂತೆ ಪ್ರೀತಿ ಇದೆ ಎಂದು ಹೇಳಿದ್ದಾರೆ. ನಾನು ಈ ಮಾತನ್ನು ಸ್ಪಷ್ಟವಾಗಿ ಹೇಳಬಯಸುತ್ತೇನೆ. ಇಂದು ಜಗತ್ತಿನ ಬಹುತೇಕ ಭಾಗಗಳಲ್ಲಿ ನಾವು ಪ್ರತ್ಯೇಕತೆಯನ್ನು ಎದುರಿಸುತ್ತಿದ್ದೇವೆ. ಆದರೆ ಭಾರತದಲ್ಲಿ ಅಂತಹ ಯಾವುದೇ ಪರಿಸ್ಥಿತಿ ಇಲ್ಲ. ಅಲ್ಲಿ ಇಸ್ರೇಲ್ ಕುರಿತು ಸಂಪೂರ್ಣವಾಗಿ ಹುಚ್ಚರಂತೆ ಪ್ರೀತಿಸುವ ಜನರಿದ್ದಾರೆ, ಅದು ನಿಜಕ್ಕೂ ಅದ್ಭುತ ಎಂದು ತಿಳಿಸಿದ್ದಾರೆ. ವಿಶ್ವದ ಬೇರೆ ಯಾವುದೇ ದೇಶಕ್ಕಿಂತಲೂ ನನಗೆ ಭಾರತದಿಂದಲೇ ಅತಿ ಹೆಚ್ಚು ಸೋಶಿಯಲ್ ಮೀಡಿಯಾ ಫಾಲೋವರ್ಸ್ ಇದ್ದಾರೆ ಎಂದು ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ. ಇಸ್ರೇಲ್ ಜಾಗತಿಕವಾಗಿ ಒಂಟಿಯಾಗಿದೆ ಎಂಬ ವಾದವನ್ನು ತಳ್ಳಿಹಾಕಿದ ನೆತನ್ಯಾಹು, 140 ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿರುವ ಭಾರತದಂತಹ ಜಾಗತಿಕ ದೊಡ್ಡ ಶಕ್ತಿ ಇಸ್ರೇಲ್ ಜೊತೆಗಿದೆ ಎಂದು ಹೇಳಿದರು. ಇದೇ ವೇಳೆ ಸಾಮಾಜಿಕ ಜಾಲತಾಣಗಳಲ್ಲಿ ಇಸ್ರೇಲ್ ವಿರುದ್ಧ ನಡೆಯುತ್ತಿರುವ ವ್ಯವಸ್ಥಿತ ಪ್ರಚಾರದ ಬಗ್ಗೆ ಮಾತನಾಡುತ್ತಾ ಪಾಕಿಸ್ತಾನದ ಹೆಸರನ್ನು ಪ್ರಸ್ತಾಪಿಸಿದ್ದಾರೆ.ಅಮೆರಿಕ ಮತ್ತು ಇಸ್ರೇಲ್ ನಡುವಿನ ರಾಜತಾಂತ್ರಿಕ ಸಂಬಂಧಗಳನ್ನು ಹಳಸುವಂತೆ ಮಾಡಲು ಮತ್ತು ಇಸ್ರೇಲ್ ವಿರುದ್ಧ ನಕಲಿ ಕಥೆಗಳನ್ನು ಹರಡಲು ಪಾಕಿಸ್ತಾನ ಮೂಲದ ಬಾಟ್ ಫಾರ್ಮ್‌ಗಳು ಸಾಮಾಜಿಕ ಜಾಲತಾಣಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿವೆ ಎಂದು ಗಂಭೀರ ಆರೋಪ ಮಾಡಿದ್ದಾರೆ.ಬಳಿಕ ಪ್ರಧಾನಿ ಮೋದಿ ಅವರ ಇಸ್ರೇಲ್ ಭೇಟಿ ಹಾಗೂ ತಾವು ಭಾರತಕ್ಕೆ ನೀಡಿದ್ದ ಭೇಟಿಯನ್ನು ಸ್ಮರಿಸಿದ ನೆತನ್ಯಾಹು, ಈ ಸಂಬಂಧವನ್ನು ಕೇವಲ ರಾಜತಾಂತ್ರಿಕತೆಯಲ್ಲ, ಅದೊಂದು 'ಲವ್ ಫೆಸ್ಟ್' ಎಂದು ಕರೆದಿದ್ದಾರೆ.ಗಾಜಾ, ಲೆಬನಾನ್ ಮತ್ತು ವೆಸ್ಟ್ ಬ್ಯಾಂಕ್‌ನಲ್ಲಿ ನಡೆಯುತ್ತಿರುವ ಮಿಲಿಟರಿ ಕಾರ್ಯಾಚರಣೆಗಳ ಹಿನ್ನೆಲೆಯಲ್ಲಿ ಅಮೆರಿಕ ಹಾಗೂ ಯುರೋಪಿನ ಹಲವು ದೇಶಗಳಲ್ಲಿ ಇಸ್ರೇಲ್ ವಿರುದ್ಧ ಸಾರ್ವಜನಿಕ ಆಕ್ರೋಶ ಮತ್ತು ಟೀಕೆಗಳು ಹೆಚ್ಚಾಗುತ್ತಿವೆ.

**ಹಮಾಸ್ ವಿರುದ್ಧ ಇಸ್ರೇಲ್ ಅತಿದೊಡ್ಡ ಕಾರ್ಯಾಚರಣೆ:** ಗಾಜಾ ಪಟ್ಟಿಯಲ್ಲಿ ಸೈನಿಕ ನಿಯಂತ್ರಣವನ್ನು ಮತ್ತಷ್ಟು ವಿಸ್ತರಿಸಲು ಮುಂದಾಗಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, 70 ಶೇಕಡಾ ಪ್ರದೇಶವನ್ನು ವಶಕ್ಕೆ ಪಡೆಯುವಂತೆ ಸೇನೆಗೆ ನಿರ್ದೇಶನ ನೀಡಿದ್ದಾರೆ.ಹಮಾಸ್ ವಿರುದ್ಧದ ಕಾರ್ಯಾಚರಣೆ ತೀವ್ರಗೊಳ್ಳುತ್ತಿರುವ ನಡುವೆಯೇ ಈ ಹೇಳಿಕೆ ಮಧ್ಯಪ್ರಾಚ್ಯದಲ್ಲಿ ಮತ್ತೆ ಉದ್ವಿಗ್ನತೆ ಹೆಚ್ಚಿಸಿದೆ.ಪಶ್ಚಿಮ ತೀರದಲ್ಲಿನ ಇಸ್ರೇಲಿ ವಸಾಹತು ಪ್ರದೇಶದಲ್ಲಿ ನಡೆದ ಸಮಾವೇಶದಲ್ಲಿ ಮಾತನಾಡಿದ ಅವರು, ಗಾಜಾದ ಸುಮಾರು 60 ಶೇಕಡಾ ಪ್ರದೇಶವನ್ನು ಇಸ್ರೇಲ್ ಸೇನೆ ತನ್ನ ನಿಯಂತ್ರಣಕ್ಕೆ ತೆಗೆದುಕೊಂಡಿದೆ ಎಂದು ಘೋಷಿಸಿದ್ದಾರೆ.

### ಗಾಜಾ ಶಾಂತಿ ಯೋಜನೆಗೆ ಬೆಂಬಲ

ನೆತನ್ಯಾಹು ಅವರೊಂದಿಗಿನ ಮಾತುಕತೆಯ ಸಮಯದಲ್ಲಿ, ಪ್ರಧಾನಿ ಮೋದಿ ಗಾಜಾ ಶಾಂತಿ ಯೋಜನೆಯನ್ನು ಬೆಂಬಲಿಸಿದರು ಮತ್ತು ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳಲು ಒತ್ತಾಯಿಸಿದರು. ಪ್ರಧಾನಿ ಮೋದಿ ಮತ್ತು ನೆತನ್ಯಾಹು ನಡುವಿನ ಸಂಬಂಧವನ್ನು ಭಾರತ ಮತ್ತು ಇಸ್ರೇಲ್ ನಡುವಿನ ಬಲವಾದ ಪಾಲುದಾರಿಕೆ ಎಂದು ಹೆಚ್ಚಾಗಿ ನೋಡಲಾಗುತ್ತದೆ.ಈ ನಡುವೆ ಇಸ್ರೇಲ್ ಜೊತೆ ಪರಸ್ಪರ ಪ್ರಯೋಜನಕಾರಿ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಭಾರತ ಶೀಘ್ರದಲ್ಲೇ ಅಂತಿಮ ರೂಪ ನೀಡಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ರಕ್ಷಣಾ ಕ್ಷೇತ್ರದಲ್ಲಿ ಜಂಟಿ ಅಭಿವೃದ್ಧಿ, ಉತ್ಪಾದನೆ ಮತ್ತು ತಂತ್ರಜ್ಞಾನ ವರ್ಗಾವಣೆಯನ್ನು ಎರಡೂ ದೇಶಗಳು ಅನುಸರಿಸುತ್ತವೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಜೆರುಸಲೆಮ್‌ನಲ್ಲಿ ನಿಯೋಗ ಮಟ್ಟದ ಮಾತುಕತೆಯ ನಂತರ ಪ್ರಧಾನಿ ಮೋದಿ ಹೇಳಿದರು. ಈ ಎರಡು ದಿನಗಳ ಅಧಿಕೃತ ಭೇಟಿಯ ಭಾಗವಾಗಿ, ಪ್ರಧಾನ ಮಂತ್ರಿಯವರು ಇಸ್ರೇಲ್ ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರನ್ನೂ ಭೇಟಿಯಾದರು, ಈ ಸಭೆಯು ಭಾರತ-ಇಸ್ರೇಲ್ ಪಾಲುದಾರಿಕೆಯ ಬೆಳೆಯುತ್ತಿರುವ ಕಾರ್ಯತಂತ್ರದ ಆಳ ಮತ್ತು ಜಾಗತಿಕ ಪ್ರಸ್ತುತತೆಯನ್ನು ಒತ್ತಿಹೇಳಿತು.

ಜಗತ್ತಿಗೆ ಸೇವೆ ಸಲ್ಲಿಸಬಲ್ಲದು ಎಂದು ಬಣ್ಣಿಸಿದ ಪ್ರಧಾನಿ ಮೋದಿ, ಭಾರತ ಮತ್ತು ಇಸ್ರೇಲ್, ಜಾಗತಿಕ ಒಳಿತಿಗಾಗಿ ಪ್ರಬಲ ಶಕ್ತಿಯಾಗಿರಬಹುದು ಎಂದು ಹೇಳಿದರು. ಜಲ ಸಂರಕ್ಷಣೆ ಮತ್ತು ಕೃಷಿಯಂತಹ ಕ್ಷೇತ್ರಗಳಲ್ಲಿ ಇಸ್ರೇಲ್‌ನ ಪರಿಣತಿಯನ್ನು ಅವರು ಎತ್ತಿ ತೋರಿಸಿದರು, ಭಾರತವು ಉತ್ತೇಜಕ ಫಲಿತಾಂಶಗಳೊಂದಿಗೆ ಹಲವಾರು ಇಸ್ರೇಲಿ ಅತ್ಯುತ್ತಮ ಅಭ್ಯಾಸಗಳನ್ನು ಅಳವಡಿಸಿಕೊಂಡಿದೆ ಎಂದು ಹೇಳಿದರು. ಭಾರತದ ತ್ವರಿತ ಆರ್ಥಿಕ ಬೆಳವಣಿಗೆ ಮತ್ತು ವಿಸ್ತರಿಸುತ್ತಿರುವ ಜಾಗತಿಕ ಪ್ರಭಾವವನ್ನು ಅಧ್ಯಕ್ಷ ಹರ್ಜೋಗ್ ಶ್ಲಾಘಿಸಿದರು, ಭಾರತವನ್ನು ಮಧ್ಯಪ್ರಾಚ್ಯದ ಉತ್ತಮ ಭವಿಷ್ಯದ ಅತ್ಯಗತ್ಯ ಭಾಗ ಎಂದು ಕರೆದರು.

### ಭಾರತ ಮತ್ತು ಇಸ್ರೇಲ್ ಸಂಬಂಧ ಬಲಗೊಳ್ಳುತ್ತಿದೆ

ಫೆಬ್ರವರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್‌ಗೆ ನೀಡಿದ ಐತಿಹಾಸಿಕ ಭೇಟಿಯ ನಂತರ ನೆತನ್ಯಾಹು ಅವರ ಈ ಹೇಳಿಕೆಗಳು ಬಂದಿವೆ. ಇದು ದ್ವಿಪಕ್ಷೀಯ ಸಂಬಂಧಗಳನ್ನು ಹೊಸ ಮಟ್ಟಕ್ಕೆ ಏರಿಸಿತು. ಜೆರುಸಲೆಮ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ, ಪ್ರಧಾನಿ ಮೋದಿ ಮತ್ತು ನೆತನ್ಯಾಹು ಭಾರತ-ಇಸ್ರೇಲ್ ಸಂಬಂಧಗಳನ್ನು ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯ ಮಟ್ಟಕ್ಕೆ ಏರಿಸುವುದಾಗಿ ಘೋಷಿಸಿದರು. ಪ್ರಧಾನಿ ಮೋದಿ ಇಸ್ರೇಲಿ ಸಂಸತ್ತನ್ನು (ನೆಸ್ಸೆಟ್) ಉದ್ದೇಶಿಸಿ ಮಾತನಾಡಿದರು. ನಾಯಕರ ನಡುವಿನ ದ್ವಿಪಕ್ಷೀಯ ಸಭೆಯಲ್ಲಿ, ರಕ್ಷಣೆ, ವ್ಯಾಪಾರ, ತಂತ್ರಜ್ಞಾನ, ಸೈಬರ್ ಭದ್ರತೆ, ಕೃಷಿ, ಇಂಧನ ಮತ್ತು ಕೃತಕ ಬುದ್ಧಿಮತ್ತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಎರಡೂ ಕಡೆಯವರು ಒಪ್ಪಿಕೊಂಡರು. ಅರೆವಾಹಕಗಳು, ಕ್ವಾಂಟಮ್ ತಂತ್ರಜ್ಞಾನ, ಫಿನ್‌ಟೆಕ್, ಜೈವಿಕ ತಂತ್ರಜ್ಞಾನ ಮತ್ತು ಡಿಜಿಟಲ್ ಆರೋಗ್ಯ ರಕ್ಷಣೆ ಕ್ಷೇತ್ರಗಳಲ್ಲಿನ ಕೆಲಸವನ್ನು ವಿಸ್ತರಿಸುವ ಬಗ್ಗೆಯೂ ಇಬ್ಬರೂ ನಾಯಕರು ಚರ್ಚಿಸಿದರು.

### ನಾವೀನ್ಯತೆ-ಚಾಲಿತ ಬೆಳವಣಿಗೆಗೆ ಒತ್ತು

### ಶೇ.70ರಷ್ಟು ಗಾಜಾ ಪ್ರದೇಶ ವಶಕ್ಕೆ ನೆತನ್ಯಾಹು ಆದೇಶ!

ಹಮಾಸ್ ಮೇಲೆ ಎಲ್ಲಾ ದಿಕ್ಕಿನಿಂದ ಒತ್ತಡ ಹೆಚ್ಚಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಗಾಜಾದ 70 ಶೇಕಡಾ ಪ್ರದೇಶವನ್ನು ಹಿಡಿತಕ್ಕೆ ತೆಗೆದುಕೊಳ್ಳುವಂತೆಯೂ ಸೇನೆಗೆ ನಿರ್ದೇಶನ ನೀಡಿರುವುದಾಗಿ ಅವರು ಬಹಿರಂಗಪಡಿಸಿದ್ದಾರೆ. ನಾವು ಈಗ ಹಮಾಸ್ ಅನ್ನು ಎಲ್ಲಾ ದಿಕ್ಕಿನಿಂದ ಒತ್ತಡಕ್ಕೆ ಒಳಪಡಿಸುತ್ತಿದ್ದೇವೆ. ಈಗಾಗಲೇ 60 ಶೇಕಡಾ ಪ್ರದೇಶ ನಮ್ಮ ಹಿಡಿತದಲ್ಲಿದೆ. ಮುಂದಿನ ಹಂತದಲ್ಲಿ ಅದನ್ನು 70 ಶೇಕಡಾಗೆ ಹೆಚ್ಚಿಸುತ್ತೇವೆ ಎಂದು ಹೇಳಿದ್ದಾರೆ. ಇದರಿಂದ ಗಾಜಾದಲ್ಲಿ ಇಸ್ರೇಲ್ ತನ್ನ ಸೈನಿಕ ಹಸ್ತಕ್ಷೇಪವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿರ್ಧಾರಕ್ಕೆ ಬಂದಿದೆ. ಈಗಾಗಲೇ ಕದನ ವಿರಾಮ ಒಪ್ಪಂದ ಜಾರಿಯಲ್ಲಿದ್ದರೂ, ನೆಲಮಟ್ಟದಲ್ಲಿ ಹಿಂಸಾಚಾರ ಮತ್ತು ದಾಳಿಗಳು ಮುಂದುವರಿದಿವೆ. ಮೊದಲ ಹಂತದ ಕದನ ವಿರಾಮದಡಿಯಲ್ಲಿ, 2023ರ ಅಕ್ಟೋಬರ್ 7ರಂದು ಹಮಾಸ್ ನಡೆಸಿದ ದಾಳಿಯ ವೇಳೆ ಅಪಹರಿಸಲ್ಪಟ್ಟ ಇಸ್ರೇಲಿ ಬಂಧಿತರ ಬಿಡುಗಡೆ ಹಾಗೂ ಇಸ್ರೇಲ್ ಕಾರಾಗೃಹದಲ್ಲಿದ್ದ ಪ್ಯಾಲೆಸ್ಟೀನಿಯನ್ ಕೈದಿಗಳ ವಿನಿಮಯ ಪ್ರಕ್ರಿಯೆ ನಡೆದಿತ್ತು.

## ಹೊಸ ಸಚಿವ ಸಂಪುಟ ರಚನೆಯ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಆಗಿಲ್ಲ

• ಉದಯವಾಹಿನಿ, ಬೆಂಗಳೂರು



ರಾಜ್ಯದಲ್ಲಿ ಹೊಸ ಸಚಿವ ಸಂಪುಟ ರಚನೆಯ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಆಗಿಲ್ಲ. ನಾಳೆ ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ಸಭೆ ಕರೆಯಲಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚೆಗಳು ಇನ್ನೂ ನಡೆಯುತ್ತಿವೆ. ಪಕ್ಷದ ಎಲ್ಲಾ ಶಾಸಕರುಗಳಿಗೆ ಸಭೆಗೆ ಬೆಂಗಳೂರಿನಲ್ಲಿಯೇ ಇರುವಂತೆ ತಿಳಿಸಲಾಗಿದೆ ಎಂದು ಹೇಳಿದರು. 'ಎಲ್ಲವೂ ಹೈಕಮಾಂಡ್ ಕೋರಿಕೆಯಂತೆ ನಡೆಯುತ್ತಿದೆ. ಏನನ್ನೂ ನಿರ್ಧರಿಸಲಾಗಿಲ್ಲ. ನಾಳೆ ನಾವು ಸಿಎಲ್‌ಪಿ ಸಭೆ ಕರೆದಿದ್ದೇವೆ, ನಮ್ಮ ಕೇಂದ್ರ ನಾಯಕರು ಬರಬೇಕು. ನಾವು ನಮ್ಮ ಹೈಕಮಾಂಡ್ ಜೊತೆ ಚರ್ಚಿಸಬೇಕು. ಎಲ್ಲಾ ಶಾಸಕರು ಬೆಂಗಳೂರಿನಲ್ಲಿಯೇ ಇರುವಂತೆ ನಾವು ಕೇಳಿಕೊಂಡಿದ್ದೇವೆ. ಅದನ್ನು ಹೊರತುಪಡಿಸಿ, ಬೇರೆ ಏನೂ ಇಲ್ಲ' ಎಂದು ಸ್ಪಷ್ಟಪಡಿಸಿದರು.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ ರಾಜ್ಯದಲ್ಲಿ ನೂತನ ಸರ್ಕಾರ ರಚನೆಗೆ ರಾಜಕೀಯ ಬೆಳವಣಿಗೆಗಳು ಚುರುಕುಗೊಂಡಿದೆ. ಮುಂದಿನ ಸಿಎಂ ಡಿ. ಕೆ. ಶಿವಕುಮಾರ್ ಎಂದು ಹೇಳಲಾಗುತ್ತಿದೆ. ಆದರೆ ಇನ್ನೂ ಸಹ ಸ್ಪಷ್ಟ ಮಾಹಿತಿ ಹೊರಬಿದ್ದಿಲ್ಲ. ನಾಳೆ ಸಂಜೆ 4 ಗಂಟೆಗೆ ವಿಧಾನಸೌಧದಲ್ಲಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯಲಿರುವ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಅಂತಿಮ ತೀರ್ಮಾನ ಹೊರಬೀಳಲಿದೆ.

ಹೊಸ ಸರ್ಕಾರ ರಚನೆ ಕುರಿತು ಚರ್ಚಿಸಲು ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಡಿಸಿಎಂ ಡಿ. ಕೆ. ಶಿವಕುಮಾರ್ ಮತ್ತು ಮಾಜಿ ಸಚಿವ ಕೆ. ಜೆ. ಜಾರ್ಜ್ ಅವರು ಶುಕ್ರವಾರ ನವದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಶಿವಕುಮಾರ್ ಇಂದು ಮುಂಜಾನೆ ರಾಷ್ಟ್ರ ರಾಜಧಾನಿಯ ಹೋಟೆಲ್‌ನಲ್ಲಿ ಕಾಂಗ್ರೆಸ್‌ನ ಇತರ ನಾಯಕರನ್ನು ಭೇಟಿಯಾದರು.

ಕರ್ನಾಟಕ ಸಚಿವ ಸಂಪುಟ ಪುನರ್ ರಚನೆ, ರಾಜ್ಯಸಭಾ ಚುನಾವಣೆ ಮತ್ತು ಇತರ ವಿಷಯಗಳ ಕುರಿತು ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್ ಅವರೊಂದಿಗೆ ಚರ್ಚೆ ನಡೆಸಿದರು.ಮುಂದಿನ ಮುಖ್ಯಮಂತ್ರಿ ಬಗ್ಗೆ ತೀವ್ರ ಊಹಾಪೋಹಗಳ ನಡುವೆ, ಶನಿವಾರ ನಡೆಯಲಿರುವ ಸಭೆಯಲ್ಲಿ ಡಿ. ಕೆ. ಶಿವಕುಮಾರ್ ಅವರನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ನಾಯಕರನ್ನಾಗಿ ಆಯ್ಕೆ ಮಾಡುವ ಸಾಧ್ಯತೆಯಿದೆ ಎಂದು ಕಾಂಗ್ರೆಸ್ ಶಾಸಕ ಅಶೋಕ್ ಪಟ್ಟಣ್ ಮಾಧ್ಯಮದವರಿಗೆ ಹೇಳಿದ್ದಾರೆ. ಹೊಸ ಕರ್ನಾಟಕ ಸಚಿವ ಸಂಪುಟದಲ್ಲಿ ಹಲವಾರು ಹೊಸ ಮುಖಗಳು ಸೇರುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

ಇದಕ್ಕೂ ಮುನ್ನ, ಹಿರಿಯ ಕಾಂಗ್ರೆಸ್ ನಾಯಕ ವೀರಪ್ಪ ಮೊಯ್ಲಿ ಈ ಬೆಳವಣಿಗೆಯನ್ನು ಸುಗಮ ಪರಿವರ್ತನೆ ಎಂದು ಬಣ್ಣಿಸಿದ್ದರು. ಸಿದ್ದರಾಮಯ್ಯ ಎರಡನೇ ಅವಧಿಗೆ ಅಧಿಕಾರ ವಹಿಸಿಕೊಳ್ಳುವ ಸಂದರ್ಭದಲ್ಲಿ ನಾಯಕತ್ವ ಬದಲಾವಣೆ ಯೋಜನೆ ಆಗಿತ್ತು. ಸಿದ್ದರಾಮಯ್ಯ ಪಕ್ಷ ಮತ್ತು ರಾಜ್ಯ ಎರಡಕ್ಕೂ ಪರಿಣಾಮಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಹೊಸ ನಾಯಕತ್ವದಲ್ಲಿ ಕಾಂಗ್ರೆಸ್ ಸರ್ಕಾರ ಸ್ಥಿರವಾಗಿರಲಿದೆ ಎಂದು ಮೊಯ್ಲಿ ವಿಶ್ವಾಸ ವ್ಯಕ್ತಪಡಿಸಿದರು.

## ವಚನಾನಂದ ಸ್ವಾಮೀಜಿ ಪ್ರಕರಣ: ನಿರೀಕ್ಷಣಾ ಜಾಮೀನು ರದ್ದು ಕೋರಿದ್ದ ಅರ್ಜಿ ವಿಚಾರಣೆ ಮುಂದಕ್ಕೆ

• ಉದಯವಾಹಿನಿ, ಬೆಂಗಳೂರು:



ಹರಿಹರದ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣ ಸಂಬಂಧ ಹರಿಹರ ಗ್ರಾಮಾಂತರ ಠಾಣೆ ಪೊಲೀಸರು ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ರದ್ದು ಕೋರಿದ್ದ ಅರ್ಜಿ ವಿಚಾರಣೆಯನ್ನು ನ್ಯಾಯಾಲಯ ಜೂನ್ 3ಕ್ಕೆ ಮುಂದೂಡಿದೆ.

ಈ ಬೆನ್ನಲ್ಲೇ ಸ್ವಾಮೀಜಿ ಪರ ವಕೀಲ ಎಸ್.ವಿ.ಪಾಟೀಲ್ ಅವರು ತಕರಾರು ಅರ್ಜಿ ಸಲ್ಲಿಸಿದ್ದಾರೆ. ವಚನಾನಂದ ಸ್ವಾಮೀಜಿ ಪಡೆದಿರುವ ನಿರೀಕ್ಷಣಾ ಜಾಮೀನು ರದ್ದು ಕೋರಿ ಹರಿಹರ ಗ್ರಾಮಾಂತರ ಠಾಣೆ ಪೊಲೀಸರು ಮೇ 13ಕ್ಕೆ ಅರ್ಜಿ ಸಲ್ಲಿಸಿದ್ದರು. ಅದರ ವಿಚಾರಣೆ ಇಂದು ನಡೆಯಬೇಕಿತ್ತು. ಆದರೆ ನ್ಯಾಯಾಲಯ ಜೂನ್ 3ಕ್ಕೆ ವಿಚಾರಣೆ ಮುಂದೂಡಿದೆ. ನಾವು ಸ್ವಾಮೀಜಿ ಪರವಾಗಿ ತರಕಾರು ಅರ್ಜಿ ಸಲ್ಲಿಸಿದ್ದೇವೆ. ಇನ್ನು ಸ್ವಾಮೀಜಿ ವಿಚಾರಣೆಗಾಗಿ ನ್ಯಾಯಾಲಯಕ್ಕೆ ಬರುವುದಿಲ್ಲ ಎಂದು ವಕೀಲ ಎಸ್.ವಿ. ಪಾಟೀಲ್ ತಿಳಿಸಿದರು. ಸ್ವಾಮೀಜಿ ವಿರುದ್ಧ ಮಕ್ಕಳ ದುರ್ಬಳಕೆ ಹಾಗೂ ದೌರ್ಜನ್ಯ ಎಸಗಿದ ಆರೋಪದಡಿ ದಾಖಲಾಗಿದ್ದ ಪ್ರಕರಣದಲ್ಲಿ ಬಂಧನ ಭೀತಿ ಎದುರಿಸುತ್ತಿದ್ದ ಸ್ವಾಮೀಜಿ, ಎಪ್ರಿಲ್ 21ರಂದು ಜಿಲ್ಲಾ ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಗೆ ಜಿಲ್ಲಾ ನ್ಯಾಯಾಲಯ ಷರತ್ತುಗಳೊಂದಿಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು. ವಚನಾನಂದ ಸ್ವಾಮೀಜಿ ವಿರುದ್ಧ ಮಠದ ಬಾಲಕನೋರ್ವನ ತಾಯಿ ನೀಡಿದ ದೂರಿನ ಮೇರೆಗೆ ಪ್ರಕರಣ ಪೋಕ್ಸೋ ಪ್ರಕರಣ ದಾಖಲಾಯಿತು. ಈಗಾಗಲೇ ಇದೇ ಪ್ರಕರಣದಲ್ಲಿ ಸ್ವಾಮೀಜಿಯ ವಿಚಾರಣೆ ನಡೆದು, ಮೆಡಿಕಲ್ ಟೆಸ್ಟ್ ಕೂಡ ನಡೆಸಲಾಗಿದೆ.

ಪೂರ್ವ ವಲಯ ಐಜಿಪಿ ಡಾ.ಬಿ.ಆರ್.ರವಿಕಾಂತೇಗೌಡ ಅವರ ಸೂಚನೆಯಂತೆ ವಚನಾನಂದ ಸ್ವಾಮೀಜಿ ಪೋಕ್ಸೋ ಪ್ರಕರಣದ ತನಿಖಾಧಿಕಾರಿ ಎಸ್‌ಐ ಮಂಜುಳಾ ಅವರನ್ನು ಎಸ್ಪಿ ಡಾ.ಎಚ್.ಟಿ. ಶೇಖರ್ ಅವರು ವರ್ಗಾವಣೆ ಮಾಡಿ ಆದೇಶ ಮಾಡಿದ್ದರು.

ಇನ್ನು ವಚನಾನಂದ ಸ್ವಾಮೀಜಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾರೆ, ಹಿಂಸೆ ನೀಡುತ್ತಾರೆ ಎಂದು ಸ್ವತಃ ಮಕ್ಕಳು ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧಿಕಾರಿಗಳು ಮಠಕ್ಕೆ ಭೇಟಿ ನೀಡಿ ಸ್ವಾಮೀಜಿಯ ವಿಚಾರಣೆ ನಡೆಸಿದ್ದರು. ಇದಲ್ಲದೆ, ವಚನಾನಂದ ಸ್ವಾಮೀಜಿ ಹರಜಾತ್ರೆ ಸಂದರ್ಭದಲ್ಲಿ ಭಕ್ತರಿಂದ ಲಕ್ಷಾಂತರ ರೂಪಾಯಿ ಹಣ ಪಡೆದು ದುರುಪಯೋಗ ಮಾಡಿದ್ದಾರೆ ಮತ್ತು ಶ್ವಾಸ ಕೇಂದ್ರದ ಸಂಪರ್ಕದಲ್ಲಿದ್ದಾರೆ.

## ಪ್ರತಿಕೂಲ ಹವಾಮಾನ ಪರಿಸ್ಥಿತಿ: ನೈಋತ್ಯ ಮಾನ್ಸೂನ್ ವಿಳಂಬ- ಐಎಂಡಿ ಮಾಹಿತಿ


• ಉದಯವಾಹಿನಿ, ಬೆಂಗಳೂರು

ಮಾನ್ಸೂನ್ ಆರಂಭವನ್ನು ನಿರ್ಧರಿಸುವ ನಿಯತಾಂಕಗಳು ಅಗತ್ಯ ಮಾನದಂಡಗಳನ್ನು ಪೂರೈಸದ ಕಾರಣ ಬಹುನಿರೀಕ್ಷಿತ ನೈಋತ್ಯ ಮಾನ್ಸೂನ್ ಆಗಮನ ವಿಳಂಬವಾಗಿದೆ. ಗಾಳಿಯ ಮಾದರಿ ತೃಪ್ತಿಕರವಾಗಿಲ್ಲ, ಹೊರಹೋಗುವ ದೀರ್ಘ-ತರಂಗ ವಿಕಿರಣವೂ ಸಹ ತೃಪ್ತಿಕರವಾಗಿಲ್ಲ ಎಂದು ಭಾರತ ಹವಾಮಾನ ಇಲಾಖೆಯ (ಐಎಂಡಿ) ಅಧಿಕಾರಿಗಳು ತಿಳಿಸಿದ್ದಾರೆ. ದೀರ್ಘಕಾಲದ ಬಿಸಿ ಮತ್ತು ಶುಷ್ಕ ಹವಾಮಾನಗಳು ಮತ್ತು ಪೂರ್ವ ಮಾನ್ಸೂನ್ ಮಳೆಯ ಮಾದರಿಯಲ್ಲಿನ ವಿರಾಮವು ಮಾನ್ಸೂನ್ ಆಗಮನದ ಮೇಲೆ ಪರಿಣಾಮ ಬೀರಿದೆ. ಪಶ್ಚಿಮ ಗಾಳಿಯು 4 ಕಿ.ಮೀ ಎತ್ತರವನ್ನು ತಲುಪಬೇಕು, ಆದರೆ ಪ್ರಸ್ತುತ ಸುಮಾರು 1.5 ಕಿ.ಮೀ. ಇವೆ ಎಂದು ಐಎಂಡಿ-ಬೆಂಗಳೂರು ಉಸ್ತುವಾರಿ ನಿರ್ದೇಶಕ ಎನ್. ಪುವಿಯರಸನ್ ಹೇಳಿದ್ದಾರೆ. ಕೇರಳದಲ್ಲಿ ಮಳೆಯಾಗುತ್ತಿದೆ, ಆದರೆ ಇದು ಪೂರ್ವ ಮಾನ್ಸೂನ್ ಮಳೆಯಾಗಿದೆ ಎಂದು ಅವರು ಹೇಳಿದರು. ದೀರ್ಘಾವಧಿಯ ಸರಾಸರಿ ಮೌಲ್ಯಮಾಪನದ ಆಧಾರದ ಮೇಲೆ, ಮಾನ್ಸೂನ್ ಪ್ರಾರಂಭವಾಗುವ ಸೂಕ್ತ ದಿನಾಂಕ ಜೂನ್ 1. ಆದರೆ ಈ ವರ್ಷ, ಮೇ 26-27 ರಂದು ಮಾನ್ಸೂನ್ ಆಗಮಿಸಿದೆ ಎಂದು ಊಹಿಸಲಾಗಿತ್ತು.

## ದೆಹಲಿಯಲ್ಲಿ ಸಿದ್ದರಾಮಯ್ಯ: ರಾಹುಲ್, ಖರ್ಗೆ ಭೇಟಿಯಾಗಿ ಚರ್ಚೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಒಂದು ದಿನದ ಬಳಿಕ, ಶುಕ್ರವಾರ ಸಿದ್ದರಾಮಯ್ಯ ಅವರು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ನಾಯರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಸುದೀರ್ಘವಾಗಿ ಚರ್ಚಿಸಿದರು. ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಸಿದ್ದರಾಮಯ್ಯ ಅವರು ಹೈಕಮಾಂಡ್ ಭೇಟಿಯಾಗಲು ದೆಹಲಿಗೆ ತೆರಳಿದ್ದಾರೆ. ಈ ವೇಳೆ ಸಿದ್ದರಾಮಯ್ಯ, ಮೊದಲಿಗೆ ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ ನಿವಾಸಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಲೋಕಸಭಾ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಚರ್ಚೆ ನಡೆಸಿದರು. ಚರ್ಚೆಯ ಬಳಿಕ, ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ, ಸಿದ್ದರಾಮಯ್ಯ ಅವರು ಇಂದು ರಾಹುಲ್ ಗಾಂಧಿ ಅವರನ್ನು ಭೇಟಿಯಾದರು. ಇದು ತುಂಬಾ ಆಹ್ಲಾದಕರವಾದ ಭೇಟಿಯಾಗಿತ್ತು. ಈ ಸಂದರ್ಭದಲ್ಲಿ ಹಲವಾರು ರಾಜಕೀಯ ವಿಷಯಗಳ ಬಗ್ಗೆ ಚರ್ಚಿಸಿದರು ಎಂದು ತಿಳಿಸಿದರು. ಬಳಿಕ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದರು. ಖರ್ಗೆ ಅವರ ನಿವಾಸದಲ್ಲಿ ಕೆಲಹೊತ್ತು ಮಹತ್ವದ ಚರ್ಚೆ ನಡೆಸಿದರು.





ಈ ಸಂದರ್ಭದಲ್ಲಿ ಪುತ್ರ ಯತೀಂದ್ರ ಸಿದ್ದರಾಮಯ್ಯ, ಶಾಸಕರಾದ ಪ್ರಿಯಾಂಕ್ ಖರ್ಗೆ, ಕೆ.ಜೆ.ಜಾರ್ಜ್ ಇತರರು ಉಪಸ್ಥಿತರಿದ್ದರು. ದೆಹಲಿಯಲ್ಲಿ ನಾನು ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದೆ. ಈ ಸಮಯದಲ್ಲಿ ಶಾಸಕರಾದ ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ಡಾ.ಯತೀಂದ್ರ ಸಿದ್ದರಾಮಯ್ಯ ನನ್ನೊಂದಿಗಿದ್ದರು'' ಎಂದು ಸಿದ್ದರಾಮಯ್ಯ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

### ಹೈಕಮಾಂಡ್ ತೀರ್ಮಾನ

ಇದಕ್ಕೂ ಮುನ್ನ ದೆಹಲಿಯಲ್ಲಿ ಮುಂದಿನ ಮುಖ್ಯಮಂತ್ರಿ ಯಾರೆಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ್ದ ಸಿದ್ದರಾಮಯ್ಯ, ಈ ಬಗ್ಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಹಾಗೂ ಹೈಕಮಾಂಡ್ ತೀರ್ಮಾನಿಸಲಿದೆ ಎಂದು ತಿಳಿಸಿದ್ದರು. ಅಲ್ಲದೆ, ಇದೇ ವೇಳೆ, ನೀವು ರಾಜ್ಯಸಭೆ ಬರಲು ನಿರಾಕರಿಸಿದ್ದೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸದೇ ತೆರಳಿದರು. ಹೈಕಮಾಂಡ್ ಜೊತೆಗಿನ ಚರ್ಚೆ ವೇಳೆ, ಸಿದ್ದರಾಮಯ್ಯ ಸಂಪುಟ ರಚನೆ ವೇಳೆ ತಮ್ಮ ಆಪ್ತರನ್ನು ಪರಿಗಣಿಸುವಂತೆ ಮನವಿ ಮಾಡಿರುವ ಸಾಧ್ಯತೆಯಿದೆ. ಬಿಕ್ಕಟ್ಟು ತಲೆದೋರದಂತೆ ಸಿದ್ದರಾಮಯ್ಯ ಮಾರ್ಗದರ್ಶನ ನೀಡುವ ಬಗ್ಗೆ ಹೈಕಮಾಂಡ್ ಚರ್ಚೆ ನಡೆಸಿದೆ ಎನ್ನಲಾಗಿದೆ.

**ಈ ದಿನದ ದರ** ಪೆಟ್ರೋಲ್: 110.89 ₹/L | ಡೀಸೆಲ್ : 98.80₹/L | ಬಂಗಾರ: ₹ 15,764/Gram 24ct ₹14,450 /Gram 22ct | ಬೆಳ್ಳಿ: ₹280.00/Gram

# 9,590 ಕೆಜಿ ಹಾಲಿನ ಪುಡಿ ದುರುಪಯೋಗ: ಅಧಿಕಾರಿಗೆ ಇಲಾಖೆ ನೀಡಿದ್ದ ಶೋಕಾಸ್ ನೋಟಿಸ್ ರದ್ದುಗೊಳಿಸಲು ಹೈಕೋರ್ಟ್ ನಿರಾಕರಣೆ

• ಉದಯವಾಹಿನಿ, ಬೆಂಗಳೂರು

ಸುಮಾರು 9,590 ಕೆ.ಜಿ. ಹಾಲಿನ ಪುಡಿ ದುರುಪಯೋಗಪಡಿಸಿಕೊಂಡ ಆರೋಪದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿಗೆ ಕಾರಣ ಕೇಳಿ ಸರ್ಕಾರ ಜಾರಿ ಮಾಡಿದ್ದ ಶೋಕಾಸ್ ನೋಟಿಸ್‌ಗೆ ತಡೆ ನೀಡಲು ಹೈಕೋರ್ಟ್ ನಿರಾಕರಿಸಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜಾರಿ ಮಾಡಿದ್ದ ಶೋಕಾಸ್ ನೋಟಿಸ್‌ಗೆ ತಡೆ ನೀಡಬೇಕು ಎಂದು ಕೋರಿ ಉತ್ತರ ಕನ್ನಡ ಜಿಲ್ಲೆಯ ಸಿರಸಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿ (ಸಿಡಿಪಿಒ) ಎಂ. ಆರ್. ನಂದ ಕುಮಾರ್ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನಂತ್ ರಾಮನಾಥ್ ಹೆಗಡೆ ಮತ್ತು ನ್ಯಾಯಮೂರ್ತಿ ಗೀತಾ ಕೆ.ಬಿ. ಅವರನ್ನೊಳಗೊಂಡ ವಿಭಾಗೀಯ ಪೀಠವು ಈ ಆದೇಶ ಮಾಡಿದೆ. ಅಲ್ಲದೇ, ಅರ್ಜಿದಾರರಿಗೆ ಶೋಕಾಸ್


ಉದಯವಾಹಿನಿ ಚಿತ್ರ

ನೋಟಿಸ್ ಜಾರಿ ಮಾಡಲಾಗಿದೆ. ಆದರೆ, ಅದಕ್ಕೆ ಸಂಬಂಧಿಸಿದಂತೆ ಅರ್ಜಿದಾರರು ಶೋಕಾಸ್ ನೋಟಿಸ್‌ಗೆ ಉತ್ತರಿಸಿಲ್ಲ. ಅದಕ್ಕೆ ಸಂಬಂಧಿಸಿದಂತೆ ವಿಚಾರಣೆಯೂ ನಡೆದಿಲ್ಲ. ಹೀಗಾಗಿ ಅರ್ಜಿದಾರ ಅಧಿಕಾರಿ ತಮಗೆ ನೀಡಿರುವ ನೋಟಿಸ್‌ಗೆ ಸೂಕ್ತ ವಿವರಣೆ ನೀಡಲು ಸ್ವತಂತ್ರರಾಗಿದ್ದಾರೆ. ಪ್ರಕರಣದ ಕುರಿತು ಇಲಾಖೆಯ ತನಿಖೆ ಇನ್ನು ಆರಂಭವಾಗದ ಕಾರಣ ಅರ್ಜಿಯ ವಿಚಾರಣೆಗೆ ಅರ್ಹತೆ ಇಲ್ಲ. ಆದ್ದರಿಂದ ಈ ಹಂತದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ತಿಳಿಸಿ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿತು.

ಜತೆಗೆ, ಅರ್ಜಿದಾರ ನಂದಕುಮಾರ್ ಅವರು ಮುಂದಿನ 15 ದಿನಗಳಲ್ಲಿ ನೋಟಿಸ್‌ಗೆ ಉತ್ತರ ನೀಡಬೇಕು. ಆ ಉತ್ತರವನ್ನು ಪೂರ್ವಾಗ್ರಹವಿಲ್ಲದೇ ಪರಿಶೀಲಿಸಿ ಕಾನೂನು ಪ್ರಕಾರವಾಗಿ ಕ್ರಮ ಕೈಗೊಳ್ಳಬೇಕು ಎಂದು ಪೀಠ ತನ್ನ ಆದೇಶದಲ್ಲಿ ಸ್ಪಷ್ಟಪಡಿಸಿದೆ.

### ಪ್ರಕರಣದ ಹಿನ್ನೆಲೆ

**ಹಾನಗಲ್‌ನಲ್ಲಿ ಸಿಡಿಪಿಒ ಆಗಿ ನಂದ ಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಕೆಲವೇ ದಿನಗಳಲ್ಲಿ, ಸುಮಾರು 9,590 ಕೆಜಿ ಹಾಲಿನ ಪುಡಿಯನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಸಂಬಂಧ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ 2026 ಮಾರ್ಚ್ 10 ರಂದು ಕಾರಣ ಕೇಳಿ ನೋಟಿಸ್ ಜಾರಿ ಮಾಡಿದ್ದರು. ಇದನ್ನು ಪ್ರಶ್ನಿಸಿ ನಂದಕುಮಾರ್ ಕರ್ನಾಟಕ ರಾಜ್ಯ ಆಡಳಿತಾತ್ಮಕ ನ್ಯಾಯಮಂಡಳಿ (ಕೆಎಟಿ)ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ್ದ ಕೆಎಟಿ ಅರ್ಜಿ ವಜಾಗೊಳಿಸಿತ್ತು. ಇದನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಕಡಿಮೆ ಅವಧಿಯಲ್ಲಿ ಇಷ್ಟೊಂದು ದೊಡ್ಡ ಪ್ರಮಾಣದ ಹಾಲಿನ ಪುಡಿ ದುರುಪಯೋಗಪಡಿಸಿಕೊಳ್ಳಲು ಸಾಧ್ಯವಿಲ್ಲ.**

## ಮಾವಿನ ಹಣ್ಣು ಮಾರಾಟಕ್ಕೆ ಹಾಪ್‌ಕಾಮ್ಸ್‌ನಿಂದ 'ರೈತರ ಅಂಚೆ' ಕಾರ್ಯಕ್ರಮಕ್ಕೆ ಇಂದು ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಹಾಪ್‌ಕಾಮ್ಸ್ ಮತ್ತು ಭಾರತೀಯ ಅಂಚೆ ಸಹಯೋಗದಲ್ಲಿ ರೈತರ ಅಂಚೆ ಎಂಬ ವಿನೂತನ ಆನ್‌ಲೈನ್ ಮಾರಾಟ ಜಾಲ ವಿಸ್ತರಣಾ ಕಾರ್ಯಕ್ರಮಕ್ಕೆ ಇಂದು ಚಾಲನೆ ನೀಡಲಾಗುತ್ತಿದೆ. ಪ್ರಧಾನ ಅಂಚೆ ಕಚೇರಿ (ಜಿಪಿಒ)ಯ ಆರನೇ ಮಹಡಿಯ ಅಂಚೆ ಇಲಾಖೆಯ ಸಭಾಂಗಣದಲ್ಲಿ ರೈತರ ಅಂಚೆ ಆನ್‌ಲೈನ್ ಮಾರಾಟ ಜಾಲಕ್ಕೆ ಚಾಲನೆ ದೊರೆಯಲಿದೆ. ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ಮಹಾನಗರದ ವಿಸ್ತೀರ್ಣಕ್ಕೆ ಅನುಗುಣವಾಗಿ ಎಲ್ಲಾ ಬಡಾವಣೆಗಳಲ್ಲೂ ಹಾಪ್‌ಕಾಮ್ಸ್ ಮಾರಾಟ ಮಳಿಗೆಗಳು ಇಲ್ಲ.

ಹೀಗಾಗಿ ಎಲ್ಲಾ ಗ್ರಾಹಕರಿಗೆ ಹಾಪ್‌ಕಾಮ್ಸ್‌ನ ತಾಜಾ ಹಣ್ಣು ಮತ್ತು ತರಕಾರಿಗಳನ್ನು ಮನೆಬಾಗಿಲಿಗೆ ತಲುಪಿಸಿ ಸೌಲಭ್ಯ ವಿಸ್ತರಿಸುವ ದೃಷ್ಟಿಯಿಂದ ಅಂಚೆ ಇಲಾಖೆ ಸಹಯೋಗದಲ್ಲಿ ರೈತರ ಅಂಚೆ ಎಂಬ ಹೊಸ ಆನ್‌ಲೈನ್ ವ್ಯಾಪಾರ ಯೋಜನೆಯನ್ನು ಪರಿಚಯಿಸಲಾಗುತ್ತಿದೆ ಎಂದು ಹಾಪ್‌ಕಾಮ್ಸ್ ಅಧ್ಯಕ್ಷ ಎ.ಎಸ್.ಚಂದ್ರೇಗೌಡ ಹಾಗೂ ವ್ಯವಸ್ಥಾಪಕ ನಿರ್ದೇಶಕ ಮಿರ್ಜಿ ಉಮೇಶ ಶಂಕರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹಾಪ್‌ಕಾಮ್ಸ್ ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಗ್ರಾಹಕರು ಲಾಗ್ ಇನ್ ಆಗಿ ಬೇಕಾಗುವ ಹಣ್ಣು, ತರಕಾರಿಗಳನ್ನು ಆಯ್ಕೆ ಮಾಡಿ ಆನ್‌ಲೈನ್‌ನಲ್ಲಿ ಹಣ ಪಾವತಿಸಿ ಆರ್ಡರ್ ಮಾಡಿದಲ್ಲಿ 24 ಗಂಟೆಯೊಳಗಾಗಿ ಭಾರತೀಯ ಅಂಚೆ ಇಲಾಖೆಯು ಪತ್ರಗಳನ್ನು ತಲುಪಿಸುವಂತೆಯೇ ಗ್ರಾಹಕರ ಮನೆ ಬಾಗಿಲಿಗೆ ಹಣ್ಣು ಮತ್ತು ತರಕಾರಿಗಳನ್ನು ತಲುಪಿಸುತ್ತದೆ ಎಂದಿದ್ದಾರೆ.ಪ್ರಸ್ತುತ ಮಾವು ಮೇಳ ಚಾಲ್ತಿಯಲ್ಲಿದ್ದು, ನೈಸರ್ಗಿಕವಾಗಿ ಮಾಗಿಸಿದ ವಿವಿಧ ತಳಿಗಳ ಉತ್ಕೃಷ್ಟ ಮಾವಿನ ಹಣ್ಣುಗಳು, 3 ಕೆಜಿ ಹಾಗೂ 5 ಕೆಜಿ ಬಾಕ್ಸ್‌ಗಳಲ್ಲಿ ಲಭ್ಯವಿದ್ದು, ಆನ್‌ಲೈನ್‌ನಲ್ಲಿ ಖರೀದಿಸಬಹುದಾಗಿದೆ.ಇದರಿಂದ ಗ್ರಾಹಕರಿಗೆ ರೈತರಿಂದ ಖರೀದಿಸಿದ ತಾಜಾ ಹಣ್ಣು, ತರಕಾರಿಗಳು ದೊರೆಯಲಿದ್ದು, ಬಹು ಆಯ್ಕೆಯ ವಿವಿಧ ಹಣ್ಣು, ತರಕಾರಿಗಳು ದೊರೆಯಲಿವೆ. ಗ್ರಾಹಕರು ತಾವಿರುವ ಸ್ಥಳದಿಂದಲೇ ಅನುಕೂಲವಾದ ವೇಳೆಯಲ್ಲಿ ಖರೀದಿಸಿ ಸಮಯ ಉಳಿತಾಯ ಮಾಡಬಹುದಾಗಿದೆ.

## 2028ರಲ್ಲಿ ಕಾಂಗ್ರೆಸ್ 40 ಸ್ಥಾನ ಕೂಡಾ ಗೆಲ್ಲಲ್ಲ- ಲಖನ್ ಜಾರಕಿಹೊಳಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿದ್ದರಾಮಯ್ಯ ಅವರನ್ನು ಕೆಳಗಿಳಿಸುವ ಮೂಲಕ ರಾಜ್ಯದಲ್ಲಿ ಕಾಂಗ್ರೆಸ್ ಪತನವಾಗಲಿದೆ ಎಂದು ವಿಧಾನಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಹೇಳಿದ್ದಾರೆ. ಸಿದ್ದರಾಮಯ್ಯರ ಆರ್ಥಿಕ ಶಿಸ್ತಿನಿಂದ ಗ್ಯಾರಂಟಿ ಯೋಜನೆಗಳಿಗೆ ಯಾವುದೇ ಸಮಸ್ಯೆಯಾಗಿರಲಿಲ್ಲ. ಆದರೆ ಇನ್ನು ಮುಂದೆ ಯಾವುದೇ ಗ್ಯಾರಂಟಿ ಯೋಜನೆ ಮುಂದುವರೆಯುವುದಿಲ್ಲ ಎಂದು ಮಾಧ್ಯಮಗಳಿಗೆ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ಕಿಡಿಕಾರಿದ್ದಾರೆ. ಸಿದ್ದರಾಮಯ್ಯ ಕಣ್ಣೀರು 228ರಲ್ಲಿ ಜ್ವಾಲಾಮುಖಿಯಾಗಿ ಸ್ಫೋಟಿಸಲಿದೆ. ಕಾಂಗ್ರೆಸ್ 40 ಸ್ಥಾನ ಕೂಡಾ ಗೆಲ್ಲುವುದಕ್ಕೆ ಆಗುವುದಿಲ್ಲ. ಇನ್ನು ಮುಂದೆ ಪರಿಸ್ಥಿತಿ ಹದಗೆಡಲಿದೆ ಎಂದು ಅವರು ಹೇಳಿದ್ದಾರೆ. ಮಾಸ್ ಲೀಡರ್ ಒಬ್ಬರನ್ನು ಅಧಿಕಾರದಿಂದ ಕಿತ್ತೊಗೆಯುವುದನ್ನು ಜನ ಸಹಿಸುವುದಿಲ್ಲ. ಯಡಿಯೂರಪ್ಪ ಅವರನ್ನು ಕೆಳಗಿಳಿಸಿ ಬಸವರಾಜ ಬೊಮ್ಮಾಯಿ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿದ ಪರಿಣಾಮವಾಗಿ ಬಿಜೆಪಿ ಈಗಲೂ ಎದುರಿಸುತ್ತಿದೆ. ಮುಂದೆ ಕಾಂಗ್ರೆಸ್ ಗೂ ಇದೇ ಪರಿಸ್ಥಿತಿ ಬರಲಿದೆ ಎಂದಿದ್ದಾರೆ. ದಾವಣಗೆರೆ, ಬಾಗಲಕೋಟೆ ಉಪ ಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲ್ಲಲು ಅಹಿಂದ ಮತಗಳೇ ಕಾರಣ. ಈಗ ಅಹಿಂದ ನಾಯಕನನ್ನೇ ತುಳಿದಿದ್ದಾರೆ.

## ಶಾಸಕ ಮುನಿರತ್ನಗೆ ಬಿಗ್ ರಿಲೀಫ್; ಪ್ರಕರಣ ರದ್ದುಗೊಳಿಸಿದ ವಿಶೇಷ ನ್ಯಾಯಾಲಯ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಹಾಗೂ ಮಾಜಿ ಸಚಿವ ಮುನಿರತ್ನ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ದೊಡ್ಡ ರಿಲೀಫ್ ನೀಡಿದೆ. 2024ರಲ್ಲಿ ಅವರ ವಿರುದ್ಧ ದಾಖಲಾಗಿದ್ದ ಬಹುಚರ್ಚಿತ ಜಾತಿ ನಿಂದನೆ ಮತ್ತು ಜೀವ ಬೆದರಿಕೆ ಪ್ರಕರಣವನ್ನು ರದ್ದುಗೊಳಿಸಿ ನ್ಯಾಯಾಲಯ ಆದೇಶ ಹೊರಡಿಸಿದೆ. ಶಾಸಕರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಗೆ ರಚಿಸಲಾದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಮೇ 21ರಂದು ಈ ಆದೇಶ ಹೊರಡಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮುನಿರತ್ನ ಅವರು ತಮ್ಮ ಮೇಲಿನ ಆರೋಪಗಳನ್ನು ವಜಾಗೊಳಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು.

## ಸಿದ್ದರಾಮಯ್ಯ ಸೇವೆ ಮರೆಯಲಾಗದು, ಅವರ ಕೊಡುಗೆಗೆ ಕರ್ನಾಟಕ-ಕಾಂಗ್ರೆಸ್ ಎಂದಿಗೂ ಕೃತಜ್ಞ: ಮಲ್ಲಿಕಾರ್ಜುನ ಖರ್ಗೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಾರ್ವಜನಿಕ ಜೀವನವನ್ನು ಶುಕ್ರವಾರ ಶ್ಲಾಘಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದಿರುವ ಅವರು, ಸಿದ್ದರಾಮಯ್ಯ ಅವರ ಸಾರ್ವಜನಿಕ ಜೀವನ ಸದಾ ಗೌರವ, ಕರುಣೆ ಮತ್ತು ಸಾಮಾಜಿಕ ನ್ಯಾಯದ ಬದ್ಧತೆಯನ್ನು ಪ್ರತಿಬಿಂಬಿಸಿದೆ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯ ಅವರು ತಮ್ಮ ಜೀವನದ ಆರಂಭದಿಂದಲೇ ಸಮಾನತೆ ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಡಿದ್ದಾರೆ. ಸರಳ ಹಿನ್ನೆಲೆಯಿಂದ ಬಂದ ಸಿದ್ದರಾಮಯ್ಯ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಎರಡು ಬಾರಿ ಸೇವೆ ಸಲ್ಲಿಸಿದ್ದು, ತಮ್ಮ ಆಡಳಿತಾವಧಿಯಲ್ಲಿ ಸಮಾನತೆ, ಸೌಹಾರ್ದತೆ ಹಾಗೂ ಹಿಂದುಳಿದವರ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು ಎಂದು ತಿಳಿಸಿದ್ದಾರೆ.

# ಕೆಪಿಸಿಸಿಗೆ ಶೀಘ್ರದಲ್ಲೇ ಹೊಸ ಸಾರಥಿ

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಾಗಿದ್ದ ಒಪ್ಪಂದದಂತೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಬೆಂಬಲಿಗರು ಸಿದ್ದರಾಮಯ್ಯ ಅವರ ಪರವಾಗಿ ಧ್ವನಿ ಎತ್ತಲಿಲ್ಲ ಎಂಬುದು ಅಪ್ರಸ್ತುತ ಎಂದು ಮಾಜಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್‌ಗಾಂಧಿ ಹೇಳಿದರೆ ರಾಜೀನಾಮೆ ನೀಡುವುದಾಗಿ ಸಿದ್ದರಾಮಯ್ಯ ಅವರು ಮೊದಲಿನಿಂದಲೂ ಹೇಳುತ್ತಾ ಬಂದರು. ದೆಹಲಿಯ ಸಭೆಯಲ್ಲಿ ರಾಹುಲ್ ಗಾಂಧಿ ಸೂಚನೆ ಕೊಟ್ಟ ಬಳಿಕ ಸಿದ್ದರಾಮಯ್ಯ ಅದರಂತೆ ರಾಜೀನಾಮೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಆಪ್ತರು ಸಿದ್ದರಾಮಯ್ಯ ಅವರ ಪರವಾಗಿ ಹೈಕಮಾಂಡ್ ನಾಯಕರ ಬಳಿ ವಾದಿಸಬೇಕಿತ್ತು ಎಂಬುದು ಅಪ್ರಸ್ತುತ.

ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುವಾಗ ಯಾರೊಂದಿಗೂ ಚರ್ಚೆ ನಡೆಸಲಿಲ್ಲ, ಯಾರನ್ನೂ ಕೇಳಲಿಲ್ಲ. ದೆಹಲಿಯಲ್ಲಿ ಒಪ್ಪಂದವಾಗಿದ್ದ ಬಗ್ಗೆ ಕೂಡ ನಮಗೆ ಹೇಳಲಿಲ್ಲ ಎಂದು ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಸಿದ್ದರಾಮಯ್ಯ ಅವರ ವಿರುದ್ಧ ಸಹಿ ಸಂಗ್ರವಾಗಿತ್ತು ಎಂಬುದು ನಂಬಲರ್ಹವಲ್ಲ. ಯಾರೋ 37 ಜನ ಸಿದ್ದರಾಮಯ್ಯ ಅವರ ವಿರುದ್ಧ ಸಹಿ ಹಾಕಿದ್ದರೆ, ಉಳಿದ 100 ಜನರ ಅಭಿಪ್ರಾಯ ಏನೆಂಬುದು ಮುಖ್ಯವಲ್ಲವೇ? ಸಹಿ ಹಾಕಿದ 37 ಜನ ಈಗ ಹೀರೋಗಳಾಗಿದ್ದಾರೆ ಎಂದು ವ್ಯಂಗ್ಯವಾಗಿ ಹೇಳಿದರು.

2028ರವರೆಗೂ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಪಕ್ಷಕ್ಕೆ ಅಗತ್ಯ ಸಲಹೆ ಸಹಕಾರ ಬೆಂಬಲ ನೀಡಲಿದ್ದಾರೆ. ಇದನ್ನು ನಿನ್ನೆ ನಡೆದ ಸಚಿವರ ಉಪಾಹಾರ ಸಭೆಯಲ್ಲಿ ಸಿದ್ದರಾಮಯ್ಯ ಅವರೇ ಸ್ಪಷ್ಟಪಡಿಸಿದ್ದಾರೆ.

ಅಹಿಂದ ಸಮುದಾಯದಲ್ಲಿ 200ಕ್ಕೂ ಹೆಚ್ಚು ಜಾತಿಗಳಿವೆ. ಸಿದ್ದರಾಮಯ್ಯ ನಂತರ ತಾವು ಅದನ್ನು ಮುನ್ನಡೆಸುವುದಾಗಿ ಸತೀಶ್ ಜಾರಕಿಹೊಳಿ ಹೇಳಿದರು. ಅಹಿಂದ ವರ್ಗಕ್ಕೆ ಯಾರಾದರೂ ನಾಯಕತ್ವ ನೀಡಲೇಬೇಕು. ತಾವು ಆ ಜವಾಬ್ದಾರಿ ನಿಭಾಯಿಸುವುದಾಗಿ ಸ್ಪಷ್ಟಪಡಿಸಿದರು.ಕೆಪಿಸಿಸಿ ಅಧ್ಯಕ್ಷ ಸ್ಥಾನದ ಬಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ತಮೊಂದಿಗೆ ಚರ್ಚೆ




ಮಾಡಿದ್ದಾರೆ. ಸಿದ್ದರಾಮಯ್ಯ ಅವರು ದೆಹಲಿಗೆ ಬಂದಿದ್ದಾರೆ. ಅವರು ಎಲ್ಲಾ ವಿಚಾರಗಳನ್ನು ಚರ್ಚೆ ಮಾಡಲಿದ್ದಾರೆ ಎಂದು ತಾವು ತಿಳಿಸಿದ್ದು, ದೆಹಲಿಯಲ್ಲಿ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಹೈಕಮಾಂಡ್ ಚರ್ಚೆ ನಡೆಸಿ, ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಗೊತ್ತಿಲ್ಲ. ಪಕ್ಷ ಯಾವುದೇ ಜವಾಬ್ದಾರಿ ಕೊಟ್ಟರೂ ಅದನ್ನು ನಿಭಾಯಿಸುತ್ತೇನೆ. ಈವರೆಗೂ ತಮಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡುವ ಬಗ್ಗೆಯಾರೂ ಅಧಿಕೃತವಾಗಿ ಹೇಳಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಅಧ್ಯಕ್ಷ ಸ್ಥಾನದ ಜೊತೆಗೆ ಸಚಿವ ಸ್ಥಾನ ಬೇಕು ಎಂಬುದರ ಬಗ್ಗೆ ಸದ್ಯಕ್ಕೆ ನಾನು ಏನೂ ಹೇಳುವುದಿಲ್ಲ. ದೆಹಲಿಯಲ್ಲಿ ಸಿದ್ದರಾಮಯ್ಯ ಅವರೇ ಅದನ್ನು ನಿರ್ಧರಿಸುತ್ತಾರೆ. ಈಗಿರುವ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಮಾದರಿಯಲ್ಲೇ ಪಕ್ಷ ಸಂಘಟನೆ ಮುಂದುವರೆಸುವ ಬಗ್ಗೆ ಇನ್ನೂ ನಿರ್ಧರಿಸಿಲ್ಲ ಎಂದು ಹೇಳಿದರು. ಮೊದಲು ಹೊಸ ಮುಖ್ಯಮಂತ್ರಿ ಅಧಿಕಾರ ವಹಿಸಿಕೊಳ್ಳಲಿ, ಅನಂತರ ಪಕ್ಷದ ಅಧ್ಯಕ್ಷ ಸ್ಥಾನದ ಬಗ್ಗೆ ಚರ್ಚೆಗಳಾಗುತ್ತವೆ. ಹೊಸ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿ ಹುದ್ದೆ ಇರಲಿದೆಯೋ, ಇಲ್ಲವೋ ಎಂಬುದು ತಮಗೆ ಗೊತ್ತಿಲ್ಲ ಎಂದರು. ಸಿದ್ದರಾಮಯ್ಯ ಅವರು ಎರಡು ವರ್ಷದ ಬಳಿಕವಾದರೂ ಮುಖ್ಯಮಂತ್ರಿ ಸ್ಥಾನದಿಂದ ನಿರ್ಗಮಿಸಬೇಕಿತ್ತು. ವಿದಾಯ ಸಹಜ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

### ಹೈಕಮಾಂಡ್ ಮಣೆ ಸಾಧ್ಯತೆ

**ಕೆಪಿಸಿಸಿಗೆ ಬಹುತೇಕ ಸತೀಶ್ ಜಾರಕಿಹೊಳಿ ಹೆಸರೇ ಅಂತಿಮವಾಗಲಿದೆ. ಇದಕ್ಕೆ ಹಲವು ಕಾರಣಗಳು ಇವೆ. ಅಹಿಂದ ವರ್ಗದ ನಾಯಕ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವ ಹಿನ್ನೆಲೆಯಲ್ಲಿ ಅಹಿಂದ ವರ್ಗಕ್ಕೆ ಅನ್ಯಾಯ ಆಗಿದೆ ಎಂಬ ಅಭಿಪ್ರಾಯ ಮೂಡುತ್ತಿದೆ. ಇದಕ್ಕೆ ಪರ್ಯಾಯ ವ್ಯವಸ್ಥೆ ಮಾಡಬೇಕಾಗಿದೆ. ಹಾಗಾಗಿ ಕೆಪಿಸಿಸಿಯೇ ಮುಂದಿರುವ ಆಯ್ಕೆಯಾಗಿದೆ. ಸತೀಶ್ ಜಾರಕಿಹೊಳಿ ಎಸ್ ಟಿ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಹಾಗಾಗಿ ಎಸ್ ಟಿ ಸಮುದಾಯದ ಮತಗಳನ್ನು ಸೆಳೆಯಬೇಕಾಗಿದೆ. ಜೊತೆಗೆ ಕೆಪಿಸಿಸಿ ಅಧ್ಯಕ್ಷರಾದವರು ಮುಂದಿನ ಸಿಎಂ ಆಗುತ್ತಾರೆ ಎಂಬ ಅಭಿಪ್ರಾಯವೂ ಇದೆ. ಜೊತೆಗೆ ಅಹಿಂದ ವರ್ಗಕ್ಕೆ ಹೊಸ ನಾಯಕನ ಅಗತ್ಯ ಇದೆ. ಸಿದ್ದರಾಮಯ್ಯ ಅವರ ನಿರ್ಗಮನದ ಬಳಿಕ ಅಹಿಂದಕ್ಕೆ ಬಲ ತುಂಬುವ ಸಾಮರ್ಥ್ಯ ಸತೀಶ್ ಜಾರಕಿಹೊಳಿ ಅವರಿಗೆ ಇದೆ.**

### ಸಂಘಟನೆಯಲ್ಲಿ ಬದಲಾವಣೆ?

ಸತೀಶ್ ಜಾರಕಿಹೊಳಿ ಸಂಘಟನೆಯಲ್ಲಿ ಚತುತರು. ಅಲ್ಲದೆ, ಅವರ ಹಿಂದೆ ದೊಡ್ಡ ಸಮುದಾಯವೂ ಇದೆ. ಅಹಿಂದ ವರ್ಗದ ಬೆಂಬಲವೂ ಅವರಿಗೆ ಸಿಗಲಿದೆ. ಸೈದ್ಧಾಂತಿಕವಾಗಿಯೂ ಅವರು ಸಿದ್ದರಾಮಯ್ಯ ಅವರ ಮಾರ್ಗವನ್ನು ಅನುಸರಿಸುತ್ತಾ ಬಂದಿದ್ದಾರೆ. ಹಾಗಾಗಿ ಪಕ್ಷದ ಸಂಘಟನೆಯ ಶೈಲಿಯಲ್ಲಿ ಒಂದಿಷ್ಟು ಬದಲಾವಣೆ ಅಗುವ ಸಾಧ್ಯತೆ ಅಲ್ಲಗಳೆಯುವ ಹಾಗಿಲ್ಲ.


ಸತೀಶ್ ಜಾರಕಿಹೊಳಿ ಮಾನವ ಬಂಧುತ್ವ ವೇದಿಕೆಯ ಮೂಲಕ ರಾಜ್ಯಾದ್ಯಂತ ಸಂಘಟನೆಯ ಹಿಡಿತ ಹೊಂದಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಕೇಡರ್ ಸ್ವರೂಪ ನೀಡಲು ಪ್ರಯತ್ನ ನಡೆಸಿದವರಲ್ಲಿ ಇವರು ಒಬ್ಬರಾಗಿದ್ದಾರೆ.

# ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ: ರಾಜ್ಯಪಾಲರಿಂದ ಅಂಗೀಕಾರ, ಸಚಿವ ಸಂಪುಟವೂ ವಿಸರ್ಜನೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಸಿದ್ದರಾಮಯ್ಯ ಅವರ ರಾಜೀನಾಮೆ ಪತ್ರವನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಂಗೀಕರಿಸಿದ್ದಾರೆ. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ರಾಜೀನಾಮೆ ಪತ್ರವನ್ನ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಇಂದು ಶುಕ್ರವಾರ ಅಂಗೀಕರಿಸಿದ್ದಾರೆ ಎಂದು ತಿಳಿದುಬಂದಿದೆ. ಸಂವಿಧಾನಬದ್ಧವಾಗಿ ರಾಜೀನಾಮೆ ಪತ್ರವನ್ನು ಅಂಗೀಕರಿಸಿದ್ದಾರೆ. ಈ ಬಗ್ಗೆ ಲೋಕಭವನದಿಂದ


ಉದಯವಾಹಿನಿ ಚಿತ್ರ


ರಾಜ್ಯಪಾಲ, ಕರ್ನಾಟಕ
Governor of Karnataka
NO GS 33 GOB 2023
Date : 29-05-2026
NOTIFICATION
In exercise of the powers conferred on me under Article 164(1) of the constitution of India, I, THAAWARCHAND GEHLOT, Governor of Karnataka, have accepted the resignation of Shri. Siddaramaiah, Chief Minister of Karnataka and dissolved the Council of Ministers headed by him with immediate effect.
Shri Siddaramaiah shall continue to function as Chief Minister till alternative arrangements are made.
(Thaawarchand Gehlot)

ಅಧಿಕೃತ ಆದೇಶ ಹೊರಬಿದ್ದಿದೆ. ತಕ್ಷಣದಿಂದಲೇ ಸಚಿವ ಸಂಪುಟ ಸಭೆಯೂ ವಿಸರ್ಜನೆ ಆಗಲಿದೆ. ಬೇರೆ ವ್ಯವಸ್ಥೆ ಆಗುವವರೆಗೂ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಜವಾಬ್ದಾರಿ ನಿರ್ವಹಿಸಬೇಕಾಗಿದೆ. ನಿನ್ನೆ ಗುರುವಾರ, ಸಿದ್ದರಾಮಯ್ಯ ಲೋಕ ಭವನಕ್ಕೆ ತೆರಳಿ ರಾಜೀನಾಮೆ ಸಲ್ಲಿಸಿದ್ದರು. ಆದರೆ ರಾಜ್ಯಪಾಲರ ಅನುಪಸ್ಥಿತಿಯಲ್ಲಿ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ಅಂಗೀಕರಿಸಿರಲಿಲ್ಲ. ಇಂದು ರಾಜ್ಯಪಾಲ ಗೆಹ್ಲೋಟ್ ಅವರು ತಮ್ಮ ವಿಶೇಷ ವಿವೇಚನಾಧಿಕಾರವನ್ನು ಬಳಸಿ ಈ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ. ರಾಜ್ಯಪಾಲರು ರಾಜೀನಾಮೆ ಅಂಗೀಕರಿಸಿದ ಬೆನ್ನಲ್ಲೇ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ದೆಹಲಿಗೆ ತೆರಳಿದ್ದಾರೆ. ಡಿಕೆ ಶಿವಕುಮಾರ್ ಮುಂದಿನ ಸಿಎಂ ಆಗುವುದು ಬಹುತೇಕ ಖಚಿತವಾಗಿದೆ. ನಾಳೆ (ಮೇ 30) ಶಾಸಕಾಂಗದ ಸಭೆ ನಡೆಯಲಿದ್ದು, ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಯಾಗಲಿದೆ. ಸದ್ಯಕ್ಕೆ ಸಭೆಯ ಬಗ್ಗೆ ಕಾಂಗ್ರೆಸ್ ಶಾಸಕರಿಗೆ ಮಾಹಿತಿ ನೀಡಲಾಗಿದ್ದು, ಶಾಸಕರು ಬೆಂಗಳೂರಿನಲ್ಲಿಯೇ ಇರುವಂತೆ ಸೂಚಿಸಲಾಗಿದೆ.

## ಮತ್ತೆ 30 ನಿವೇಶನಗಳಿಗೆ ನಕಲಿ ಇ-ಖಾತಾ ಮಾಡಿಕೊಟ್ಟ ಎಆರ್‌ಒ ಮಂಜುಳಾ

• ಉದಯವಾಹಿನಿ, ಬೆಂಗಳೂರು

ಅಕ್ರಮವಾಗಿ 50 ನಿವೇಶನಗಳಿಗೆ ಎ ಖಾತಾ ಮಾಡಿಕೊಟ್ಟಿರುವ ಆರೋಪ ಎದುರಿಸುತ್ತಿರುವ ಎಆರ್‌ಒ ಮಂಜುಳಾ ಅವರು ಮತ್ತೆ 30 ನಿವೇಶನಗಳಿಗೆ ಖಾತಾ ಮಾಡಿಕೊಟ್ಟಿರುವುದನ್ನು ಬಿಜೆಪಿ ಮುಖಂಡ ಎನ್. ಆರ್.ರಮೇಶ್ ಪತ್ತೆ ಹಚ್ಚಿದ್ದು ಕೂಡಲೇ ಅವರನ್ನು ಸೇವೆಯಿಂದ ಅಮಾನತುಗೊಳಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್ ಹಾಗೂ ಪಶ್ಚಿಮ ನಗರ ಪಾಲಿಕೆ ಆಯುಕ್ತರಿಗೆ ದೂರು ನೀಡಿದ್ದಾರೆ.

ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಹೇರೋಹಳ್ಳಿ ಗ್ರಾಮದ ಸರ್ವೆ ನಂ.56/1ರಲ್ಲಿರುವ 4.20 ಎಕರೆ ಜಮೀನು ಮೂಲತಃ ದಿವಂಗತ ಗಂಗಯ್ಯ ಅವರ ಹೆಸರಿನಲ್ಲಿದ್ದು, ಬಳಿಕ ಅನುಮಾನಾಸ್ಪದವಾಗಿ ಗಿರಿಜಾಬಾಯಿ ಮತ್ತು ತೇಜಸ್ವಿನಿ ಹೆಸರಿಗೆ ಪಹಣಿ ಬದಲಾಗಿರುವ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಸದ್ಯ ಅದು ವಿಚಾರಣೆಯಲ್ಲಿದೆ ಎಂದು ರಮೇಶ್ ತಿಳಿಸಿದ್ದಾರೆ.

ಪಹಣಿಯಲ್ಲಿ ಎಕರೆಗಳ ಲೆಕ್ಕದಲ್ಲಿ ಇರುವ ಜಮೀನಿಗೆ ಪ್ರತ್ಯೇಕ ನಿವೇಶನಗಳ ಖಾತೆ ಮಾಡಬಾರದು ಎಂಬ ನಿಯಮವಿದ್ದರೂ, ಇಪಿಐಡಿ ಸೃಷ್ಟಿಸಿ ಖಾತೆಗಳನ್ನು ನೀಡಲಾಗಿದೆ. ಇದಕ್ಕಾಗಿ ಸುಮಾರು 2 ಕೋಟಿಗೂ


ಉದಯವಾಹಿನಿ ಚಿತ್ರ

ಅಧಿಕ ಲಂಚ ಸ್ವೀಕರಿಸಲಾಗಿದೆ ಎಂಬ ಗಂಭೀರ ಆರೋಪವೂ ಕೇಳಿಬಂದಿದೆ. ಇದಲ್ಲದೆ, ಖಾತೆ ಮಂಜೂರಿಗೆ ಅಗತ್ಯವಿರುವ ಶುದ್ಧ ಕ್ರಯಪತ್ರಗಳಿಲ್ಲದೇ, ಅಭಿವೃದ್ಧಿ ಶುಲ್ಕ ಹಾಗೂ ಸುಧಾರಣಾ ಶುಲ್ಕ ಪಾವತಿಸದೇ ಖಾತೆಗಳನ್ನು ಮಾಡಿಕೊಟ್ಟ ಪರಿಣಾಮ ಪಾಲಿಕೆಗೆ 4 ಕೋಟಿಗೂ ಹೆಚ್ಚು ನಷ್ಟ ಉಂಟಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದೇ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮೋದಿತ ನಕ್ಷೆ ಇಲ್ಲದೇ ವಿಕಾಸ್ ಇನ್ಫೋ ಬಿಲ್ಡರ್ಸ್ ಹೆಸರಿನಲ್ಲಿ ಅಶ್ವಥ್ ಎಂಬವರು ಅನಧಿಕೃತ ಬಡಾವಣೆ ನಿರ್ಮಾಣ ಮಾಡುತ್ತಿದ್ದಾರೆ ಎನ್ನಲಾಗಿದೆ.

## ಆರ್.ಬಿ.ತಿಮ್ಮಾಪುರಗೆ ಉಪಮುಖ್ಯಮಂತ್ರಿ, ಸ್ಥಾನ ಕೆ.ಹೆಚ್.ಮುನಿಯಪ್ಪರವರ ಜೊತೆಗೆ ಹೆಚ್. ಆಂಜನೇಯಗೆ ಸಚಿವ ಸ್ಥಾನ ನೀಡುವಂತೆ ಅಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಅತಿ ದೊಡ್ಡ ಮಾದಿಗ ಸಮಾಜಕ್ಕೆ ಸಚಿವ ಸಂಪುಟದಲ್ಲಿ ಇನ್ನಷ್ಟು ಬಲಿಷ್ಠ ಹಾಗೂ ನ್ಯಾಯಯುತ ರಾಜಕೀಯ ಪ್ರಾತಿನಿಧ್ಯ ಒದಗಿಸಬೇಕು. ಆರ್.ಬಿ.ತಿಮ್ಮಾಪುರಗೆ ಉಪ ಮುಖ್ಯಮಂತ್ರಿ, ಕೆ.ಹೆಚ್.ಮುನಿಯಪ್ಪರವರ ಜೊತೆಗೆ ಹೆಚ್. ಆಂಜನೇಯ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷ ಡಾ.ಎಸ್.ಸಂಗಮೇಶ್ ಆಗ್ರಹಿಸಿದ್ದಾರೆ. ರಾಜ್ಯದ ಎಲ್ಲಾ ಮಾದಿಗ ಸಂಘಟನೆಗಳು, ಮಠಾಧೀಶರು, ಬುದ್ಧಿಜೀವಿಗಳು, ಯುವ ಸಂಘಟನೆಗಳು, ನಿವೃತ್ತ ಅಧಿಕಾರಿಗಳು ಹಾಗೂ ಪ್ರಗತಿಪರ ಶಕ್ತಿಗಳು ಒಂದೇ ವೇದಿಕೆಯಲ್ಲಿ ನಿಂತು ಈ ನ್ಯಾಯಯುತ ಪ್ರಾತಿನಿಧ್ಯದ ಬೇಡಿಕೆಗೆ ಬೆಂಬಲ ನೀಡಬೇಕೆಂದು ಹೇಳಿದ್ದಾರೆ.


ಉದಯವಾಹಿನಿ ಚಿತ್ರ

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾದಿಗ ಜನಾಂಗ ರಾಜ್ಯದಲ್ಲಿ ಅತಿ ದೊಡ್ಡ ದಲಿತ ಸಮುದಾಯವಾಗಿದ್ದು, ಸಾಮಾಜಿಕ ನ್ಯಾಯ, ಕಾಂಗ್ರೆಸ್ ಪಕ್ಷದ ಬಲವರ್ಧನೆ ಹಾಗೂ ಜನಪರ ಹೋರಾಟ ಗಳಲ್ಲಿ ನಿರಂತರವಾಗಿ ಪ್ರಮುಖ ಪಾತ್ರವಹಿಸಿದೆ. ಆದಾಗ್ಯೂ, ಸಮುದಾಯಕ್ಕೆ ಸರ್ಕಾರದಲ್ಲಿ ತಕ್ಕ ಮಟ್ಟಿನ ರಾಜಕೀಯ ಸ್ಥಾನಮಾನ ಸಿಗದಿರುವುದು ಬೇಸರದ ಸಂಗತಿಯಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಅತಿ ದೊಡ್ಡ ದಲಿತ ಸಮುದಾಯದ ಜನಸಂಖ್ಯೆ, ರಾಜಕೀಯ ಶಕ್ತಿ ಹಾಗೂ ಸಾಮಾಜಿಕ ಕೊಡುಗೆಯನ್ನು ಪರಿಗಣಿಸಿದರೆ ಸಮರ್ಪಕ ಪ್ರಾತಿನಿಧ್ಯ ದೊರೆತಿಲ್ಲ. ರಾಜಕೀಯ ಪ್ರಾತಿನಿಧ್ಯ ಕೇವಲ ಹುದ್ದೆಯ ಪ್ರಶ್ನೆಯಲ್ಲ; ಅದು ಸಮುದಾಯದ ಗೌರವ, ಹಕ್ಕು. ಆಡಳಿತದಲ್ಲಿ ಪಾಲು ದಾರಿಕೆಯ ಸಂಕೇತವಾಗಿದೆ. ಸಮುದಾಯದ ಭಾವನೆಗಳನ್ನು ಗೌರವಿಸಿ ತಕ್ಷಣ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದಿದ್ದಾರೆ.

## ಮುಗಿದ ಸಿದ್ದು ರಾಜಯೋಗ: ಮುಂದಿನ 8 ವರ್ಷ ಡಿಕೆಶಿ ಅಲ್ಲಾಡಿಸಲು ಆಗಲ್ಲ: ರಾಜಗುರುಗಳ ಭವಿಷ್ಯವಾಣಿ!

• ಉದಯವಾಹಿನಿ, ಬೆಂಗಳೂರು

ಸೋಮವಾರದ ಒಳಗೆ ಡಿ.ಕೆ. ಶಿವಕುಮಾರ್ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಲಿದ್ದಾರೆ. ಮುಂದಿನ 8 ವರ್ಷಗಳ ಕಾಲ ಅವರ ಅಧಿಕಾರವನ್ನು ಯಾರಿಂದಲೂ ಅಲ್ಲಾಡಿಸಲು ಸಾಧ್ಯವಿಲ್ಲ ಎಂದು ಶಿವಕುಮಾರ್ ಅವರ ಪರಮಾಪ್ತ ಗುರುಗಳಾದ ರಾಜಗುರು ದ್ವಾರಕನಾಥ್ ಗುರೂಜಿ ಭರ್ಜರಿ


ಉದಯವಾಹಿನಿ ಚಿತ್ರ

ಭವಿಷ್ಯ ನುಡಿದಿದ್ದಾರೆ.ಖಾಸಗಿ ಸುದ್ದಿ ವಾಹಿನಿಯೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರೊಂದಿಗಿನ ತಮ್ಮ 35 ವರ್ಷಗಳ ಸುದೀರ್ಘ ಒಡನಾಟವನ್ನು ನೆನಪಿಸಿಕೊಂಡಿದ್ದಾರೆ. 'ಅವನು (ಡಿಕೆಶಿ) ನನಗೆ ಕಳೆದ 35 ವರ್ಷಗಳಿಂದ ಪರಿಚಯ. ಹಿಂದೆ ಮಾಜಿ ಸಿಎಂ ಬಂಗಾರಪ್ಪ ಅವರ ಸಂಪುಟದಲ್ಲಿ ಅತ್ಯಂತ ಸಣ್ಣ ವಯಸ್ಸಿಗೆ ಜೈಲು ಮಂತ್ರಿಯಾಗಿದ್ದಾಗಲೇ, ನೀನು ಮುಂದೊಂದು ದಿನ ಈ ರಾಜ್ಯಕ್ಕೆ ಮುಖ್ಯಮಂತ್ರಿ ಆಗ್ತೀಯಾ ಎಂದು ಭವಿಷ್ಯ ಹೇಳಿದ್ದೆ.


ಅವನು ಸದಾ ನನ್ನ ಸಂಪರ್ಕದಲ್ಲೇ ಇದ್ದಾನೆ. ಅವನು ನಮ್ಮ ಮನೆಯ ಮಗನಿದ್ದಂತೆ ಎಂದಿದ್ದಾರೆ.

# ಡಿಕೆಶಿ-ರಾಹುಲ್‌ಗೆ ಜಾತಿ ಗಣತಿ ಸವಾಲು!

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಸಚಿವರೊಂದಿಗಿನ ಉಪಹಾರ ಸಭೆಯ ನಂತರ ತಮ್ಮ ರಾಜೀನಾಮೆಯನ್ನು ಅಧಿಕೃತವಾಗಿ ಖಚಿತಪಡಿಸಿದ್ದಾರೆ. ಆದರೆ, ಅಧಿಕಾರದಿಂದ ಕೆಳಗಿಳಿಯುವ ಮುನ್ನ ಅವರು ತಮ್ಮ ಉತ್ತರಾಧಿಕಾರಿ ಡಿ.ಕೆ. ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಭವಿಷ್ಯಕ್ಕೆ ದೊಡ್ಡ ಸವಾಲೊಡ್ಡಬಲ್ಲ ಟೈಮ್ ಬಾಂಬ್' ಒಂದನ್ನು ಆಕ್ಟಿವೇಟ್ ಮಾಡಿದ್ದಾರೆ.

ವಿವಾದಾತ್ಮಕ ಹಿಂದುಳಿದ ವರ್ಗಗಳ ಆಯೋಗದ ಜಾತಿ ಗಣತಿ ವರದಿಯನ್ನು ಔಪಚಾರಿಕವಾಗಿ ಸ್ವೀಕರಿಸುವ ಮೂಲಕ ಸಿದ್ದರಾಮಯ್ಯ ಅವರು ಹೈಕಮಾಂಡ್ ಹಾಗೂ ಡಿಕೆಶಿ ವಿರುದ್ಧ ರಾಜಕೀಯ ದಾಳ ಉರುಳಿಸಿದ್ದಾರೆ. ಕೆ. ಮಧುಸೂದನ್ ನಾಯಕ್ ನೇತೃತ್ವದ ಈ ವರದಿಯನ್ನು ರಾಜೀನಾಮೆಯ ಮುನ್ನವೇ ಆತುರವಾಗಿ ಸ್ವೀಕರಿಸಿರುವುದು ತೀವ್ರ ರಾಜಕೀಯ ಮಹತ್ವ ಪಡೆದುಕೊಂಡಿದೆ. ಸಿಎಂ ನಿರ್ಧಾರದಿಂದ ಆಕ್ರೋಶಗೊಂಡಿರುವ ಕುರುಬ ಸಮುದಾಯದ ಕಾರ್ಯಕರ್ತರು ರಾಹುಲ್ ಗಾಂಧಿ ವಿರುದ್ಧ ರಾಯಚೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಿ,




ಹೈಕಮಾಂಡ್ ಧೋರಣೆಯನ್ನು ಖಂಡಿಸಿದ್ದಾರೆ. ದೆಹಲಿಗೆ ತೆರಳಿ ಕೇಂದ್ರ ರಾಜಕಾರಣದಲ್ಲಿ ಸಕ್ರಿಯರಾಗುವ ಹೈಕಮಾಂಡ್ ಆಫರ್ ಅನ್ನು ನಿರಾಕರಿಸಿರುವ ಸಿದ್ದರಾಮಯ್ಯ, ರಾಜ್ಯ ರಾಜಕೀಯದಲ್ಲೇ ಉಳಿದು ತಮ್ಮ ಪ್ರಭಾವ ಕಾಯ್ದುಕೊಳ್ಳುವ ಸ್ಪಷ್ಟ ಸಂದೇಶ ರವಾನಿಸಿದ್ದಾರೆ. ಸೋರಿಕೆಯಾದ ಮಾಹಿತಿ ಪ್ರಕಾರ, ರಾಜ್ಯದಲ್ಲಿ ಹಿಂದುಳಿದ ವರ್ಗಗಳು (ಒಬಿಸಿ) ಮತ್ತು ಮುಸ್ಲಿಮರ ಜನಸಂಖ್ಯೆ ಹೆಚ್ಚಾಗಿದ್ದು, ಸಾಂಪ್ರದಾಯಿಕವಾಗಿ ಪ್ರಬಲವಾಗಿರುವ ಲಿಂಗಾಯತ ಮತ್ತು ಒಕ್ಕಲಿಗರ ಜನಸಂಖ್ಯೆ ಕುಸಿದಿದೆ ಎನ್ನಲಾಗಿದೆ. ಇದು ಸಿದ್ದರಾಮಯ್ಯ ಅವರ 'ಅಹಿಂದ' ರಾಜಕಾರಣಕ್ಕೆ ಭದ್ರ ಬುನಾದಿ ಒದಗಿಸಿದರೆ, ಮುಂದಿನ ಸಿಎಂ ಡಿ.ಕೆ. ಶಿವಕುಮಾರ್ ಪಾಲಿಗೆ ದೊಡ್ಡ ಸಂಕಷ್ಟ ತರಲಿದೆ. ಒಕ್ಕಲಿಗ ನಾಯಕರಾದ ಡಿಕೆಶಿ ಈ ವರದಿಯನ್ನು ಜಾರಿಗೊಳಿಸಿದರೆ ಪ್ರಬಲ ಸಮುದಾಯಗಳ ವಿರೋಧ ಕಟ್ಟಿಕೊಳ್ಳಬೇಕಾಗುತ್ತದೆ ತಡೆಹಿಡಿದರೆ ಅಹಿಂದ ಮತಬ್ಯಾಂಕ್ ಕೈತಪ್ಪುವ ಭೀತಿಯಿದೆ. ಈ ವರದಿಯು ಸುಮಾರು 5.9 ಕೋಟಿ ಜನರ ವಿವರಗಳನ್ನು ಒಳಗೊಂಡಿದ್ದು, ದೇಶದಲ್ಲೇ ಅತಿ ದೊಡ್ಡ ಸಾಮಾಜಿಕ ಸಮೀಕ್ಷೆಗಳಲ್ಲಿ ಒಂದಾಗಿದೆ. ಇದರ ಅನುಷ್ಠಾನ ಅಥವಾ ವಿಳಂಬದ ಪ್ರತಿ ನಿರ್ಧಾರವೂ ಮುಂದಿನ ವಿಧಾನಸಭಾ ಚುನಾವಣೆಯ ಮೇಲೆ ಗಂಭೀರ ಪರಿಣಾಮ ಬೀರಲಿದೆ.

### ನಿಶ್ಯಬ್ದ ಪ್ರತೀಕಾರ

**ದೇಶಾದ್ಯಂತ ಜಾತಿ ಗಣತಿಯನ್ನು ಪ್ರಮುಖ ಚುನಾವಣಾ ಅಸ್ತ್ರವನ್ನಾಗಿ ಮಾಡಿಕೊಂಡಿರುವ ರಾಹುಲ್ ಗಾಂಧಿ ಅವರಿಗೂ ಇದು ರಾಷ್ಟ್ರಮಟ್ಟದಲ್ಲಿ ಇಕ್ಕಟ್ಟು ತಂದಿದೆ. ಕಾಂಗ್ರೆಸ್ ಆಡಳಿತವಿರುವ ಕರ್ನಾಟಕದಲ್ಲೇ ವರದಿ ಮಂಡಿಸಲು ಸರ್ಕಾರ ಹಿಂಜರಿದರೆ, ಬಿಜೆಪಿಗೆ ಕಾಂಗ್ರೆಸ್ ವಿರುದ್ಧ ಮುಗಿಬೀಳಲು ದೊಡ್ಡ ಆಯುಧ ಸಿಗಲಿದೆ. ಒಟ್ಟಿನಲ್ಲಿ, ಸಿಎಂ ಕುರ್ಚಿಯಿಂದ ತಮ್ಮನ್ನು ಇಳಿಸಿದ ಹೈಕಮಾಂಡ್ ನಡೆಗೆ ಸಿದ್ದರಾಮಯ್ಯ ಅವರು ಈ ವರದಿಯ ಮೂಲಕ ನಿಶ್ಯಬ್ದ ಪ್ರತೀಕಾರ ತೀರಿಸಿಕೊಂಡಿದ್ದಾರೆ.**

### ಸಿದ್ದರಾಮಯ್ಯ ಅಭಿವೃದ್ಧಿಗೆ ಕೊಡುಗೆ

**ಜನಪರ ಯೋಜನೆಗಳಿಂದ ಹಿಡಿದು ರಾಜ್ಯದಲ್ಲಿ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆ ಅವಿಸರಣೀಯ. ಸುಮಾರು ಐವತ್ತು ವರ್ಷಗಳ ಅವರ ಅಗಾಧ ರಾಜಕೀಯ ಅನುಭವ, ಸಾಮಾಜಿಕ ಕಳಕಳಿ ಮತ್ತು ಜನಪರ ಯೋಜನೆಗಳು ಸದಾ ಸರಣೀಯ ಎಂದು ಹೇಳಿದ್ದಾರೆ.**

ಅಂತರಾಳದಿಂದ...
EDITORIAL

# ಕೃಷಿ ಉತ್ಪಾದನೆಯಲ್ಲಿ ಭವಿಷ್ಯದತ್ತ ಇರಲಿ ದೂರದೃಷ್ಟಿ



2025-26ನೇ ಸಾಲಿನಲ್ಲಿ ದೇಶದ ಆಹಾರ ಧಾನ್ಯಗಳ ಉತ್ಪಾದನ ಪ್ರಮಾಣವು 37.65 ಕೋಟಿ ಟನ್‌ಗಳಷ್ಟಾಗಿದೆ ಎಂದು ಕೃಷಿ ಸಚಿವಾಲಯ ತಿಳಿಸಿದೆ. ಇದು ದೇಶದ ಮಟ್ಟಿಗೆ ಸಾರ್ವಕಾಲಿಕ ದಾಖಲೆಯಾಗಿದ್ದು ಕೃಷಿ ವಲಯದಲ್ಲಿನ ಈ ಮಹತ್ಸಾಧನೆ ದೇಶದ ಆರ್ಥಿಕತೆಯನ್ನು ಮಾತ್ರವಲ್ಲದೆ ಕೃಷಿಕರ ಬದುಕನ್ನೂ ಹಸನಾಗಿಸಿದೆ.

ಕಳೆದ ಕೆಲವು ವರ್ಷಗಳಿಂದ ದೇಶದಲ್ಲಿ ಮುಂಗಾರು ಸಾಮಾನ್ಯವಾಗಿದ್ದುದು ಮತ್ತು ಸರಕಾರದ ಉತ್ತೇಜನಕಾರಿ ಕ್ರಮಗಳು ರೈತರಲ್ಲಿ ಹುರುಪು ಮೂಡುವಂತೆ ಮಾಡಿದ್ದವು. ಇದರ ಪರಿಣಾಮವಾಗಿ ಕಳೆದೆರಡು ವರ್ಷಗಳಲ್ಲಿ ಒಟ್ಟಾರೆ ಕೃಷ್ಯುತ್ಪಾದನೆ ಉತ್ತಮವಾಗಿತ್ತು. ಪ್ರಸಕ್ತ ವರ್ಷ ಅಕ್ಕಿ, ಗೋಧಿ, ಮೆಕ್ಕೆಜೋಳದ ಉತ್ಪಾದನೆಯಲ್ಲಿ ದೇಶ ಗಣನೀಯ ಹೆಚ್ಚಳ ದಾಖಲಿಸಿದರೆ ಎಣ್ಣೆಕಾಳುಗಳು, ಕಬ್ಬು ಮತ್ತಿತರ ಬೆಳೆಗಳಲ್ಲಿಯೂ ಸಾಕಷ್ಟು ಪ್ರಗತಿ ಕಂಡುಬಂದಿದೆ. ಬೆಳೆಗಳಿಗೆ ಉತ್ತಮ ಧಾರಣೆಯೂ ಲಭಿಸಿದ್ದರಿಂದಾಗಿ ರೈತರು ನಿರಾಳರಾಗಿದ್ದರು.

ಈಗ 2026-27ನೇ ಸಾಲಿನ ಮುಂಗಾರು ಹಂಗಾಮಿಗೆ ದೇಶದ ಕೃಷಿಕರು ಸನ್ನದ್ಧರಾಗಿದ್ದು ವರುಣನ ಆಗಮನದ ನಿರೀಕ್ಷೆಯಲ್ಲಿದ್ದಾರೆ. ಈ ಬಾರಿ ವಾಡಿಕೆಗಿಂತ ಐದು ದಿನ ಮುನ್ನವೇ ಕೇರಳ ಕರಾವಳಿಗೆ ನೈಋತ್ಯ ಮಾರುತಗಳು ಪ್ರವೇಶಿಸಲಿವೆ ಎಂದು ಹವಾಮಾನ ತಜ್ಞರು ಮುನ್ಸೂಚನೆ ನೀಡಿದ್ದರಿಂದ ರೈತರು ಕೂಡ ಭಾರೀ ನಿರೀಕ್ಷೆಯೊಂದಿಗೆ ಕೃಷಿ ಕಾರ್ಯಗಳಿಗೆ ಸಿದ್ಧತೆ ನಡೆಸಿದ್ದರು. ಆದರೆ ವಾತಾವರಣ ಹಠಾತ್ ಬದಲಾವಣೆಗಳಿಂದಾಗಿ ಮುಂಗಾರು ಆಗಮನ ವಿಳಂಬವಾಗಿದೆ. ಹವಾಮಾನ ಇಲಾಖೆಯ ಹಾಲಿ ಅಂದಾಜಿನ ಪ್ರಕಾರ ಜೂನ್ 2-4ರ ವೇಳೆಗೆ ನೈಋತ್ಯ ಮಾರುತಗಳು ಕೇರಳವನ್ನು ಪ್ರವೇಶಿಸಲಿದ್ದು ಆ ಬಳಿಕ ನಿಧಾನಗತಿಯಲ್ಲಿ ದೇಶವನ್ನು ಆವರಿಸಿಕೊಳ್ಳಲಿದೆ ಎನ್ನಲಾಗಿದೆ. ಮುಂಗಾರು ಋತುವಿನ ದೀರ್ಘಾವಧಿಯ ಮಳೆಯ ಮೇಲೆ ಎಲ್ ನಿನೋ ಕೊಂಚ ಮಟ್ಟಿನ ಪರಿಣಾಮ ಬೀರುವ ಸಾಧ್ಯತೆಗಳಿರುವುದರಿಂದ ಸಹಜವಾಗಿಯೇ ಕೃಷಿ ಚಟುವಟಿಕೆಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವ ಸಾಧ್ಯತೆಯನ್ನು ಅಲ್ಲಗಳೆಯಲಾಗದು.

### ಬಿಸಿಗಾಳಿಯ ತೀವ್ರತೆ ಅಧಿಕ

**ಏತನ್ಮಧ್ಯೆ, ಉತ್ತರ, ಮಧ್ಯ ಮತ್ತು ಪಶ್ಚಿಮ ಭಾರತದಲ್ಲಿ ತಾಪಮಾನ ಒಂದೇ ಸಮನೆ ಏರಿಕೆಯಾಗುತ್ತಿದೆಯಲ್ಲದೆ ಬಿಸಿಗಾಳಿಯ ತೀವ್ರತೆ ಅಧಿಕವಾಗಿದೆ. ಇದು ಕೂಡ ರೈತರ ಕೃಷಿ ಸಿದ್ಧತ ಕಾರ್ಯದ ಮೇಲೆ ಪರಿಣಾಮ ಬೀರಿದೆ. ಇನ್ನು ಮಧ್ಯಪ್ರಾಚ್ಯ ದೇಶಗಳಲ್ಲಿನ ಸಂಘರ್ಷದಿಂದಾಗಿ ದೇಶದಲ್ಲಿ ತೈಲ ಮತ್ತು ರಸಗೊಬ್ಬರ ಸಮಸ್ಯೆ ತಲೆದೋರಿದ್ದು ಈ ಬೆಳವಣಿಗೆಗಳು ಕೂಡ ಕೃಷಿ ವಲಯವನ್ನು ಆತಂಕದ ಮಡುವಿಗೆ ತಳ್ಳುವಂತೆ ಮಾಡಿದೆ.**

**ಸದ್ಯ ದೇಶದಲ್ಲಿ ಕೃಷಿ ಕಾರ್ಯಗಳಿಗೆ ಯಂತ್ರೋಪಕರಣಗಳ ಬಳಕೆ ವ್ಯಾಪಕವಾಗಿರುವುದರಿಂದ ತೈಲ ಬೆಲೆ ಏರಿಕೆ ಕೃಷಿ ವೆಚ್ಚವನ್ನು ಹೆಚ್ಚಿಸಲಿದೆ.**

ಇನ್ನು ವಿದೇಶಗಳಿಂದ ಆಮದಾಗುವ ರಸಗೊಬ್ಬರದ ಪ್ರಮಾಣದಲ್ಲಿ ಭಾರೀ ಇಳಿಕೆಯಾಗಿದ್ದು ರೈತರಿಗೆ ಸಕಾಲದಲ್ಲಿ ರಸಗೊಬ್ಬರ ಪೂರೈಕೆ ಕಷ್ಟಸಾಧ್ಯವಾಗಲಿರುವುದರಿಂದ ರೈತರು ಸಾವಯವ ಕೃಷಿಗೆ ಒತ್ತು ನೀಡಬೇಕು ಎಂದು ಕೇಂದ್ರ ಸರಕಾರ ಸಲಹೆ ನೀಡಿದೆ.

ರಸಗೊಬ್ಬರ ಬೆಲೆ ಹೆಚ್ಚಳ ಮತ್ತು ಕೊರತೆ ಕೂಡ ರೈತರ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಹಾಗೂ ಕೃಷ್ಯುತ್ಪಾದನೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇವೆಲ್ಲವನ್ನು ಕೇಂದ್ರ ಮತ್ತು ರಾಜ್ಯ ಸರಕಾರಗಳು ಗಂಭೀರವಾಗಿ ಪರಿಗಣಿಸಿ, ದೇಶದ ರೈತರ ಹಿತಾಸಕ್ತಿಯ ರಕ್ಷಣೆಗೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು. ಈ ಹಿಂದಿನ ವರ್ಷಗಳ ಸಾಧನೆಯ ಅಂಕಿಅಂಶಗಳಿಗೆ ಜೋತುಬೀಳದೆ ಮುಂಬರುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಅಗತ್ಯ ಕಾರ್ಯಯೋಜನೆಗಳನ್ನು ರೂಪಿಸಿ, ರೈತರಿಗೆ ಕಾಲಕಾಲಕ್ಕೆ ಸೂಕ್ತ ಸಲಹೆಸೂಚನೆಗಳನ್ನು ಮತ್ತು ನೆರವನ್ನು ನೀಡುವ ಮೂಲಕ ದೇಶದ ಕೃಷಿ ವಲಯಕ್ಕೆ ಹಿನ್ನಡೆಯಾಗದಂತೆ ಎಚ್ಚರಿಕೆ ವಹಿಸಬೇಕು.




• ಹಿಂದಿನ ಸಂಚಿಕೆಯಿಂದ **121ನೆಯ ಅಧ್ಯಾಯ**

ಸಕಲ ಆಗಮಗಳನ್ನೂ ತಿಳಿದವನು, ಮೃದುನಡೆಯವನು, ಶಾಂತ, ಬುಧಸೇವಿತ, ವೇದವೇದಾಂಗ ಪಾರಗ, ಸುಕುಮಾರ, ಧನುರ್ವೇದಿಗಳ ಬಲ್ಲಹ, ಅಕಲಂಕ, ತಾಮ್ರಾಕ್ಷ, ಮುನಿನಿಕರಪಾಲಕ, ದುಂದುಭಿಯಂತಹ ಕಂಠವುಳ್ಳವನು ನಮ್ಮ ರಘುನಾಯಕ. ಆತನದು ಶ್ಯಾಮವರ್ಣ, ಅಂಗಾಂಗಗಳೆಲ್ಲ ಪ್ರಮಾಣಬದ್ಧವಾದವು, ಸಮಭುಜಗಳು, ಸಮಾನ ತೊಡೆಗಳು, ಉನ್ನತ ಮಸ್ತಕವುಳ್ಳ ಮಾನುವೋತ್ತಮ. ಚತುರ, ಕಳೆಯುಳ್ಳಾತ, ಶೀಲವಂತ, ಸತ್ವಯುತ, ಸರ್ವಜನ ಮನೋಹರ, ಸ್ಥಿತಿಲಯಗಳನ್ನು ಮಾಡುವ ಪರಬೊಮ್ಮ ಶ್ರೀರಾಮ ಲಕ್ಷ್ಮಣನೂ ಅಂತೆಯೇ ಕಂಗೊಳಿಸುವನು. ಈ ಇಬ್ಬರೂ ಚೆಲುವರು ಸಾಲವೃಕ್ಷಗಳ ಕಾಡನ್ನು ದಾಟಿ ನಿನ್ನನ್ನು ಹುಡುಕುತ್ತ ಪಂಪಾಸರೋವರದ ತಟಕ್ಕೆ ಬಂದು ನೆಲಸಿದ್ದಾರೆ.

ಇಂದ್ರಸುತನಾದ ವಾಲಿಯನ್ನು ಸಂಹರಿಸಿ ಸುಗ್ರೀವನಿಗೆ ರಾಜ್ಯವನ್ನು ಕೊಟ್ಟು, ಮಾತು ಕೊಟ್ಟಿದ್ದಂತೆ ನಿನ್ನನ್ನು ಹುಡುಕುವ ಸಲುವಾಗಿ ಅಂಗದನ ನೇತೃತ್ವದಲ್ಲಿ ದಕ್ಷಿಣ ದಿಕ್ಕಿಗೆ ಬಂದು ಸಮುದ್ರವನ್ನು ಕಂಡು ಮಿಕ್ಕೆಲ್ಲರೂ ಹಿಂಜರಿಯಲು ನಾನು ಅದನ್ನು ದಾಟಿಕೊಂಡು ರಾತ್ರಿಯ ವೇಳೆ ಪಟ್ಟಣದಲ್ಲಿ ತಿರುಗಿ ರಾವಣನನ್ನು ನೋಡಿ ಈಗ ನಿನ್ನ ಚರಣಗಳನ್ನು ಕಂಡೆ. ನಾನು ಸುಳ್ಳು ಹೇಳುತ್ತಿಲ್ಲ, ಕಪಟಿಯಲ್ಲ, ನಿನ್ನ ಸೇವೆ ನನ್ನ ಭಾಗ್ಯವೆಂದು ಭಾವಿಸಿದ್ದೇನೆ. ನಿನಗೆ ಬೇಗ ರಘುವೀರನ ಸಾನ್ನಿಧ್ಯ ದೊರಕುತ್ತದೆ ಎಂದು ವಿವರವಾಗಿ ನುಡಿದು ಸಮಾಧಾನ ಹೇಳಿದ ಹನುಮಂತನು, ತನ್ನ ಬಳಿಯಿದ್ದ ಶ್ರೀರಾಮನ ಹೆಸರಿನ ಮುದ್ರೆಯುಂಗುರವನ್ನು ಹೊರತೆಗೆದ. ದೇವಿ, ಭೂವಲಯಕ್ಕೆ ಕ್ಷೇಮವನ್ನುಂಟುಮಾಡುವ, ಸರ್ವಮುನಿಜನರ ಜೀವನವೆನ್ನಿಸಿದ, ದನುಜಕುಲದಾವಾಗ್ನಿಯಾದ ಶ್ರೀ ರಘುವೀರನ ಮುದ್ರೆಯುಂಗುರವನ್ನು ನೋಡು ಎಂದು ಆಕೆಯ ಕೈಯಲ್ಲಿ ಅದನ್ನಿಟ್ಟು ನಮಸ್ಕರಿಸಿ ಕೈಮುಗಿದುಕೊಂಡು ರಾಮಸಂಕೀರ್ತನೆಯಲ್ಲಿ ತೊಡಗಿದ. ಬಾಡಿ ಹೋದ ಸಸ್ಯಗಳಿಗೆ ಮಳೆ ಹುಯ್ದಂತೆ, ಕೋಗಿಲೆಯ ಕೂಜನದಿಂದ ಸಂತಸ ತಾಳುವ ನಂದನದಂತೆ, ಪ್ರಾಣವೇ ಬಂದಂತೆ ಕೈಸೇರಿದ ಅಂಗುಲೀಯಕವನ್ನು ನೋಡಿ ಜಾನಕಿಯು ಪ್ರೇಮದಿಂದ ಕಣ್ಣಿಗೊತ್ತಿಕೊಂಡು ತನ್ನ ಬೈತಲೆಯ ಬಳಿ ಇರಿಸಿಕೊಂಡಳು.

ಪರಮಪುರುಷನ ಕುರುಹಿನಿಂದ ಪ್ರಕೃತಿಯು ಉಲ್ಲಾಸಗೊಳ್ಳುವಂತೆ ಆನಂದಗೊಂಡ ಧರಿತ್ರೀಜಾತೆಯು ಸಿರಿರಾಮಪುರದರಸನ ಚರಣಸಾರಸಗಳನ್ನು ಮನದಲ್ಲಿಯೇ ಅಪ್ಪಿಕೊಂಡು ಪರವಶಳಾಗಿ ಸುಖಾಕಾರದಂತೆ ಕಂಗೊಳಿಸಿದಳು. ಅದ್ರಿತನಯೆ, ರಾಮನ ಮುದ್ರೆಯುಂಗುರವನ್ನು ಭಾಮಿನೀಮಣಿಯು ನೋಡಿ ರಾಘವನನ್ನೇ ಕಂಡ ಹಾಗೆ ಸಂಭ್ರಮಪಟ್ಟು ಹಿಗ್ಗಿದಳು. ಮರುತ್ಸುತನನ್ನು ವಾತ್ಸಲ್ಯಮಯಳಾಗಿ ನೋಡಿ, ಭೀಮವಿಕ್ರಮನೇ, ವಾನರೋತ್ತಮನೇ, ನಿನ್ನ ನಿಷ್ಠೆಯ ಪಾರಮ್ಯವನ್ನು ಹೊಗಳುವುದು ನನಗೆ ಸಾಧ್ಯವೇ ಎಂದು ಹೊಗಳಿದಳು. ನೂರು ಯೋಜನದಗಲದ ಸಮುದ್ರವನ್ನು ಗೋಪಾದದ ಅಗಲವೆಂಬಂತೆ ಹಾರಿ ದಾಟಿ, ಬಲಶಾಲಿಗಳಾದ ರಾಕ್ಷಸಯೋಧರ ಆರ್ಭಟೆಗಳನ್ನು ಲೆಕ್ಕಿಸದೆ ರಾತ್ರಿಯಲ್ಲಿ ಸಂಚರಿಸಿ ಬಂದು ನನ್ನ ಪ್ರಾಣವನ್ನುಳಿಸಿದ ಕಪಿವೀರನೇ, ಸುರರಾಜಪೂಜಿತನೇ, ನಿನಗೆ ರಾವಣನ ಭಯ ಒಂದಿನಿತೂ ಇಲ್ಲ, ಶತ್ರುಗಳ ಲೆಕ್ಕವೇ ಇಲ್ಲ, ರಾತ್ರಿಯೆಲ್ಲ ಲಂಕೆಯನ್ನು ಸುತ್ತಿ ನನ್ನನ್ನು ಕಂಡು ಅಂಗುಲೀಯಕವನ್ನಿತ್ತು ಕಾಪಾಡಿದ ವೀರನೇ, ಮೂರು ಲೋಕಗಳಲ್ಲಿ ನಿನ್ನ ಸಮಾನರುಂಟೇ ದೇವಾನುದೇವತೆಗಳಿಗೂ ಮೀರಿದ ಬಲದಿಂದ ಕೂಡಿದ ನಿನ್ನನ್ನು ರಾಘವನು ಇಲ್ಲಿಗೆ ಕಳಿಸಿದ ಮಿಕ್ಕವರಿಂದ ಹೀಗೆ ಸಂಚರಿಸಲು ಸಾಧ್ಯವೇ ಕಪಿವೀರ, ಮಾರುತಕುಮಾರ, ಜಗದೇಕವೀರ ಎಂದು ಉಪಚರಿಸಿ, ರಾಮಲಕ್ಷ್ಮಣ ಸುಗ್ರೀವರೆಲ್ಲರೂ ಕ್ಷೇಮವೇ? ರಾಘವನಿಗೆ ನನ್ನಲ್ಲಿ ಪ್ರೇಮವು ಉಳಿದಿದೆಯೇ? ಅರಿನಿಗ್ರಹ ಮಾಡಿ ನನ್ನನ್ನು ಕರೆದೊಯ್ಯುವ ಯೋಚನೆಯಲ್ಲಿ ಆತನಿದ್ದಾನೆಯೇ?

ಮುಂದುವರೆಯುವುದು



ಕಲಾ ಸಾಹಿತ್ಯ

ವಿಶ್ವಾಸ್ ಡಿ. ಗೌಡ
ಲೇಖಕರು
ಸಾಮಾಜಿಕ ಚಿಂತಕ

# ಹರೇಕಳ ಹಾಜಬ್ಬ: ಶಿಕ್ಷಣದ ದೀಪ ಹಚ್ಚಿದ ಮಹಾನ್ ಸಾಧಕ

ಸಮಾಜದಲ್ಲಿ ದೊಡ್ಡ ಬದಲಾವಣೆಗಳನ್ನು ತರುವವರು ಎಲ್ಲರೂ ದೊಡ್ಡ ಹುದ್ದೆಗಳಲ್ಲಿ ಇರುವವರೇ ಆಗಬೇಕೆಂದಿಲ್ಲ. ಕೆಲವರು ಸಾಮಾನ್ಯ ಜೀವನ ನಡೆಸುತ್ತಿದ್ದರೂ ತಮ್ಮ ನಿಸ್ವಾರ್ಥ ಸೇವೆ ಮತ್ತು ಸಂಕಲ್ಪದ ಮೂಲಕ ಅಸಾಮಾನ್ಯ ವ್ಯಕ್ತಿಗಳಾಗಿ ಬೆಳೆಯುತ್ತಾರೆ. ಅಂತಹ ಅಪರೂಪದ ವ್ಯಕ್ತಿತ್ವಗಳಲ್ಲಿ ಪ್ರಮುಖರು ಹರೇಕಳ ಹಾಜಬ್ಬ. ತಮ್ಮ ಶಿಕ್ಷಣದ ಕನಸಿನ ಮೂಲಕ ಸಾವಿರಾರು ಮಕ್ಕಳ ಭವಿಷ್ಯಕ್ಕೆ ಬೆಳಕು ತಂದ ಮಹಾನ್ ಸಮಾಜಸೇವಕರಾಗಿ ಅವರು ದೇಶದಾದ್ಯಂತ ಗೌರವ ಪಡೆದಿದ್ದಾರೆ. ಹರೇಕಳ ಹಾಜಬ್ಬ ಅವರು ದಕ್ಷಿಣ ಕನ್ನಡ ಜಿಲ್ಲೆಯ ಹರೇಕಳ ಎಂಬ ಪುಟ್ಟ ಹಳ್ಳಿಯಲ್ಲಿ ಜನಿಸಿದರು. ಅವರು ಬಹಳ ಬಡ ಕುಟುಂಬದಲ್ಲಿ ಬೆಳೆದವರು. ಆರ್ಥಿಕ ಸಮಸ್ಯೆಗಳ ಕಾರಣದಿಂದ ಅವರಿಗೆ ವಿದ್ಯಾಭ್ಯಾಸ ಮಾಡುವ ಅವಕಾಶ ಸಿಗಲಿಲ್ಲ. ಜೀವನ ಸಾಗಿಸಲು ಅವರು ಮಂಗಳೂರಿನ ಬಸ್ ನಿಲ್ದಾಣದ ಬಳಿ ಕಿತ್ತಳೆ ಹಣ್ಣು ಮಾರಾಟ ಮಾಡುವ ಕೆಲಸ ಆರಂಭಿಸಿದರು. ದಿನವೂ ದುಡಿದು ಕುಟುಂಬವನ್ನು ನಡೆಸುತ್ತಿದ್ದ ಹಾಜಬ್ಬ ಅವರ ಮನಸ್ಸಿನಲ್ಲಿ ಶಿಕ್ಷಣದ ಬಗ್ಗೆ ಅಪಾರ ಗೌರವವಿತ್ತು. ತಾವು ಓದಲು ಸಾಧ್ಯವಾಗದ ನೋವು ಅವರನ್ನು ಸದಾ ಕಾಡುತ್ತಿತ್ತು.

ಒಂದು ದಿನ ಅವರ ಜೀವನದಲ್ಲಿ ಮಹತ್ವದ ಘಟನೆ ನಡೆಯಿತು. ಕೆಲ ವಿದೇಶಿ ಪ್ರವಾಸಿಗರು ಹಣ್ಣು ಖರೀದಿಸಲು ಬಂದಾಗ ಅವರಿಗೆ ಇಂಗ್ಲಿಷ್‌ನಲ್ಲಿ ಪ್ರಶ್ನೆ ಕೇಳಿದರು. ಆದರೆ ಹಾಜಬ್ಬ ಅವರಿಗೆ ಅದನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಗಲಿಲ್ಲ. ಆಗ ತಮ್ಮ ಶಿಕ್ಷಣದ ಕೊರತೆಯ ನೋವನ್ನು ಅವರು ತುಂಬ ಆಳವಾಗಿ ಅನುಭವಿಸಿದರು. ''ನಾನು ಓದಿಲ್ಲ, ಆದರೆ ನನ್ನ ಊರಿನ ಮಕ್ಕಳು ಓದಬೇಕು'' ಎಂಬ ಸಂಕಲ್ಪವನ್ನು ಅವರು ಅಂದೇ ಕೈಗೊಂಡರು. ಅದೇ ಅವರ ಬದುಕಿನ ತಿರುವು ಬಿಂದುವಾಯಿತು. ಅವರ ಸಾಧನೆಗೆ ಅನೇಕ ಪ್ರಶಸ್ತಿಗಳು ಸಂದಿವೆ. ಭಾರತ ಸರ್ಕಾರವು ಅವರಿಗೆ ''ಪದ್ಮಶ್ರೀ'' ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಇದು ಕೇವಲ ಅವರ ವೈಯಕ್ತಿಕ ಸಾಧನೆಗೆ ನೀಡಿದ ಗೌರವವಲ್ಲ ಶಿಕ್ಷಣಕ್ಕಾಗಿ ಹೋರಾಡುವ ಪ್ರತಿಯೊಬ್ಬ ಸಾಮಾನ್ಯ ವ್ಯಕ್ತಿಯ ಕನಸಿಗೂ ದೊರೆತ ಮಾನ್ಯತೆ ಆಗಿದೆ. ಇಂದು ಹರೇಕಳ ಹಾಜಬ್ಬ ಅವರು ದೇಶದ ಅನೇಕ ಯುವಕರಿಗೆ ಮತ್ತು ಸಮಾಜಸೇವಕರಿಗೆ ಸ್ಫೂರ್ತಿಯಾಗಿದ್ದಾರೆ.

ಹರೇಕಳ ಹಾಜಬ್ಬ ಅವರ ಜೀವನ ನಮಗೆ ಹಲವು ಮಹತ್ವದ ಪಾಠಗಳನ್ನು ಕಲಿಸುತ್ತದೆ. ಶಿಕ್ಷಣವೇ ಸಮಾಜದ ಅಭಿವೃದ್ಧಿಗೆ ಮೂಲ ಎಂಬುದನ್ನು ಅವರು ತಮ್ಮ ಕಾರ್ಯದ ಮೂಲಕ ತೋರಿಸಿದ್ದಾರೆ. ಹಣ ಅಥವಾ ಹುದ್ದೆ ಇದ್ದರೆ ಮಾತ್ರ ಸೇವೆ ಮಾಡಬಹುದು ಎನ್ನುವುದು ತಪ್ಪು. ಒಳ್ಳೆಯ ಮನಸ್ಸು, ದೃಢ ಸಂಕಲ್ಪ ಮತ್ತು ಸಮಾಜದ ಬಗ್ಗೆ ಕಾಳಜಿ ಇದ್ದರೆ ಸಾಕು ಎಂಬುದನ್ನು ಅವರ ಬದುಕು ಸಾರುತ್ತದೆ. ಇಂದಿನ ಸಮಾಜದಲ್ಲಿ ಅನೇಕರು ಸ್ವಾರ್ಥದ ಬದುಕಿನಲ್ಲಿ ಮುಳುಗಿರುವಾಗ ಹರೇಕಳ



ಹಾಜಬ್ಬ ಅವರಂತಹ ಮಹನೀಯರು ಮಾನವೀಯ ಮೌಲ್ಯಗಳ ಪ್ರತೀಕವಾಗಿ ಕಾಣಿಸುತ್ತಾರೆ. ಅವರು ನಿರ್ಮಿಸಿದ ಶಾಲೆ ಕೇವಲ ಕಟ್ಟಡವಲ್ಲ ಅದು ಸಾವಿರಾರು ಮಕ್ಕಳ ಭವಿಷ್ಯಕ್ಕೆ ಬೆಳಕು ನೀಡಿದ ಜ್ಞಾನ ಮಂದಿರವಾಗಿದೆ. ಅವರ ಸೇವೆ ಮುಂದಿನ ಪೀಳಿಗೆಗೂ ಪ್ರೇರಣೆಯಾಗಲಿದೆ. ಒಟ್ಟಿನಲ್ಲಿ, ಹರೇಕಳ ಹಾಜಬ್ಬ ಅವರು ಸಾಮಾನ್ಯ ವ್ಯಕ್ತಿಯಿಂದ ಅಸಾಮಾನ್ಯ ಸಾಧಕರಾಗಿ ಬೆಳೆದ ಮಹಾನ್ ವ್ಯಕ್ತಿತ್ವ. ಅವರ ಜೀವನ ಹೋರಾಟ, ಸೇವೆ ಮತ್ತು ಶಿಕ್ಷಣದ ಮಹತ್ವವನ್ನು ಸಾರುವ ಪ್ರೇರಣಾದಾಯಕ ಕಥೆಯಾಗಿದೆ. ಇಂತಹ ಮಹನೀಯರನ್ನು ಸ್ಮರಿಸುವುದು ಮತ್ತು ಅವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

**ಹರೇಕಳ ಹಾಜಬ್ಬ ಅವರು ದಿನವೂ ಕಿತ್ತಳೆ ಮಾರಾಟದಿಂದ ಉಳಿಸಿಕೊಂಡ ಹಣವನ್ನು ಶಾಲೆ ನಿರ್ಮಾಣಕ್ಕಾಗಿ ಸಂಗ್ರಹಿಸಲು ಪ್ರಾರಂಭಿಸಿದರು. ತಮ್ಮ ಊರಿನಲ್ಲಿ ಶಾಲೆಯೇ ಇರಲಿಲ್ಲ. ಮಕ್ಕಳು ದೂರದ ಊರಿಗೆ ಹೋಗಿ ಓದಬೇಕಾಗುತ್ತಿತ್ತು. ಹಲವರು ಮಧ್ಯದಲ್ಲೇ ವಿದ್ಯಾಭ್ಯಾಸ ನಿಲ್ಲಿಸುತ್ತಿದ್ದರು. ಇದನ್ನು ಮನಗಂಡ ಹಾಜಬ್ಬ ಅವರು ತಮ್ಮ ಶ್ರಮದ ಹಣವನ್ನು ಸಮಾಜದ ಹಿತಕ್ಕಾಗಿ ಬಳಸಲು ನಿರ್ಧರಿಸಿದರು. ಅನೇಕ ವರ್ಷಗಳ ಪರಿಶ್ರಮದ ನಂತರ ಅವರು ಸರ್ಕಾರ ಮತ್ತು ಗ್ರಾಮಸ್ಥರ ಸಹಕಾರದಿಂದ ತಮ್ಮ ಊರಿನಲ್ಲಿ ಶಾಲೆ ಆರಂಭಿಸುವ ಕನಸನ್ನು ನನಸಾಗಿಸಿದರು. ಹಾಜಬ್ಬ ಅವರ ಸೇವಾಭಾವನೆ ಮತ್ತು ನಿಸ್ವಾರ್ಥ ಪ್ರಯತ್ನ ಸಮಾಜದ ಗಮನ ಸೆಳೆಯಿತು. ಅವರ ಜೀವನವೇ ಒಂದು ಪ್ರೇರಣೆಯ ಕಥೆಯಾಯಿತು. ಶಿಕ್ಷಣದ ಮಹತ್ವವನ್ನು ಅರಿತ ಅವರು ತಮ್ಮದೇ ಬದುಕನ್ನು ತ್ಯಾಗಮಯವಾಗಿ ರೂಪಿಸಿಕೊಂಡರು. ಒಂದು ಸಾಮಾನ್ಯ ಹಣ್ಣು ವ್ಯಾಪಾರಿಯೂ ಸಮಾಜದಲ್ಲಿ ದೊಡ್ಡ ಬದಲಾವಣೆ ತರಬಹುದು ಎಂಬುದನ್ನು ಅವರು ಸಾಬೀತುಪಡಿಸಿದರು.**

# ಮಲ್ಲರ ಹೂಕಿವಿ: ಅಖಾಡದ ರಕ್ತಸಿಕ್ತ ಮುದ್ರೆ!



ಅಂತರಂಗದ ಮಾತು

ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು

ಗರಡಿಯಲ್ಲಿ ಪಳಗಿದ ಪೈಲ್ವಾನರ ಕಿವಿಗಳು ಹೂಕೋಸಿನಂತೆ ಉಬ್ಬಿರುವುದನ್ನು ನಾವು ಕಂಡಿದ್ದೇವೆ. ಇದೇ ಕಾಲಿಫ್ಲವರ್ ಇಯರ್ ಅಥವಾ ಹೆಮಟೋಮಾ ಆರಿಸ್. ನೋಡಲು ವಿಚಿತ್ರವೆನಿಸಿದರೂ, ಇದು ಮಲ್ಲನ ವರ್ಷಗಳ ಸಂಘರ್ಷದ ವೈಜ್ಞಾನಿಕ ಗುರುತು.

ನಮ್ಮ ಕಿವಿಯ ಹೊರಭಾಗ ಮೃದುಮೂಳೆ, ಅಂದರೆ ಕಾರ್ಟಿಲೇಜ್‌ನಿಂದ ಕೂಡಿದೆ. ಇದಕ್ಕೆ ನೇರ ರಕ್ತಪೂರೈಕೆ ಇಲ್ಲ ಚರ್ಮದ ಮೂಲಕವೇ ಪೋಷಣೆ ದೊರೆಯುತ್ತದೆ. ಅಖಾಡದಲ್ಲಿ ಎದುರಾಳಿಯ ಹಿಡಿತಕ್ಕೆ ಸಿಕ್ಕಾಗ, ಮಣ್ಣಿಗೆ ಕಿವಿ ಬಲವಾಗಿ ಉಜ್ಜಿದಾಗ ಚರ್ಮದಡಿಯ ಸೂಕ್ಷ್ಮ ರಕ್ತನಾಳಗಳು ಒಡೆದು ರಕ್ತ ಹೆಪ್ಪುಗಟ್ಟುತ್ತದೆ. ಆಗ ಚರ್ಮ ಮೃದುಮೂಳೆಯಿಂದ ಬೇರ್ಪಟ್ಟು ಪೋಷಣೆ ನಿಂತುಹೋಗುತ್ತದೆ. ದೇಹ ಅದನ್ನು ಸರಿಪಡಿಸಲು ಗಟ್ಟಿ ನಾರಿನ ಅಂಗಾಂಶವನ್ನು ಬೆಳೆಸುತ್ತದೆ. ಈ ಅನಿಯಮಿತ ಬೆಳವಣಿಗೆಯಿಂದ ಕಿವಿ ಗಂಟುಗಂಟಾಗಿ ಹೂಕೋಸಿನ ಆಕಾರ ತಳೆಯುತ್ತದೆ.

### ರಕ್ತದಲ್ಲಿ ಸೋಂಕಾದರೆ ಅಪಾಯ

**ಪೆಟ್ಟು ಬಿದ್ದೊಡನೆ ಕಿವಿ ಕೆಂಪಾಗಿ, ಬಲೂನಿನಂತೆ ಊದಿ, ತೀವ್ರ ನೋವು ಕಾಣಿಸಿಕೊಳ್ಳುತ್ತದೆ. ಕಾಲಕ್ರಮೇಣ ಊತ ಕಲ್ಲಿನಂತೆ ಗಟ್ಟಿಯಾಗಿ ಶಾಶ್ವತ ಹೂಕಿವಿಯಾಗುತ್ತದೆ. ತಲೆನೋವು, ಕಿವಿ ಕಿರಿಕಿರಿ ಕಾಡಬಹುದು. ಊತ ಶ್ರವಣ ಮಾರ್ಗವನ್ನು ಮುಚ್ಚಿದರೆ ಕೇಳುವ ಶಕ್ತಿ ಕುಂದುತ್ತದೆ. ಹೆಪ್ಪುಗಟ್ಟಿದ ರಕ್ತದಲ್ಲಿ ಸೋಂಕಾದರೆ ಅಪಾಯ.**

ಹೀಗಾಗಿಯೇ ಇಂದು ಇಯರ್ ಗಾರ್ಡ್ ಬಳಕೆ ಹೆಚ್ಚಿದೆ. ಪೆಟ್ಟು ಬಿದ್ದ ತಕ್ಷಣ ಐಸ್ ಪ್ಯಾಕ್ ಇಡಬೇಕು. ಊತ ಹೆಚ್ಚಿದ್ದರೆ ವೈದ್ಯರಿಂದ ದ್ರವವನ್ನು ತೆಗೆಸಬೇಕು. ಆಗ ಹೂಕಿವಿ ತಪ್ಪಿಸಬಹುದು.

ಹಿಂದೆ ಹೂಕಿವಿ ಅನುಭವದ ಹೆಗ್ಗುರುತಾಗಿತ್ತು. ಆದರೆ ವೈಜ್ಞಾನಿಕವಾಗಿ ತಡೆಯುವುದೇ ಜಾಣ್ಮೆ. ಗರಡಿಯ ಮಣ್ಣು ಕಸುವು ನೀಡುವಂತೆ, ಅಖಾಡದ ಎಚ್ಚರ ಗಾಯದಿಂದ ಪಾರುಮಾಡುತ್ತದೆ. ಇಂದಿನ ಮಲ್ಲ ಶಕ್ತಿಯ ಜೊತೆಗೆ ವೈದ್ಯಕೀಯ ಅರಿವನ್ನೂ ಹೊಂದಿರಬೇಕು.

# ದೇಶದ ಜನರಲ್ಲಿ ಹೆಚ್ಚಿದ ವಿಟಮಿನ್ ಬಿ12, ಫೋಲೇಟ್ ಕೊರತೆ ಯಾರ ಮೇಲೆ ಪರಿಣಾಮ

ದೇಹದ ಆರೋಗ್ಯಕ್ಕಾಗಿ ಅತ್ಯಂತ ಪರಿಣಾಮಕಾರಿ ಮಂತ್ರವೆಂದರೆ ಪೌಷ್ಟಿಕ ಭರಿತ ಆಹಾರ ಸೇವನೆ. ದೇಹಕ್ಕೆ ಅಗತ್ಯ ಪೌಷ್ಟಿಕಾಂಶದ ಅವಶ್ಯಕತೆಗಳನ್ನು ಸುಲಭವಾಗಿ ಪೂರೈಸುವ ಆಹಾರವನ್ನು ಪ್ರತಿಯೊಬ್ಬರೂ ತಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬೇಕು ಎಂದು ತಜ್ಞರು ತಿಳಿಸುತ್ತಾರೆ. ಹೆಚ್ಚಿನ ಭಾರತೀಯರು ಅತ್ಯುತ್ತಮ ಆರೋಗ್ಯಕ್ಕೆ ಅಗತ್ಯವಾದ ಪೋಷಕಾಂಶಗಳನ್ನು ಪಡೆಯುತ್ತಿಲ್ಲ ಎಂದು ಹಲವು ವರದಿಗಳು ಆತಂಕ ವ್ಯಕ್ತಪಡಿಸಿವೆ. ಇದರ ಪರಿಣಾಮವಾಗಿ ವಿಟಮಿನ್ ಬಿ12, ಕಬ್ಬಿಣ ಹಾಗೂ ಫೋಲೇಟ್‌ನಂತಹ ಅಗತ್ಯ ಅಂಶಗಳ ಕೊರತೆಗಳು ವೇಗವಾಗಿ ಹೆಚ್ಚುತ್ತಿವೆ.

ಭಾರತೀಯರಲ್ಲಿ ವಿಟಮಿನ್ ಬಿ12 ಕೊರತೆ ಒಂದು ಮೌನ ಆರೋಗ್ಯ ಬಿಕ್ಕಟ್ಟಾಗಿದೆ. ಇದು ಒಟ್ಟಾರೆ ಜನಸಂಖ್ಯೆಯ ಸರಿಸುಮಾರು ಶೇ.47ರಿಂದ ಶೇ.51ರಷ್ಟು ಪರಿಣಾಮ ಬೀರುತ್ತದೆ. ಅದೇ ರೀತಿ ಅಂದಾಜುಗಳ ಪ್ರಕಾರ, ಜನಸಂಖ್ಯೆಯ ಸುಮಾರು ಶೇ.37ರಷ್ಟು ಜನರು ಫೋಲೇಟ್ (ವಿಟಮಿನ್ ಬಿ9) ಕೊರತೆಯಿಂದ ಬಳಲುತ್ತಿದ್ದಾರೆ.

ಈ ವಿಟಮಿನ್ಸ್ ಕೊರತೆಯು ಆಯಾಸ, ದೌರ್ಬಲ್ಯ ಹಾಗೂ ತಲೆತಿರುಗುವಿಕೆಯಿಂದ ಹಿಡಿದು ಕೈ ಹಾಗೂ ಕಾಲುಗಳಲ್ಲಿ ಜುಮ್ಮೆನಿಸುವಿಕೆ ಸಂವೇದನೆಗಳವರೆಗೆ ಹಲವಾರು ಸಮಸ್ಯೆಗಳಿಗೆ ಕಾರಣವಾಗಬಹುದು ಹಾಗೂ ಹಲವಾರು ಗಂಭೀರ ಆರೋಗ್ಯ ಸಮಸ್ಯೆಗಳಿಗೂ ಕೂಡ ಕಾರಣವಾಗಬಹುದು.

ಇತ್ತೀಚಿನ ಅಧ್ಯಯನ ತಿಳಿಸುವ ಪ್ರಕಾರ, ವಿಟಮಿನ್ ಬಿ12 ಮತ್ತು ಫೋಲೇಟ್ ಕೊರತೆಗಳು ದೇಹದ ಮೇಲೆ ಯಾವ ರೀತಿ ಪರಿಣಾಮ ಬೀರುತ್ತವೆ ಪುರುಷರು ಹಾಗೂ ಮಹಿಳೆಯರ ಮೇಲೆ ಈ ವಿಟಮಿನ್ಸ್ ನಿರ್ದಿಷ್ಟವಾಗಿ ಉಂಟಾಗುವ ಪರಿಣಾಮಗಳ ಕುರಿತು ಹಲವಾರು ಪ್ರಮುಖ ವಿಷಯಗಳನ್ನು ಬಹಿರಂಗಪಡಿಸಿದೆ.

ಜಪಾನ್‌ನ ಒಸಾಕಾ ಮೆಟ್ರೋಪಾಲಿಟನ್ ವಿಶ್ವವಿದ್ಯಾಲಯದಿಂದ ನಡೆದ ಅಧ್ಯಯನದಲ್ಲಿ ವಿಟಮಿನ್ ಬಿ12 ಮತ್ತು ಫೋಲೇಟ್ (ವಿಟಮಿನ್ ಬಿ9) ಕೊರತೆ ರಕ್ತದಲ್ಲಿನ ಹೋಮೋಸಿಸ್ಟೀನ್‌ನ ಏರಿಕೆ ಮಟ್ಟಕ್ಕೆ ಸಂಬಂಧಿಸಿವೆ ಎಂದು ವರದಿ ತಿಳಿಸುತ್ತದೆ. ಈ ಸ್ಥಿತಿಯು ಪುರುಷರಲ್ಲಿ ತೀವ್ರ ದೈಹಿಕ ಆಯಾಸ ಹಾಗೂ ಮಹಿಳೆಯರಲ್ಲಿ ಆಸಕ್ತಿಯ ಕೊರತೆಗೆ ಕಾರಣವಾಗಬಹುದು. ಆರೋಗ್ಯವಂತ ವ್ಯಕ್ತಿಗಳಲ್ಲಿ ವಿಟಮಿನ್ ಬಿ12, ಫೋಲೇಟ್ ಹಾಗೂ ಆಯಾಸದ ನಡುವಿನ ಸಂಬಂಧವು ಈ ರೀತಿಯ ಮೊದಲ ವರದಿಯನ್ನು ಪ್ರತಿನಿಧಿಸುತ್ತದೆ ಎಂದು ಸಂಶೋಧಕ ಹಿರೋಕಿ ಕನೌಚಿ ವಿವರಿಸುತ್ತಾರೆ. ಇಲ್ಲಿಯವರೆಗೆ ರಕ್ತದಲ್ಲಿನ ಹೋಮೋಸಿಸ್ಟೀನ್‌ನ ಹೆಚ್ಚಿದ ಮಟ್ಟಗಳು ಪ್ರಾಥಮಿಕವಾಗಿ ಹೃದ್ರೋಗ, ಬುದ್ಧಿಮಾಂದ್ಯತೆ ಹಾಗೂ ಮುರಿತಗಳ ಅಪಾಯವನ್ನು ಹೆಚ್ಚಿಸುತ್ತವೆ ಎಂಬುದು ತಿಳಿದಿತ್ತು.

ಭವಿಷ್ಯದಲ್ಲಿ ಆಯಾಸ ಮತ್ತು ಪ್ರೇರಣೆಯ ಮೇಲಿನ ಪರಿಣಾಮದತ್ತಲೂ ಗಮನ ಹರಿಸಬೇಕು ಎಂದು ಸಂಶೋಧನೆ ಸೂಚಿಸುತ್ತದೆ. ಹೋಮೋಸಿಸ್ಟೀನ್ ಎಂಬುದು ಪ್ರೋಟೀನ್‌ಗಳ ಜೀರ್ಣಕ್ರಿಯೆಯ ಸಮಯದಲ್ಲಿ ದೇಹದಲ್ಲಿ ಉತ್ಪತ್ತಿಯಾಗುವ ಒಂದು ರೀತಿಯ ಅಮೈನೋ ಆಮ್ಲವಾಗಿದೆ. ದೇಹದಲ್ಲಿ ಈ ನಿರ್ದಿಷ್ಟ ವಿಟಮಿನ್ಸ್ ಕೊರತೆಯು ಹೋಮೋಸಿಸ್ಟೀನ್ ಮಟ್ಟದಲ್ಲಿ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದರ ಪರಿಣಾಮವಾಗಿ ಹೃದ್ರೋಗ ಹಾಗೂ ಪಾರ್ಶ್ವವಾಯು ಅಪಾಯ ಹೆಚ್ಚಿಸುತ್ತದೆ. ನ್ಯೂಟ್ರಿಯಂಟ್ಸ್ ಜರ್ನಲ್‌ನಲ್ಲಿ ಪ್ರಕಟವಾದ ಸಂಶೋಧನಾ ವರದಿಯು ಆಹಾರದ ಅಸಮತೋಲನದಿಂದ ಉಂಟಾಗುವ ಪೌಷ್ಟಿಕಾಂಶದ ಸಮಸ್ಯೆಗಳ ಮೇಲೆ ಕೇಂದ್ರೀಕರಿಸಿದೆ. ನಿರ್ದಿಷ್ಟವಾಗಿ ನೀರಿನಲ್ಲಿ ಕರಗುವ ಜೀವಸತ್ವಗಳಲ್ಲಿನ ಕೊರತೆಗಳ ಬಗ್ಗೆ ಕೇಂದ್ರೀಕರಿಸುತ್ತದೆ. ಸಂಶೋಧಕರು ಫೋಲೇಟ್ ಮತ್ತು ವಿಟಮಿನ್ ಬಿ12ನಲ್ಲಿನ ಕೊರತೆಗಳಿಂದ ಆಯಾಸಕ್ಕೆ ಕಾರಣವಾಗುತ್ತದೆ, ಹೋಮೋಸಿಸ್ಟೀನ್‌ನ ಪಾತ್ರದ ಮೇಲೆ ತಮ್ಮ ಅಧ್ಯಯನ ಒತ್ತು ನೀಡುತ್ತದೆ.

ಅಧ್ಯಯನದಲ್ಲಿ 600ಕ್ಕೂ ಹೆಚ್ಚು ಆರೋಗ್ಯವಂತ ಜಪಾನೀಸ್ ಭಾಗವಹಿಸುವವರಲ್ಲಿ ಹೋಮೋಸಿಸ್ಟೀನ್, ಫೋಲೇಟ್ ಹಾಗೂ ವಿಟಮಿನ್ ಬಿ12 ಮಟ್ಟವನ್ನು ಅಳೆಯಲಾಯಿತು.

ಹೆಚ್ಚಿನ ಜನರಲ್ಲಿ ಆಯಾಸ ಮತ್ತು ಪ್ರೇರಣೆಯ ಮಟ್ಟವನ್ನು ನಿರ್ಣಯಿಸಲಾಯಿತು.

# ಅಂತರಾಷ್ಟ್ರೀಯ ಮಟ್ಟದ ಫೋಟೋ ಮತ್ತು ವಿಡಿಯೋ ಪ್ರದರ್ಶನ ಮತ್ತು ಮಾರಾಟ ಜೂನ್ 12ರಿಂದ 14ರವರೆಗೆ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ವಿಡಿಯೋ ಮತ್ತು ಫೋಟೋ ಅಸೋಸಿಯೇಷನ್ ವತಿಯಿಂದ ಜೂನ್ 12, 13 ಮತ್ತು 14 ರಂದು ಮೂರು ದಿನಗಳ ಕಾಲ ಕರ್ನಾಟಕ ರಾಜ್ಯ ಪತ್ರಿಕಾ ಛಾಯಾಗ್ರಾಹಕರ ಸಂಘ ಇವರ ಸಹಯೋಗದೊಂದಿಗೆ ತ್ರಿಪುರ ವಾಸಿನಿ ಅರಮನೆ ಮೈದಾನದಲ್ಲಿ ಅಂತರಾಷ್ಟ್ರೀಯ ಮಟ್ಟದ ಫೋಟೋ ಮತ್ತು ವಿಡಿಯೋ ಪ್ರದರ್ಶನ ಮತ್ತು ಮಾರಾಟ ಏರ್ಪಡಿಸಲಾಗಿದೆ ಇದರ ಕುರಿತು ಮಾಧ್ಯಮಗಳಿಗೆ ಅಧ್ಯಕ್ಷರಾದ ಹೆಚ್.ವಿ.ಕೃಷ್ಣಪ್ಪರವರು, ಕಾರ್ಯದರ್ಶಿ ಎ.ಜಗದೀಶ್‌ರವರು ಮಾಹಿತಿ ನೀಡಿದರು.

ಕ್ಯಾಮರಾ ಆಲ್ಬಮ್ ಸಾಫ್ಟ್‌ವೇರ್ ಪ್ರಿಂಟರ್ ಪ್ರೇಮ್, ಲ್ಯಾಮಿನೇಶನ್ ಸೇರಿದಂತೆ ಛಾಯಾಗ್ರಹಣ ಕ್ಷೇತ್ರದ ಹಲವಾರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ 150ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. 5,000ಕ್ಕೂ ಹೆಚ್ಚು ಛಾಯಾಗ್ರಹಣ ಉಪಕರಣಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ ಈ ವಸ್ತು ಪ್ರದರ್ಶನವನ್ನು ರಾಜ್ಯದ ಹಲವಾರು ತಾಲ್ಲೂಕು, ಜಿಲ್ಲಾ, ಹಾಗೂ ರಾಜ್ಯಮಟ್ಟದ ಛಾಯಾಗ್ರಹರ ಸಂಘ ಸಂಸ್ಥೆಗಳು ಬೆಂಬಲಿಸಿವೆ ಕ್ಯಾಮರಾ ಅಲ್ಬಮ್ ಸಾಫ್ಟ್‌ವೇರ್ ಪ್ರಿಂಟರ್ ಪ್ರೇಮ್, ಲ್ಯಾಮಿನೇಶನ್ ಸೇರಿದಂತೆ ಛಾಯಾಗ್ರಹಣ ಕ್ಷೇತ್ರದ ಹಲವಾರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ 150ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ.

ಹಾಗೂ 5,000ಕ್ಕೂ ಹೆಚ್ಚು ಛಾಯಾಗ್ರಹಣ ಉಪಕರಣಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ ಈ ವಸ್ತು ಪ್ರದರ್ಶನವನ್ನು ರಾಜ್ಯದ ಹಲವಾರು ತಾಲ್ಲೂಕು, ಜಿಲ್ಲಾ, ಹಾಗೂ ರಾಜ್ಯಮಟ್ಟದ ಛಾಯಾಗ್ರಹರ ಸಂಘ ಸಂಸ್ಥೆಗಳು ಬೆಂಬಲಿಸಿವೆ ಛಾಯಾಗ್ರಹಣ ಕ್ಷೇತ್ರ ಅತ್ಯಂತ ತಾಂತ್ರಿಕವಾಗಿ ಕೂಡಿರುವ ಕ್ಷೇತ್ರವಾಗಿದೆ ಇದರಲ್ಲಿ ರಾಷ್ಟ್ರೀಯ ಹಾಗೂ ಹಲವಾರು ಕಂಪನಿಯಗಳು ತಂತ್ರಜ್ಞಾನದ ಬೆಳವಣಿಗಾಗಿ ಶ್ರಮಿಸುತ್ತಿವೆ ತಂತ್ರಜ್ಞಾನದ ಬೆಳವಣಿಗೆ ಜೊತೆಯಲ್ಲಿ ಕಾಲಕ್ರಮೇಣ ಬೆಳೆಯುತ್ತಿರುವ ತಂತ್ರಜ್ಞಾನವನ್ನು ಲಕ್ಷಾಂತರ ಛಾಯಾಗ್ರಾಹಕರಿಗೆ ತಲುಪಿಸುವುದು ಒಂದು ಸವಾಲಾಗಿದೆ ಹಾಗೂ ಛಾಯಾಗ್ರಾಹಕರು ಎಲ್ಲಾ ಮಾಹಿತಿಯನ್ನು ಪಡೆಯುವುದು ಕಷ್ಟವಾಗಿದ್ದ ಕಾಲದಲ್ಲಿರವರು ಫೋಟೋ ಟುಡೆ ವಸ್ತು ಪ್ರದರ್ಶನಗಳನ್ನು 23 ವರ್ಷಗಳಿಂದ 150ಕ್ಕೂ ಹೆಚ್ಚು ವಸ್ತು ಪ್ರದರ್ಶನಗಳನ್ನು ಭಾರತದ ಹಲವಾರು ನಗರಗಳಲ್ಲಿ ಹಾಗೂ ವಿದೇಶದಲ್ಲೂ ಏರ್ಪಡಿಸುತ್ತ ಛಾಯಾಗ್ರಾಹಕ ಹಾಗೂ ರಾಷ್ಟ್ರೀಯ ಹಾಗೂ ಕಂಪನಿಗಳ ಮಧ್ಯ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಇದೆ 12, 13 ಮತ್ತು 14ನೇ ಜೂನ್ 2026. ಬೈಸೇಲ್ ಇಂಟ್ರಾಕ್ಷನ್ಸ್ ಪ್ರೈವೈಟ್ ಲಿಮಿಟೆಡ್ ಮತ್ತು ಕರ್ನಾಟಕ ವಿಡಿಯೋ ಫೋಟೋ ಅಸೋಷಿಯೇಶನ್ ರವರ ಫೋಟೊ ಟುಡೆ ಮತ್ತು ಅಂತರಾಷ್ಟ್ರೀಯ ಮಟ್ಟದ ಫೋಟೋಗ್ರಫಿ ವೀಡಿಯೋಗ್ರಫಿ ಅಲ್ಬಮ್ ಮತ್ತು ಡಿಜಿಟಲ್ ಇಮೇಜಿಂಗ್ ಪ್ರದರ್ಶನ ಬೆಂಗಳೂರು ಮಹಾನಗರದ ತ್ರಿಪುರ ವಾಸಿನಿ ಅರಮನೆ ಮೈದಾನದಲ್ಲಿ ನಡೆಯಲಿದೆ ಮೂರು ದಿನಗಳ ಕಾಲ ನಡೆಯಲಿರುವ ಈ ಪ್ರದರ್ಶನದಲ್ಲಿ ಕಂಪನಿಗಳು ನೇರವಾಗಿ ಭಾಗವಹಿಸಲಿವೆ.



ವಸ್ತು ಪ್ರದರ್ಶನದಲ್ಲಿ ಉಚಿತ ಕ್ಯಾಮರ ಸರ್ವೀಸ್, ಉಚಿತ ಕಾರ್ಯಾಗಾರಗಳು, ಉಚಿತ ಕಣ್ಣಿನ ತಪಾಸಣೆ, ಮಾಡೆಲಿಂಗ್ ಫೋಟೊಗ್ರಫಿ, ಹಾಗೂ ಫ್ಯಾಶನ್ ಶೋ ಹಮ್ಮಿಕೊಳ್ಳಲಾಗಿದೆ ಛಾಯಾಗ್ರಾಹಕ ಬಂಧಗಳು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರ್ನಾಟಕ ವಿಡಿಯೋ ಫೋಟೋ ಅಸೊಷಿಯೇಶನ್ ಮನವಿ ಮಾಡಿಕೋಳ್ಳುತ್ತದೆ.


**ಬೈಸೇಲ್ ಇಂಟ್ರಾಕ್ಷನ್ಸ್ ಪ್ರೈವೈಟ್ ಲಿಮಿಟೆಡ್ ಛಾಯಾಗ್ರಹಣ ಕ್ಷೇತ್ರ ಅತ್ಯಂತ ತಾಂತ್ರಿಕವಾಗಿ ಕೂಡಿರುವ ಕ್ಷೇತ್ರವಾಗಿದೆ ಇದರಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಹಲವಾರು ಕಂಪನಿಯಗಳು ತಂತ್ರಜ್ಞಾನದ ಬೆಳವಣಿಗಾಗಿ ಶ್ರಮಿಸುತ್ತಿವೆ ತಂತ್ರಜ್ಞಾನದ ಬೆಳವಣಿಗೆ ಜೊತೆಯಲ್ಲಿ ಕಾಲಕ್ರಮೇಣ ಬೆಳೆಯುತ್ತಿರುವ ತಂತ್ರಜ್ಞಾನವನ್ನು ಲಕ್ಷಾಂತರ ಛಾಯಾಗ್ರಾಹಕರಿಗೆ ತಲುಪಿಸುವುದು ಒಂದು ಸವಾಲಾಗಿದೆ ಹಾಗೂ ಛಾಯಾಗ್ರಾಹಕರು ಎಲ್ಲಾ ಮಾಹಿತಿಯನ್ನು ಪಡೆಯುವುದು ಕಷ್ಟವಾಗಿದ್ದ ಕಾಲದಲ್ಲಿ ಬೈಸೇಲ್ ಇಂಟ್ರಾಕ್ಷನ್ಸ್ ಪ್ರೈವೈಟ್ ಲಿಮಿಟೆಡ್ ರವರು ಫೋಟೊ ಟುಡೆ ವಸ್ತು ಪ್ರದರ್ಶನಗಳನ್ನು 23 ವರ್ಷಗಳಿಂದ 150ಕ್ಕೂ ಹೆಚ್ಚು ವಸ್ತು ಪ್ರದರ್ಶನಗಳನ್ನು ಭಾರತದ ಹಲವಾರು ನಗರಗಳಲ್ಲಿ ಹಾಗೂ ವಿದೇಶದಲ್ಲೂ ಏರ್ಪಡಿಸುತ್ತ ಛಾಯಾಗ್ರಾಹಕ ಹಾಗೂ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಕಂಪನಿಗಳ ಮಧ್ಯ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ.**

ರಾಜ್ಯ ಮಟ್ಟದ ಛಾಯಾಗ್ರಾಹಕರ ಸಂಘ ಸಂಸ್ಥೆಗಳು ಬೆಂಬಲ

# ನಿಮ್ಮ ಕೆಲವು ತಪ್ಪುಗಳಿಂದ ದೇಹದ ಮೂಳೆಗಳು ದುರ್ಬಲ: ತಜ್ಞರು ಸೂಚಿಸುವ ಆಹಾರಕ್ರಮ ಪಾಲಿಸಿ

ಕ್ಯಾಲ್ಸಿಯಂ ನಮ್ಮ ದೇಹಕ್ಕೆ ಬೇಕಿರುವ ಒಂದು ಪ್ರಮುಖ ಖನಿಜ. ಕ್ಯಾಲ್ಸಿಯಂ ನಮ್ಮ ಮೂಳೆಗಳು ಹಾಗೂ ಹಲ್ಲುಗಳನ್ನು ಬಲವಾಗಿಡುವುದಲ್ಲದೆ, ರಕ್ತದೊತ್ತಡ ನಿಯಂತ್ರಿಸುವಲ್ಲಿ ಮತ್ತು ಸ್ನಾಯುಗಳ ಕಾರ್ಯ ಬೆಂಬಲಿಸುವ ಹಾಗೂ ನರ ಸಂಕೇತ ಪ್ರಸರಣವನ್ನು ಸುಗಮಗೊಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಇದರ ಪರಿಣಾಮವಾಗಿ ದೇಹವು ಕ್ಯಾಲ್ಸಿಯಂ ಕೊರತೆಯಿಂದ ಬಳಲುತ್ತಿದ್ದರೆ ಇದು ದುರ್ಬಲ ಮೂಳೆಗಳಿಗೆ ಕಾರಣವಾಗುತ್ತದೆ ಹಾಗೂ ಇತರ ಹಲವಾರು ಆರೋಗ್ಯ ಸಮಸ್ಯೆಗಳ ಹೊರಹೊಮ್ಮುವಿಕೆಗೆ ಕಾರಣವಾಗುತ್ತದೆ. ಕೆಲವು ರೀತಿಯ ಆಹಾರಗಳು ದೇಹದ ಕ್ಯಾಲ್ಸಿಯಂ ಮಟ್ಟ ಕಡಿಮೆ ಮಾಡುತ್ತದೆ. ಇದರಿಂದಾಗಿ ಮೂಳೆಗಳು ಮತ್ತಷ್ಟು ದುರ್ಬಲಗೊಳ್ಳುತ್ತವೆ ಎಂದು ತಜ್ಞರು ಎಚ್ಚರಿಕೆ ನೀಡುತ್ತಾರೆ.

**ತಂಪು ಪಾನೀಯಗಳು:** ಇತ್ತೀಚಿನ ದಿನಗಳಲ್ಲಿ ಅದು ಪಾರ್ಟಿಯಾಗಿರಲಿ ಅಥವಾ ಮದುವೆಯ ಆಚರಣೆಯಾಗಿರಲಿ, ತಂಪು ಪಾನೀಯಗಳು ಇದ್ದೇ ಇರುತ್ತವೆ. ಈ ಪಾನೀಯಗಳ ಅತಿಯಾದ ಸೇವನೆಯು ಕ್ಯಾಲ್ಸಿಯಂ ಕೊರತೆಗೆ ಕಾರಣವಾಗಬಹುದು. ಈ ಪಾನೀಯಗಳಲ್ಲಿರುವ ಫಾಸ್ಪರಿಕ್ ಆಮ್ಲವು ಕ್ಯಾಲ್ಸಿಯಂ ಹೀರಿಕೊಳ್ಳುವ ದೇಹದ ಸಾಮರ್ಥ್ಯಕ್ಕೆ ಅಡ್ಡಿಪಡಿಸುತ್ತದೆ ಎಂದು ವರದಿಯಾಗಿದೆ. ಇದರ ಪರಿಣಾಮವಾಗಿ ಮೂಳೆಗಳೊಳಗಿನ ಕ್ಯಾಲ್ಸಿಯಂ ಮಟ್ಟಗಳು



ಕಾಲಾನಂತರದಲ್ಲಿ ಕ್ರಮೇಣ ಕಡಿಮೆಯಾಗುತ್ತವೆ. ಮೂಳೆಯ ಆರೋಗ್ಯವನ್ನು ಕಾಪಾಡಲು, ನಿಮ್ಮ ತಂಪು ಪಾನೀಯಗಳ ಸೇವನೆಯನ್ನು ಮಿತಿಗೊಳಿಸುವುದು ಸೂಕ್ತ. ಸಾಮಾನ್ಯವಾಗಿ ಹೆಚ್ಚಿನ ಸಕ್ಕರೆ ಅಂಶವನ್ನು ಹೊಂದಿರುವ ತಂಪು ಪಾನೀಯಗಳ ನಿಯಮಿತ ಸೇವನೆಯು ಮೂಳೆ ಮುರಿತದ ಅಪಾಯ ಹೆಚ್ಚಿಸುತ್ತದೆ ಎಂದು ನ್ಯಾಷನಲ್ ಲೈಬ್ರರಿ ಆಫ್ ಮೆಡಿಸಿನ್ ಗಮನಿಸುತ್ತದೆ. ಈ ಪಾನೀಯಗಳ ಬದಲಿಗೆ ಕ್ಯಾಲ್ಸಿಯಂ ಭರಿತ ಪಾನೀಯಗಳ ಸೇವನೆ ಮಾಡಬಹುದು.

**ಕೆಂಪು ಮಾಂಸ ಸಂಸ್ಕರಿಸಿದ ಮಾಂಸ:** ಈ ಆಹಾರಗಳ ಅತಿಯಾದ ಸೇವನೆಯು ದೇಹದಲ್ಲಿ ಯೂರಿಕ್ ಆಮ್ಲದ ಮಟ್ಟವನ್ನು ಹೆಚ್ಚಿಸಲು ಕಾರಣವಾಗುತ್ತದೆ. ಇದು ಮೂಳೆಯ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ ಎಂದು ತಜ್ಞರು ಹೇಳುತ್ತಾರೆ. ಈ ಆಹಾರ ಪದಾರ್ಥಗಳು ಕ್ಯಾಲ್ಸಿಯಂ ಅನ್ನು ಹೀರಿಕೊಳ್ಳುವ ದೇಹದ ಸಾಮರ್ಥ್ಯವನ್ನು ಅಡ್ಡಿಪಡಿಸುತ್ತವೆ. ಇದರಿಂದಾಗಿ ಮೂಳೆಗಳು ದುರ್ಬಲಗೊಳ್ಳುತ್ತವೆ. ಮೂಳೆಯ ಆರೋಗ್ಯವನ್ನು ಸುಧಾರಿಸಲು ಹಾಗೂ ಈ ಆಹಾರಗಳ ಸೇವನೆ ಮಿತಿಗೊಳಿಸುವುದು ಸೂಕ್ತ ಎಂದು ತಜ್ಞರು ಸಲಹೆ ನೀಡುತ್ತಾರೆ. **ಸಿಹಿತಿಂಡಿಗಳು ಬೇಯಿಸಿದ ಸರಕುಗಳು:** ಕೇಕ್‌ಗಳು, ಕ್ಯಾಂಡಿಗಳು ಹಾಗೂ ಕುಕೀಗಳಂತಹ ವಸ್ತುಗಳು ಸಕ್ಕರೆ, ಸಂಸ್ಕರಿಸಿದ ಕಾರ್ಬೋಹೈಡ್ರೇಟ್‌ಗಳಲ್ಲಿ ಅಧಿಕವಾಗಿರುತ್ತವೆ. ಈ ವಸ್ತುಗಳು ದೇಹದ ಕ್ಯಾಲ್ಸಿಯಂ ಹೀರಿಕೊಳ್ಳುವ ಸಾಮರ್ಥ್ಯಕ್ಕೆ ಅಡ್ಡಿಪಡಿಸುತ್ತವೆ. ಇದಲ್ಲದೆ, ಈ ಆಹಾರಗಳು ದೇಹದೊಳಗೆ ಉರಿಯೂತ ಉಂಟುಮಾಡಬಹುದು. ಮೂಳೆಗಳನ್ನು ಮತ್ತಷ್ಟು ದುರ್ಬಲಗೊಳಿಸಬಹುದು. ಅಂತಹ ಸಕ್ಕರೆ ಪದಾರ್ಥಗಳ ನಿಯಮಿತ ಸೇವನೆಯನ್ನು ನಿಲ್ಲಿಸುವುದು, ಬದಲಾಗಿ ಆರೋಗ್ಯಕರ ತಿಂಡಿಗಳನ್ನು ಆರಿಸಿಕೊಳ್ಳುವುದು ಉತ್ತಮ ಎಂದು ತಜ್ಞರು ತಿಳಿಸುತ್ತಾರೆ. **ಚಹಾ:** ಚಹಾದಲ್ಲಿ ಕೆಫೀನ್ ಇದ್ದು, ಇದು ದೇಹದ ಕ್ಯಾಲ್ಸಿಯಂ ಹೀರಿಕೊಳ್ಳುವ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ.

# ಕಾಮಗಾರಿ ನ್ಯೂನತೆ ಬಗ್ಗೆ ಚರ್ಚಿಸಿ ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ವರದಿ

## ಮಂಗಳೂರು ನಗರದಲ್ಲಿ ಕೆಯುಐಡಿಎಫ್‌ಸಿ ವತಿಯಿಂದ ಕೈಗೊಂಡ ವಿವಿಧ ಕಾಮಗಾರಿಗಳ ಪರಿಶೀಲನೆ

• **ಉದಯವಾಹಿನಿ ಮಂಗಳೂರು:**

ಮಂಗಳೂರು ನಗರದಲ್ಲಿ ಈ ಹಿಂದೆ ನಡೆಸಲಾಗಿರುವ ಯುಜಿಡಿ ಕಾಮಗಾರಿಗಳಲ್ಲಿ ವೈಫಲ್ಯಗಳು ಇದೆ ಎಂದಾದರೆ, ಈ ಬಗ್ಗೆ ಮಾಹಿತಿ ಸಂಗ್ರಹಿಸಿ, ಸಭೆಯಲ್ಲಿ ನ್ಯೂನತೆಗಳ ಬಗ್ಗೆ ಚರ್ಚಿಸಿ ತಪ್ಪುಗಳು ಕಂಡುಬಂದಲ್ಲಿ, ಅಂತಹವರ ವಿರುದ್ಧ ಕ್ರಮಕ್ಕೆ ವರದಿ ಸಲ್ಲಿಸುತ್ತೇವೆ ಎಂದು ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ ಅಧ್ಯಕ್ಷ ರಘುಮೂರ್ತಿ ಹೇಳಿದರು.

**ಮಂಗಳೂರು ನಗರದಲ್ಲಿ ಈಗಾಗಲೇ ಎಡಿಬಿಯ 218 ಕೋಟಿ ರು., ಅಮೃತ್‌ನಡಿ 150 ಕೋಟಿ ರು., ಕರ್ನಾಟಕ ಸರ್ಕಾರದ 80 ಕೋಟಿ ರು. ಹಾಗೂ ಸ್ಮಾರ್ಟ್ ಸಿಟಿ ಯೋಜನೆಯ ಅನುದಾನದಲ್ಲಿ ಕಾಮಗಾರಿಗಳನ್ನು ನಡೆಸಲಾಗಿದೆ. ಇನ್ನೂ ನಗರದಲ್ಲಿ ಸಮರ್ಪಕ, ವ್ಯವಸ್ಥಿತ ಒಳಚರಂಡಿ ಯೋಜನೆ ಉನ್ನತೀಕರಿಸಲು 1,250 ಕೋಟಿ ರು. ಅನುದಾನದ ಅವಶ್ಯಕತೆ ಬೇಡಿಕೆ ಜಿಲ್ಲಾಡಳಿತದಿಂದ ಸಲ್ಲಿಕೆಯಾಗಿದೆ. ಈ ಬಗ್ಗೆ ಯೋಜನೆ ತಯಾರಿಸಲಾಗಿದೆ. ಇಂದಿನ ಸಭೆಯಲ್ಲಿ ಆ ನಿಟ್ಟಿನಲ್ಲಿ ಚರ್ಚಿಸುತ್ತೇವೆ.**
**– ರಘುಮೂರ್ತಿ**


ಉದಯವಾಹಿನಿ ಚಿತ್ರ

ಅವರು ಮಂಗಳೂರು ನಗರದಲ್ಲಿ ಕೆಯುಐಡಿಎಫ್‌ಸಿ ವತಿಯಿಂದ ಕೈಗೊಂಡ ವಿವಿಧ ಕಾಮಗಾರಿಗಳ ಪರಿಶೀಲನೆಯನ್ನು ಸಮಿತಿ ವತಿಯಿಂದ ನಡೆಸಿ ಬಳಿಕ ನಗರದ ಖಾಸಗಿ ಹೊಟೇಲ್‌ನಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದರು. ನಮ್ಮ ಸಮಿತಿ ಉಡುಪಿಯಲ್ಲಿ ಕುಡಿಯುವ ನೀರಿನ ಯೋಜನೆ ಕಾಮಗಾರಿ ಹಾಗೂ ಮಂಗಳೂರಿನ ಮೂರು ಕಡೆಗಳಲ್ಲಿ ಯುಜಿಡಿ ಕಾಮಗಾರಿಗಳ ಬಗ್ಗೆ ಸ್ಥಳ ಪರಿಶೀಲನೆ ನಡೆಸಿದ್ದೇವೆ. ಸ್ಥಳ ಪರಿಶೀಲನೆ ವೇಳೆ ಸಮಸ್ಯೆಗಳ ತೀವ್ರತೆ ಬಗ್ಗೆ ಗಮನಿಸಿದ್ದೇವೆ, ಸ್ಥಳೀಯರು ಕೂಡ ಸಮಸ್ಯೆಗಳನ್ನು ತಿಳಿಸಿದ್ದಾರೆ. ನೀರು ಹರಿಯುವಲ್ಲಿ ನೀರು ಹರಿಯಬೇಕು. ಆದರೆ ಇಲ್ಲಿ ಡ್ರೈನೇಜ್ ನೀರು ಹರಿಯುತ್ತಿದೆ. ಅದನ್ನು ಸರಿಪಡಿಸಲು, ಯುಜಿಡಿ ವ್ಯವಸ್ಥೆ ಸಂರ್ಪಕವಾಗಿಸಲು ಬದ್ಧರಾಗಿದ್ದೇವೆ. ಸಮಸ್ಯೆಗಳನ್ನು ಸರಿಪಡಿಸಲು ಆದ್ಯತೆ ನೀಡಲಾಗುವುದು. ಆ ನಿಟ್ಟಿನಲ್ಲಿ ಸಮಿತಿ ವತಿಯಿಂದ ಜಿಲ್ಲಾಧಿಕಾರಿ, ಇತರ ಅಧಿಕಾರಿಗಳ ಜೊತೆ ಸಭೆ ನಡೆಸಿ ಚರ್ಚಿಸಿ ಸಮರ್ಪಕ ಯೋಜನೆಯ ಬಗ್ಗೆ ವರದಿ ಸಲ್ಲಿಸಲಿದ್ದೇವೆ ಎಂದರು.

**ಯುಜಿಡಿ ವ್ಯವಸ್ಥೆ ಸಂರ್ಪಕವಾಗಿಸಲು ಬದ್ಧ**

ಪಾಲಿಕೆ ವ್ಯಾಪ್ತಿಯ ಒಟ್ಟು 850 ಕಿ.ಮೀ. ವ್ಯಾಪ್ತಿಯಲ್ಲಿ ಶೇ. 65ರಷ್ಟು ಮಾತ್ರವೇ ಯುಜಿಡಿ ವ್ಯವಸ್ಥೆ ಇದ್ದು, ಉಳಿದ ಶೇ. 35 ಹಾಗೂ ಈಗಾಗಲೇ ಶಿಥಿಲಾವಸ್ಥೆಯಲ್ಲಿರುವ ಹಳೆಯ ವ್ಯವಸ್ಥೆಗಳನ್ನು ಬದಲಾಯಿಸುವುದು ಸೇರಿದಂತೆ ನಗರದಲ್ಲಿ 2046ರ ವೇಳೆಯ 8 ಲಕ್ಷ ಜನಸಂಖ್ಯೆಯ ಆಧಾರವಾಗಿಟ್ಟುಕೊಂಡು 1,250 ಕೋಟಿ ರು. ಗಳ ಸಮಗ್ರ ಯೋಜನೆ ಸಿದ್ಧಪಡಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಉಡುಪಿಯಲ್ಲಿ ಕುಡಿಯುವ ನೀರು ಯೋಜನೆಯ ಶೇ.90 ಕಾಮಗಾರಿ ಪೂರ್ಣಗೊಂಡಿದೆ. ನಿರಂತರ ನೀರು ಸರಬರಾ ಯೋಜನೆಯ ಎಡಿಬಿ ಅನುದಾನದ 106 ಕೋಟಿ ರು. ವೆಚ್ಚದ ಕಾಮಗಾರಿ ಮುಂದಿನ ಆಗಸ್ಟ್‌ನಲ್ಲಿ, ಸಗಟು ನೀರು ಸರಬರಾಜು, 45 ಎಂಎಲ್‌ಡಿ ನೀರು ಶುದ್ಧೀಕರಣ ಘಟಕದ 50.80 ಕೋಟಿ ರು. ವೆಚ್ಚದ ಕಾಮಗಾರಿ 2027ರ ಜನವರಿಯಲ್ಲಿ, ಸಗಟು ನೀರು ಸರಬರಾಜು (ವರಾಹಿ) ಅಮೃತ್ ಅನುದಾನದ 116 ಕೋಟಿ ರು. ವೆಚ್ಚದ ಕಾಮಗಾರಿ ಈ ವರ್ಷದ ಡಿಸೆಂಬರ್‌ನಲ್ಲಿ ಪೂರ್ಣಗೊಳ್ಳಲಿದೆ ಎಂದು ರಘುಮೂರ್ತಿ ಮಾಹಿತಿ ನೀಡಿದರು.

### ವಿವಿಧ ಸ್ಥಳಗಳ ಪರಿಶೀಲನೆ

**ಮಂಗಳೂರಿನ ಸುರತ್ಕಲ್, ಬಿಜೈ ಅನೆಗುಂಡಿ ಸೇತುವೆಯ ಬಳಿ, ಕೊಡಿಯಾಲ್‌ಗುತ್ತು ಬಳಿ ಸಮಿತಿ ತಂಡ ಸ್ಥಳ ಪರಿಶೀಲನೆ ನಡೆಸಿದರು. ಬಿಜೈ ಆನೆಗುಂಡಿಯಲ್ಲಿ ರಾಜಕಾಲುವೆಯಲ್ಲಿ ಹರಿಯುತ್ತಿರುವ ಒಳಚರಂಡಿ ತ್ಯಾಜ್ಯದ ಬಗ್ಗೆ ಪರಿಶೀಲನೆ ನಡೆಸಿದರು. ಬಳಿಕ ಕೊಡಿಯಾಲ್ ಗುತ್ತು ಸಮೀಪದ ವೆಟ್‌ವೆಲ್‌ಗೆ ಭೇಟಿ ನೀಡಿದರು. ವೆಟ್‌ವೆಲ್ ಕಾರ್ಯ ಸ್ಥಗಿತಗೊಳಿಸಿದ್ದು, ಒಳ ಚರಂಡಿ ಕೊಳಚೆಯನ್ನು ನೇರವಾಗಿ ರಾಜಕಾಲುವೆಗೆ ಬಿಡಲಾಗುತ್ತಿದೆ.**

## ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಿ: ರಾಹುಲ್ ಗಾಂಧಿಗೆ ಸಂಸದ ಶ್ರೇಯಸ್ ಪಟೇಲ್ ಪತ್ರ

• **ಉದಯವಾಹಿನಿ, ಹಾಸನ**

ಜಿಲ್ಲೆಯ ಏಕೈಕ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಿ ಎಂದು ಹಾಸನ ಸಂಸದ ಶ್ರೇಯಸ್ ಪಟೇಲ್ ರಾಹುಲ್ ಗಾಂಧಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ. ಹಾಸನ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಪೈಕಿ ಕೆ.ಎಂ. ಶಿವಲಿಂಗೇಗೌಡ ಅವರು ಏಕೈಕ ಕಾಂಗ್ರೆಸ್ ಶಾಸಕರಾಗಿದ್ದಾರೆ. ಅತ್ಯಂತ ಸವಾಲಿನ ರಾಜಕೀಯ ಪರಿಸ್ಥಿತಿಯಲ್ಲಿಯೂ ಅವರು ತಳಮಟ್ಟದಲ್ಲಿ ಪಕ್ಷವನ್ನು ಸಂಘಟಿಸಿ, ಕಾರ್ಯಕರ್ತರು ಹಾಗೂ ಸಾರ್ವಜನಿಕರ ಬೆಂಬಲವನ್ನು ಕಾಂಗ್ರೆಸ್ ಪರವಾಗಿ ಕಟ್ಟಿಕೊಟ್ಟಿದ್ದಾರೆ. ಕಳೆದ ಲೋಕಸಭೆ ಚುನಾವಣೆಯಲ್ಲಿ ಹಾಸನ ಕ್ಷೇತ್ರವನ್ನು ಕಾಂಗ್ರೆಸ್ ಮಡಿಲಿಗೆ ತರುವಲ್ಲಿ ಶಿವಲಿಂಗೇಗೌಡರ ಪಾತ್ರ ಮಹತ್ವದ್ದಾಗಿದೆ. ಅವರ ಕಠಿಣ ಪರಿಶ್ರಮ, ಪಕ್ಷದ ಮೇಲಿನ ನಿಷ್ಠೆ ಹಾಗೂ ಸಂಘಟನಾ ಶಕ್ತಿಯಿಂದ ಕಾಂಗ್ರೆಸ್ ಗೆಲುವು ಸಾಧಿಸಲು ಸಾಧ್ಯವಾಯಿತು.

## ನಿಜವಾಯ್ತು ಭವಿಷ್ಯ ಯುಗಾದಿ ಪಾಡ್ಯಮಿಯಂದೇ ಸಿದ್ದರಾಮಯ್ಯ ರಾಜೀನಾಮೆ ಬಗ್ಗೆ ನುಡಿದಿದ್ದ ಬೊಂಬೆ

• **ಉದಯವಾಹಿನಿ, ಧಾರವಾಡ**

ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ಬಗ್ಗೆ ಯುಗಾದಿ ಪಾಡ್ಯಮಿಯಂದೇ ನುಡಿದಿದ್ದ ಬೊಂಬೆ ಭವಿಷ್ಯ ಇದೀಗ ನಿಜವಾಗಿದೆ.ಧಾರವಾಡ ತಾಲ್ಲೂಕಿನ ಉಪ್ಪಿನ ಬೆಟಗೇರಿಗೆ ಹೊಂದಿಕೊಂಡ ಹನುಮನಕೊಪ್ಪ ಗ್ರಾಮದಲ್ಲಿ ಜನರು ಪ್ರತಿ ವರ್ಷ ಯುಗಾದಿ ಹಬ್ಬದ ಸಮಯದಲ್ಲಿ ಬೊಂಬೆ ಭವಿಷ್ಯ ಕೇಳುವುದು ಸಂಪ್ರದಾಯ.

ಅದರಂತೆ ಈ ಬಾರಿ ಯುಗಾದಿ ಪಾಡ್ಯಮಿಯಂದು ಬೊಂಬೆಯು ಸಿದ್ದರಾಮಯ್ಯ ಅವರು ಸಿಎಂ ಸ್ಥಾನವನ್ನು ಪದತ್ಯಾಗ ಮಾಡಬಹುದು ಎಂದು ಭವಿಷ್ಯ ನುಡಿದಿತ್ತು. ಆ ಪ್ರಕಾರ ಇದೀಗ ಬೊಂಬೆ ನುಡಿದ ಭವಿಷ್ಯ ನಿಜವಾಗಿದ್ದು, ಸಿದ್ದರಾಮಯ್ಯ ಅವರು ಸಿಎಂ ಕುರ್ಚಿ ಬಿಟ್ಟು ಕೆಳಗಿಳಿದಿದ್ದಾರೆ.

ಯುಗಾದಿ ಅಮವಾಸ್ಯೆಯಂದು ಪೂರ್ವಕ್ಕೆ ಹರಿಯುವ ಹಳ್ಳದಲ್ಲಿ ಹನುಮನಕೊಪ್ಪ ಗ್ರಾಮದ ಹಿರಿಯರು ಫಲ ಹಾಕಿ ಬರುತ್ತಾರೆ.

## ಶಿವಮೊಗ್ಗ ಜಿಲ್ಲೆಯ ಮೂವರು ಶಾಸಕರಲ್ಲಿ ಯಾರಾಗಲಿದ್ದಾರೆ ಮಂತ್ರಿ

# ಹಳೆ ಮುಖನೋ, ಹೊಸ ಮುಖವ್ರೋ!

• **ಉದಯವಾಹಿನಿ, ಶಿವಮೊಗ್ಗ**

ಮಲೆನಾಡ ಹೆಬ್ಬಾಗಿಲು ಶಿವಮೊಗ್ಗ ಜಿಲ್ಲೆಯಿಂದ ಹೊಸ ಮಂತ್ರಿ ಮಂಡಲದಲ್ಲಿ ಯಾರು ಮಂತ್ರಿ ಆಗುತ್ತಾರೆ ಎಂಬ ಲೆಕ್ಕಾಚಾರ ಪ್ರಾರಂಭವಾಗಿದೆ. ಹೊಸ ಮಂತ್ರಿ ಮಂಡಲದಲ್ಲಿ ಹೊಸ ಮುಖಕ್ಕೆ ಮಣೆ ಹಾಕುತ್ತಾರೋ ಅಥವಾ ಹೊಸಬರಿಗೆ ಅವಕಾಶ ನೀಡುತ್ತಾರೋ ಎಂಬ ವಿಚಾರ ಜಿಲ್ಲೆಯಾದ್ಯಂತ ಚರ್ಚೆ ನಡೆಸಲಾಗುತ್ತಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುತ್ತಿದ್ದಂತೆಯೇ ಜಿಲ್ಲೆಯಲ್ಲಿ ಮಂತ್ರಿಯಾಗುತ್ತಾರೆ ಎಂಬ ಚರ್ಚೆ ಜೋರಾಗಿ ನಡೆಯುತ್ತಿದೆ. ಸೊರಬದಿಂದ ಆಯ್ಕೆಯಾದ ಮಾಜಿ ಮುಖ್ಯಮಂತ್ರಿ ಬಂಗಾರಪ್ಪನವರ ಪುತ್ರ ಎಸ್. ಮಧು ಬಂಗಾರಪ್ಪನವರು ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ಸಾಕ್ಷರತೆ ಹಾಗೂ ಶಿಕ್ಷಣ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಇವರು ಪ್ರಥಮ ಬಾರಿ ಸಚಿವರಾಗಿ ಆಯ್ಕೆಯಾದ ನಂತರ ಶಿಕ್ಷಣ ಇಲಾಖೆಯಂತಹ ದೊಡ್ಡ ಜವಾಬ್ದಾರಿಯನ್ನು ಹೊತ್ತು ಉತ್ತಮವಾಗಿಯೇ ಕಾರ್ಯನಿರ್ವಹಿಸಿದ್ದಾರೆ.

ಶಿಕ್ಷಣ ಇಲಾಖೆಯಲ್ಲಿ 14 ಸಾವಿರ ಶಿಕ್ಷಕರ ನೇಮಕಾತಿಗೆ ಪರೀಕ್ಷೆ ನಡೆಸಿದ್ದಾರೆ. ಶೈಕ್ಷಣಿಕ ವರ್ಷ ಪ್ರಾರಂಭಕ್ಕೂ ಮುನ್ನವೇ ಅತಿಥಿ ಶಿಕ್ಷಕರ ನೇಮಕ ಹಾಗೂ ಶಿಕ್ಷಕರಿಗೆ ತರಬೇತಿ ನೀಡಿದ್ದಾರೆ. ಅಲ್ಲದೇ, ಅಜೀಂ ಪ್ರೇಮ್‌ಜೀಯಂತಹ ದಿಗ್ಗಜರಿಂದ ಶಿಕ್ಷಣ ಇಲಾಖೆಗೆ ಸಿಎಸ್‌ಆರ್ ಫಂಡ್ ತಂದು ಮಕ್ಕಳಿಗೆ ಪ್ರತಿನಿತ್ಯ ಮೊಟ್ಟೆ ನೀಡುತ್ತಿದ್ದಾರೆ.


ಉದಯವಾಹಿನಿ ಚಿತ್ರ

**14 ಸಾವಿರ ಶಿಕ್ಷಕರ ನೇಮಕಾತಿ**

ಜೊತೆಗೆ ರಾಜ್ಯದಲ್ಲಿ ನೂತನವಾಗಿ 1 ಸಾವಿರ ಪಬ್ಲಿಕ್ ಶಾಲೆಯನ್ನು ತೆರೆಯಲು ಸಿದ್ಧತೆ ನಡೆಸಿದ್ದರು. ಜೊತೆಗೆ ನಮ್ಮ ಶಾಲೆ ನಮ್ಮ ಜವಾಬ್ದಾರಿ ಎಂಬ ಯೋಜನೆಯ ಮೂಲಕ ಸರ್ಕಾರಿ ಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳಿಂದ ಸರ್ಕಾರಿ ಶಾಲೆ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅಲ್ಲದೇ, ಕೆಪಿಸಿಸಿ ಅಧ್ಯಕ್ಷರು ಹಾಗೂ ಭಾವಿ ಸಿಎಂ ಆದ ಡಿ. ಕೆ. ಶಿವಕುಮಾರ್ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಮಧು ಬಂಗಾರಪ್ಪನವರು ನೂತನ ಮಂತ್ರಿ ಮಂಡಲದಲ್ಲಿ ಸ್ಥಾನ ಪಡೆಯಬಹುದು ಎಂಬ ನಿರೀಕ್ಷೆಗಳು ಇವೆ.ಸಂಗಮೇಶ್ ಅವರು ಸಹ ಡಿ. ಕೆ. ಶಿವಕುಮಾರ್ ಜೊತೆ ಉತ್ತಮ ಬಾಂಧವ್ಯವನ್ನು ಹೊಂದಿದ್ದಾರೆ.ಇವರಿಬ್ಬರ ನಡುವೆ ಸಾಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಗೋಪಾಲಕೃಷ್ಣ ಬೇಳೂರು ಅವರು ಸಹ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದಾರೆ. ಇವರು ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿದ್ದಾರೆ. ಇವರು ಸಹ ಮೂರನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಇವರು ತಮಗೆ ಮಂತ್ರಿ ಸ್ಥಾನ ನೀಡಬೇಕೆಂದು ಹಲವಾರು ಬಾರಿ ಮುಖ್ಯಮಂತ್ರಿಗಳನ್ನು, ಕೆಪಿಸಿಸಿ ಅಧ್ಯಕ್ಷರನ್ನು, ದೆಹಲಿಯಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಬಂದಿದ್ದಾರೆ.ಒಟ್ಟಾರೆ, ರಾಜ್ಯ ರಾಜಕೀಯದಲ್ಲಿ ಹೊಸ ಮಂತ್ರಿಮಂಡಲದ ಚರ್ಚೆ ಜೋರಾಗಿ ನಡೆಯುತ್ತದೆ.

### ಭದ್ರಾವತಿ ಕ್ಷೇತ್ರದಿಂದ ನಾಲ್ಕನೇ ಬಾರಿಗೆ ಆಯ್ಕೆ

**ಜೊತೆಗೆ ಶಿಕ್ಷಣ ಇಲಾಖೆಯೇ ಪುನಃ ಸಿಗುವ ಸಾಧ್ಯತೆ ಇದೆ ಎಂದು ಅವರ ಆಪ್ತ ವಲಯ, ಅಭಿಮಾನಿಗಳು ತಿಳಿಸಿದ್ದಾರೆ. ಆದರೆ, ಬಿ. ಕೆ. ಹರಿಪ್ರಸಾದ್ ಮಂತ್ರಿಯಾದರೆ ಮಧು ಬಂಗಾರಪ್ಪನವರಿಗೆ ಕೋಕ್ ಸಿಗುವ ಸಾಧ್ಯತೆಗಳಿವೆ. ಕಾರಣ ಇಬ್ಬರು ಒಂದೇ ಸಮುದಾಯಕ್ಕೆ ಸೇರಿದವರಾಗಿರುವುದರಿಂದ ಯಾರಿಗಾದರೂ ಒಬ್ಬರಿಗೆ ಮಂತ್ರಿ ಸ್ಥಾನ ಸಿಗಲಿದೆ. ಭದ್ರಾವತಿ ವಿಧಾನಸಭಾ ಕ್ಷೇತ್ರದಿಂದ ನಾಲ್ಕನೆ ಬಾರಿಗೆ ಆಯ್ಕೆಯಾಗಿರುವ ಬಿ. ಕೆ. ಸಂಗಮೇಶ್ ಅವರು ಸಹ ಮಂತ್ರಿ ಮಂಡಲದಲ್ಲಿ ಸ್ಥಾನ ಪಡೆಯುವ ಸಲುವಾಗಿ ತಮ್ಮ ಎಲ್ಲಾ ಪ್ರಯತ್ನಗಳನ್ನು ಮುಂದುವರೆಸಿದ್ದಾರೆ. ಸಂಗಮೇಶ್ ಅವರ ಸಹೋದರ ಶಿವಕುಮಾರ್ ಅವರ ಮಗಳನ್ನು ಲಕ್ಷ್ಮಿ ಹೆಬ್ಬಾಳ್ಕರ್ ಅವರ ಮಗ ಮೃಣಾಳ್‌ನಿಗೆ ನೀಡಿ ಮದುವೆ ಮಾಡಲಾಗಿದೆ. ಅಲ್ಲದೇ, ಡಿ. ಕೆ. ಶಿವಕುಮಾರ್ ಅವರ ಆಪ್ತ ವಲಯದಲ್ಲಿ ಇರುವುದರಿಂದ ಇವರಿಗೂ ಸಹ ಮಂತ್ರಿ ಮಂಡಲದಲ್ಲಿ ಸ್ಥಾನ ಸಿಗಬಹುದು ಎಂಬ ನಿರೀಕ್ಷೆ ಭದ್ರಾವತಿ ಜನತೆಯಲ್ಲಿದೆ. ಬಿ. ಕೆ. ಸಂಗಮೇಶ್ ಅವರು ಕರ್ನಾಟಕ ರಾಜ್ಯ ಗ್ರಾಮೀಣ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.**

### ಮಂತ್ರಿ ಸ್ಥಾನ ನೀಡಬೇಕು

**ಕಳೆದ ಒಂದು ತಿಂಗಳಲ್ಲಿ ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಬಂದಿದ್ದಾರೆ. ಅನೇಕ ಬಾರಿ ಮಾಧ್ಯಮಗಳ ಮುಂದೆ ತಮಗೆ ಮಂತ್ರಿ ಸ್ಥಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಮಂತ್ರಿ ಮಂಡಲ ವಿಸ್ತರಣೆಯಲ್ಲೂ ಸಹ ತಾವು ಮಂತ್ರಿ ಆಗುತ್ತೇವೆ ಎಂದು ಹೇಳಿಕೊಂಡಿದ್ದಾರೆ. ಹಾಲಿ ಸಿಎಂ ರಾಜೀನಾಮೆಯಿಂದ ಮಂತ್ರಿ ಮಂಡಲವೇ ಹೊಸದಾಗಿ ರಚನೆಯಾಗುವುದರಿಂದ ಇವರ ಹೆಸರು ಸಹ ದೆಹಲಿ ಮಟ್ಟಕ್ಕೆ ಹೋಗಿದೆ.ಈ ಕುರಿತು ಈಟಿವಿ ಭಾರತ್ ಜೊತೆ ದೂರವಾಣಿಯಲ್ಲಿ ಮಾತನಾಡಿದ ಸಾಗರ ಶಾಸಕ ಗೋಪಾಲಕೃಷ್ಣ ಬೇಳೂರು ಅವರು, ತಮಗೆ ಮಂತ್ರಿ ಸ್ಥಾನ ಸಿಗುವ ವಿಶ್ವಾಸವಿದೆ. ಪಕ್ಷದ ಮುಖಂಡರುಗಳ ಜೊತೆ ಮಾತನಾಡಿದ್ದೇನೆ. ಹೈಕಮಾಂಡ್ ಏನ್ ತೀರ್ಮಾನ ತೆಗೆದುಕೊಳ್ಳುತ್ತದೆಯೋ ನೋಡಬೇಕಿದೆ' ಎಂದು ತಿಳಿಸಿದ್ದಾರೆ.**

## ಸಿದ್ದರಾಮಯ್ಯರನ್ನು ಕಾಂಗ್ರೆಸ್ ಹೈಕಮಾಂಡ್ ಅಗೌರವದಿಂದ ನಡೆಸಿಕೊಂಡಿದೆ

• **ಉದಯವಾಹಿನಿ, ಬೀದರ್**

ಸಿಎಂ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಅಗೌರವದಿಂದ ನಡೆಸಿಕೊಂಡಿದೆ ಎಂದು ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದ್ದಾರೆ.ಬೀದರ್‌ನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ಅಗೌರವದಿಂದ ನಡೆಸಿಕೊಂಡಿದೆ. ಆದರೆ, ಸಿಎಂ ಸಿದ್ದರಾಮಯ್ಯ ಯಾವುದನ್ನೂ ತೋರಿಸಿಕೊಳ್ಳುತ್ತಿಲ್ಲ. ಯಾಕಂದ್ರೆ ನನ್ನ ಹಿರಿತನದ ಗೌರವ ಹೋಗಬಾರದು ಎಂದು ಸಿದ್ದರಾಮಯ್ಯ ನೋವು ತೋರಿಸುತ್ತಿಲ್ಲ ಎಂದು ಹೇಳಿದರು. ಕಾಂಗ್ರೆಸ್‌ನ ಸಂಸ್ಕೃತಿಯೇ ಅದಾಗಿದ್ದು, ಇದೊಂದು ಬಂಡವಾಳಶಾಹಿಗಳಿಗೆ ಮಣೆ ಹಾಕುವ ಪಕ್ಷ. ಮಾನವೀಯತೆಯಿಂದ ಹೈಕಮಾಂಡ್ ನಡೆದುಕೊಳ್ಳಬೇಕಿತ್ತು. ಆ ರೀತಿ ನಡೆದುಕೊಂಡಿಲ್ಲ. ಮೊದಲು ಹೈಕಮಾಂಡ್ ಸಿದ್ದರಾಮಯ್ಯ ಜೀ ಅಂತಿದ್ದರು. ಈಗಾ ಸಿದ್ದರಾಮಯ್ಯ ಯೂ ಮಸ್ಟ್ ರಿಸೈನ್ ಎಂದಿದ್ದಾರೆ.

## ಕಾಂಗ್ರೆಸ್ ಹಿಂದುಳಿದ ವರ್ಗಕ್ಕೆ ಕೊಡಲಿ ಪೆಟ್ಟು

• **ಉದಯವಾಹಿನಿ ಹಾವೇರಿ:**

ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಸಿದ್ದರಾಮಯ್ಯ ರಾಜ್ಯ ರಾಜಕಾರಣದಲ್ಲೇ ಇರುತ್ತೇನೆ ಎಂದಿರುವುದು ಡಿ.ಕೆ.ಶಿವಕುಮಾರ್‌ಗೆ ಯಾವಾಗಲೂ ತೂಗುಗತ್ತಿ ಎಂದು ಸಂಸದ ಹಾಗೂ ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ಹೇಳಿದರು.ಹಾವೇರಿಯಲ್ಲಿ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ಡಿ.ಕೆ.ಶಿವಕುಮಾರ್ ಸಿಎಂ ಆದರೆ ಅದೊಂದು ತೂಗು ಕತ್ತಿ. ತೂಗು ಕತ್ತಿ ತೂಗಿದ್ದಕ್ಕಿಂತ ಬಿದ್ದಿದ್ದೇ ಹೆಚ್ಚು. ರಾಜ್ಯದಲ್ಲಿ ಐದು ವರ್ಷ ಸಿಎಂ ಆಗಿದ್ದವರು ಮರು ಸಿಎಂ ಆದಾಗ 7ನೇ ವರ್ಷಕ್ಕೆ ಆಘಾತ ಬರುತ್ತದೆ. ಈ ಹಿಂದೆ ಎಸ್‌ನಿಜಲಿಂಗಪ್ಪ ಮೊದಲ ಅವಧಿ ಪೂರ್ಣಗೊಳಿಸಿದರು. ಆದಾಗ ಏಳು ವರ್ಷಕ್ಕೆ

## ಅಮೃತಾನಂದಮಯಿ ಬ್ರಹ್ಮಸ್ಥಾನ ಮಹೋತ್ಸವದ ಭವ್ಯ ಚಾಲನೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಮಂಗಳೂರು :**

ಮಾನವಕುಲವು ಪ್ರಕೃತಿಯೆಡೆಗೆ ಹೆಚ್ಚಿನ ವಿನಯ, ಕರುಣೆ ಮತ್ತು ಪೂಜ್ಯಭಾವನೆಯಿಂದ ಬದುಕಬೇಕು ಎಂದು ಮಾತಾ ಅಮೃತಾನಂದ ಮಯಿ ಕರೆ ನೀಡಿದರು. ಮಂಗಳೂರಿನ ಬೋಳೂರಿನಲ್ಲಿರುವ ಮಾತಾ ಅಮೃತಾನಂದಮಯಿ ಮಠದಲ್ಲಿ ನಡೆದ ಬ್ರಹ್ಮಸ್ಥಾನ ಮಹೋತ್ಸವದಲ್ಲಿ ಭಕ್ತರನ್ನುದ್ದೇಶಿಸಿ ಮಾತನಾಡಿದ ಅವರು, ಮನುಷ್ಯನು ಸಹಮಾನವರೊಂದಿಗೆ ಸಹಕಾರದಿಂದ ಪ್ರಕೃತಿಯೊಂದಿಗೆ ಸೌಹಾರ್ದತೆಯಿಂದ ಹಾಗೂ ಈಶ್ವರನೊಂದಿಗೆ ಸಂಪರ್ಕ ವಿರಿಸಿಕೊಂಡು ಬದುಕುವುದನ್ನು ಕಲಿಯಬೇಕು ಎಂದು ಹೇಳಿದರು.

ಸಾಂಕ್ರಾಮಿಕ ರೋಗಗಳು, ನೈಸರ್ಗಿಕ ವಿಕೋಪಗಳು ಮತ್ತು ಹವಾಮಾನ ವೈಪರೀತ್ಯಗಳು ಪ್ರಕೃತಿಯೊಂದಿಗಿನ ನಮ್ಮ ಸಂಬಂಧವನ್ನು ಮರುಚಿಂತನೆ ಮಾಡಲು ಮಾನವಕುಲಕ್ಕೆ ನೀಡುತ್ತಿರುವ ಎಚ್ಚರಿಕೆಯ ಕರೆಗಳಾಗಿವೆ ಎಂದು ಅವರು ತಿಳಿಸಿದರು.

ಜನರು, ಸಮುದಾಯಗಳು ಮತ್ತು ರಾಷ್ಟ್ರಗಳ ನಡುವಿನ ಸಂಘರ್ಷಗಳಲ್ಲಿ ಸಂಧಾನ ಹಾಗೂ ರಾಜಿ ಸೂತ್ರಗಳು ಕೆಲಸ ಮಾಡಬಹುದು. ಆದರೆ ಪ್ರಕೃತಿಯೊಂದಿಗೆ ಇವುಗಳು ನಡೆಯುವುದಿಲ್ಲ ಎಂದು ಅಮ್ಮ ಅಭಿಪ್ರಾಯಪಟ್ಟರು.

''ಪ್ರಕೃತಿಯನ್ನು ಸಮೀಪಿಸಲು ಇರುವ ಏಕೈಕ ಪರಿಣಾಮಕಾರಿ ಮಾರ್ಗವೆಂದರೆ ಅಹಂಕಾರವನ್ನು ತೊರೆದು, ತಲೆಬಾಗಿ, ವಿನಯ, ಸ್ನೇಹ ಮತ್ತು ಪೂಜ್ಯಭಾವನೆಯಿಂದ ತುಂಬಿದ ಹೃದಯದೊಂದಿಗೆ ಆಕೆಯನ್ನು ಆರಾಧಿಸುವುದಾಗಿದೆ'' ಎಂದು ಅವರು ಹೇಳಿದರು. ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದ ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ ಅವರು ಮಾತನಾಡಿ, ಅಮ್ಮನವರ ಕಾರ್ಯಗಳು ಕೇವಲ ಆಧ್ಯಾತ್ಮಿಕತೆಗೆ ಸೀಮಿತವಾಗಿರದೆ, ಸಾಮಾಜಿಕ ಜೀವನದ ಹಲವು ಕ್ಷೇತ್ರಗಳನ್ನು ಸ್ಪರ್ಶಿಸಿವೆ ಎಂದು ಶ್ಲಾಘಿಸಿದರು.

**ಮಾನವರು ಈ ಭೂಮಿ, ಅದರ ನೈಸರ್ಗಿಕ ಸಂಪನ್ಮೂಲಗಳು ಮತ್ತು ಸಮೃದ್ಧಿಯನ್ನು ಸಹಜೀವಿಗಳು ಹಾಗೂ ಇತರ ಪ್ರಾಣಿ-ಪಕ್ಷಿಗಳೊಂದಿಗೆ ಸಾಮೂಹಿಕವಾಗಿ ಹಂಚಿಕೊಂಡು ಬದುಕಬೇಕು ಎಂಬ ಜಾಗೃತಿಯೇ ನಿಜವಾದ ಸಹಬಾಳ್ವೆಗೆ ಅಡಿಪಾಯವಾಗಿದೆ ಎಂದು ಅಮ್ಮ ಹೇಳಿದರು.**

## ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಾಲನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಬೀದರ್::**

ಈ ಬಾರಿ ಉತ್ತಮ ಮಳೆಯಾಗುವ ನಿರೀಕ್ಷೆ ಇದ್ದು, ರೈತರು ಸಮಯಕ್ಕೆ ಸರಿಯಾಗಿ ಬಿತ್ತನೆ ಕಾರ್ಯ ಆರಂಭಿಸಬೇಕು. ಸರ್ಕಾರದ ವತಿಯಿಂದ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರವನ್ನು ರೈತರಿಗೆ ತಲುಪಿಸುವ ಕೆಲಸ ನಡೆಯುತ್ತಿದೆ.

ರೈತರು ಯಾವುದೇ ಮಧ್ಯವರ್ತಿಗಳ ಮಾತಿಗೆ ಒಳಗಾಗದೆ ಕೃಷಿ ಇಲಾಖೆಯ ಸಲಹೆ ಪಡೆದು ಬೆಳೆ ಬೆಳೆಸಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಸೋಯಾಬೀನ್, ತೊಗರಿ, ಹೆಸರು ಹಾಗೂ ಉದ್ದು ಬೆಳೆಗಳು ರೈತರಿಗೆ ಉತ್ತಮ ಆದಾಯ ತರುವ ಬೆಳೆಗಳಾಗಿದ್ದು, ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅನುಸರಿಸಿದರೆ ಇನ್ನಷ್ಟು ಉತ್ತಮ ಉತ್ಪಾದನೆ ಪಡೆಯಬಹುದು. ಕೃಷಿಯಲ್ಲಿ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಕಡಿಮೆ ವೆಚ್ಚದಲ್ಲಿ ಹೆಚ್ಚು ಲಾಭ ಪಡೆಯುವತ್ತ ಗಮನ ಹರಿಸಬೇಕು ಎಂದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತರ ಪರವಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಪ್ರತಿಯೊಬ್ಬ ರೈತನಿಗೂ ಅದರ ಸೌಲಭ್ಯ ತಲುಪಿಸುವ ಕೆಲಸ ನಿರಂತರವಾಗಿ ನಡೆಯಲಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದು ತಿಳಿಸಿದರು.ನಮ್ಮ ಬೀದರ್ ದಕ್ಷಿಣ ಕ್ಷೇತ್ರ ಕೃಷಿ ಪ್ರಧಾನ ಕ್ಷೇತ್ರವಾಗಿದೆ. ಇಲ್ಲಿನ ರೈತರು ಶ್ರಮಜೀವಿಗಳು.

ನಿಮ್ಮ ಪರಿಶ್ರಮದಿಂದಲೇ ಈ ಭಾಗದ ಅಭಿವೃದ್ಧಿ ಸಾಧ್ಯವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಕರ್ತವ್ಯವಾಗಿದೆ. ನೀರಾವರಿ, ರಸ್ತೆ, ವಿದ್ಯುತ್, ಕೃಷಿ ಸಂಪರ್ಕ ರಸ್ತೆ ಸೇರಿದಂತೆ ರೈತರ ಅನುಕೂಲಕ್ಕೆ ಬೇಕಾದ ಎಲ್ಲಾ ಅಭಿವೃದ್ಧಿ ಕಾಮಗಾರಿಗಳಿಗೆ ನಾನು ಸದಾ ಆದ್ಯತೆ ನೀಡುತ್ತೇನೆ.

**ರೈತರಿಗೆ ಸಮಯಕ್ಕೆ ಸರಿಯಾಗಿ ಬೀಜ ಹಾಗೂ ರಸಗೊಬ್ಬರ ವಿತರಣೆ ಆಗುತ್ತಿರುವುದು ಸಂತಸದ ವಿಚಾರ. ರೈತರು ಗುಣಮಟ್ಟದ ಬೀಜ ಬಳಸಿ ಉತ್ತಮ ಬೆಳೆ ಬೆಳೆಯಬೇಕು. ಕೃಷಿಯಲ್ಲಿ ನಷ್ಟವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂದು ರೈತರಿಗೆ ಶುಭ ಹಾರೈಸಿದರು.**
**–ಡಾ. ಶೈಲೇಂದ್ರ ಬೆಲ್ದಾಳೆ**

## ಮಿನಿ ನ್ಯೂಸ್

### ಕೆರೆಗೆ ನೀರು ಕುಡಿಯಲು ಹೋಗಿದ್ದ ವ್ಯಕ್ತಿಯ ಮೃತದೇಹ ಪತ್ತೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ,ಕಮಲನಗರ:**

ಪಟ್ಟಣದ ಹೊರವಲಯದ ಮದನೂರು ರಸ್ತೆ ಸಮೀಪದ ಡಾ. ಚನ್ನಬಸವ ಪಟ್ಟದ್ದೇವರು ಕೆರೆಯಲ್ಲಿ ಮಧ್ಯಾಹ್ನ 1 ಗಂಟೆಗೆ ಕೆರೆ ದಡದಲ್ಲಿ ನೀರು ಕುಡಿಯಲು ಹೋಗಿ ನೀರಿನಲ್ಲಿಯೇ ಜಾರಿಬಿದ್ದು ನಾಪತ್ತೆಯಾಗಿದ್ದ ವ್ಯಕ್ತಿಯ ಮೃತದೇಹ ಮಧ್ಯಾಹ್ನ 12:30 ಗಂಟೆಗೆ ಪತ್ತೆಯಾಗಿದೆ. ರಾಜಕುಮಾರ ದಾಮೋದರ ಸೂರ್ಯವಂಶಿ(40) ಬುಧವಾರ ಕೆರೆ ನೀರಿನಲ್ಲಿ ಮುಳುಗಿ ನಾಪತ್ತೆಯಾಗಿದ್ದ. ಭಾಲ್ಕಿ ಅಗ್ನಿಶಾಮಕ ಠಾಣೆಯ ಅಧಿಕಾರಿ ದತ್ತಾತ್ರೇಯ ತಂಡ, ಸಹಾಯಕ ಅಗ್ನಿಶಾಮಕ ಠಾಣಾ ಅಧಿಕಾರಿ ಅಶೋಕ, ಫೈಯರ್ ಫೀಟ್ಟರ್ ರಾಜಕುಮಾರ, ಹಣಮಂತಪ್ಪ, ಈಜು ತಜ್ಞ ಹಣಮೇಶ, ಆರ್ಡ್ರಿ ಪ್ರಕಾಶ, ದೀಪಕ, ದಯಾನಂದ ಹಾಗೂ ಗ್ರಾಮಸ್ಥರು ಬುಧವಾರ ಸಂಜೆಯವರೆಗೂ ಪತ್ತೆ ಕಾರ್ಯಾಚರಣೆ ಕೈಗೊಂಡಿದ್ದರು.

ಬೆಳಿಗ್ಗೆ 7:30 ಗಂಟೆಗೆ ಭಾಲ್ಕಿ ಅಗ್ನಿಶಾಮಕ ಸಿಬ್ಬಂದಿ ತಂಡ ಹಾಗೂ ಈಜು ತಜ್ಞರು ವ್ಯಕ್ತಿಯ ಹುಡುಕಾಟ ಸತತ ಮುಂದುವರೆಸಿದರು. ನೀರಿನ ತಳದ ದಡದ ಕೊರೆಯಲ್ಲಿ ಸಿಕ್ಕಿಕೊಂಡಿದ್ದು 12:30 ಗಂಟೆಗೆ ವ್ಯಕ್ತಿಯ ಮೃತದೇಹ ಕಾಣಿಸಿಕೊಂಡ ಹಿನ್ನಲೆ ನೀರಿನಿಂದ ಹೊರತೆಗೆದರು.

ಮನೆಗೆ ಆಸರೆಯಾಗಿದ್ದ ಪುತ್ರನನ್ನು ಕಳೆದುಕೊಂಡ ಪೊಷಕರ ಆಕ್ರಂದನ ಮುಗಿಲು ಮುಟ್ಟಿತು. ಮೃತನ ಚಿಕ್ಕಪ್ಪ ಗೋಪಾಳ ಸೂರ್ಯವಂಶಿ ನೀಡಿದ ದೂರಿನ ಮೇರೆಗೆ ಕಮಲನಗರ ಪೊಲೀಸ್ ಠಾಣೆಯಲ್ಲಿ ಅಸ್ವಾಭಾವಿಕ ಸಾವು ಪ್ರಕರಣ ದಾಖಲಾಗಿದೆ.

### ಕೆ ಹೆಚ್ ಮುನಿಯಪ್ಪಗೆ ಡಿಸಿಎಂ

• **ಉದಯವಾಹಿನಿ , ಬಳ್ಳಾರಿ**

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಕೆ.ಹೆಚ್.ಮುನಿಯಪ್ಪ ಅವರಿಗೆ ಉಪ ಮುಖ್ಯ ಮಂತ್ರಿ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷಕ್ಕೆ ಬಳ್ಳಾರಿ ಜಿಲ್ಲಾ ಡಾ.ಬಿ.ಆರ್.ಅಂಬೇಡ್ಕರ್ ಸಂಘ ಒತ್ತಾಯಿಸಿದೆ.

ನಗರದಲ್ಲಿ ಸಂಘದ ಕಚೇರಿಯಲ್ಲಿ ಇಂದು ಸಂಘದ ಗೌರವ ಅಧ್ಯಕ್ಷ ಎಲ್.ಮಾರೆಣ್ಣ, ಪ್ರಧಾನ ಕಾರ್ಯದರ್ಶಿ ಎರುಕುಲಸ್ವಾಮಿ ಇವರು ಸುದ್ದಿಗೋಷ್ಟಿ ನಡೆಸಿ ದಲಿತರಿಗೆ ಇದುವರೆಗೆ ಸಿಎಂ ಸ್ಥಾನ ಲಭಿಸಿಲ್ಲ, ಕನಿಷ್ಠ ಡಿಸಿಎಂ ಸ್ಥಾನವಾದರೂ ಸಿಗಲಿ, ಪಕ್ಷ ನಿಷ್ಠೆ, ಪಕ್ಷವನ್ನು ಸತತವಾಗಿ ಕೈಹಿಡಿದ ಸಮುದಾಯದ ನಿಷ್ಕಳಂಕ ನಾಯಕ ಮುನಿಯಪ್ಪರವರು. ರಾಷ್ಟ್ರ ಮಟ್ಟದಲ್ಲಿ ರಾಜಕೀಯ ನಾಯಕರಾದವರು.ಮಾದಿಗ ಸಮುದಾಯಕ್ಕೆ ಒಳ ಮೀಸಲಾ ಕೊಡಿಸುವಲ್ಲಿ ಶ್ರಮಿಸಿ ಯಶಸು ಸಾಧಿಸಿದವರು.ಪ್ರಸ್ತುತ ಮೂರು ವರ್ಷಗಳನ್ನು ಪೂರೈಸಿರುವ ರಾಜ್ಯ ಸರ್ಕಾರಕ್ಕೆ ಉಳಿದಿರುವ ಅವಧಿಯಲ್ಲಿ 2028ರ ವಿಧಾನಸಭಾ ಚುನಾವಣೆಗಳಿಗೆ ಸಜ್ಜಾಗಬೇಕಿರುವ ಅನಿವಾರ್ಯತೆಯೂ ಇದೆ. ಈ ನಿಟ್ಟಿನಲ್ಲಿ ಹೊಸ ಸರ್ಕಾರದಲ್ಲಿ ಸತತವಾಗಿ ಪಕ್ಷವನ್ನು ಕೈಹಿಡಿದಿರುವ ಸಮುದಾಯಕ್ಕೆ ಆದ್ಯತೆ ನೀಡುವುದು ಪಕ್ಷದ ರಣ ನೀತಿಗಳಲ್ಲಿ ಒಂದಾಗಬೇಕಿದೆ. ಸಮುದಾಯದ ಜತೆಗೆ ಪಕ್ಷ ನಿಷ್ಠೆ ಮತ್ತು ನಿಷ್ಕಂಳಕಿತ ನಾಯಕನಿಗೆ ಉನ್ನತ ಸ್ಥಾನಮಾನ ನೀಡುವ, ಪಕ್ಷವನ್ನು ಬಲಿಷ್ಠಗೊಳಿಸುವ ಜವಾಬ್ದಾರಿ ಸಹ ಹೈಕಮಾಂಡ್ ಮೇಲಿದೆ. ಈ ನಿಟ್ಟಿನಲ್ಲಿ ಮುಂದಿನ ಸಚಿವ ಸಂಪುಟ ಅಸ್ತಿತ್ವಕ್ಕೆ ಬಂದಾಗ ಮುನಿಯಪ್ಪ ಅವರಿಗೆ ಡಿಸಿಎಂ ಸ್ಥಾನ ನೀಡಬೇಕು ಎಂದರು.

### ಹಣಕ್ಕಾಗಿ ಮಕ್ಕಳ ಮಾರಾಟ, ವರದಕ್ಷಿಣೆಗಾಗಿ ಪತ್ನಿಯ ಕೊಲೆ ತಲೆಮರೆಸಿಕೊಂಡ ಪತಿಗಾಗಿ ಪೊಲೀಸರಿಂದ ತಲಾಶ್

• **ಉದಯವಾಹಿನಿ, ಹಾಸನ**

ವರದಕ್ಷಿಣೆಗಾಗಿ ಪತ್ನಿಯನ್ನು ಕೊಲೆ ಮಾಡಿ ನಂತರ ಮೃತದೇಹವನ್ನು ಆಸ್ಪತ್ರೆಯಲ್ಲಿ ಇಟ್ಟು ಪತಿ ಎಸ್ಕೇಪ್ ಆದ ಘಟನೆ ಚನ್ನರಾಯಪಟ್ಟಣದ ಕಂಚಾಗಾರ ಬೀದಿಯಲ್ಲಿ ನಡೆದಿದೆ.ಗುಲ್ಸನ್ ಬಾನು (34) ಕೊಲೆಯಾದ ಮಹಿಳೆ. ಪತಿ ಸೈಫ್ ಅಲಿಖಾನ್ ವಿರುದ್ಧ ಕೊಲೆ ಆರೋಪ ಕೇಳಿಬಂದಿದೆ. ಕಳೆದ 14 ವರ್ಷಗಳ ಹಿಂದೆ ಹಾಸನದ (ಊಚಿ ಚಿಟ) ಚಿಪ್ಪಿನಕಟ್ಟೆಯ ಗುಲ್ಸನ್ ಬಾನು, ಚನ್ನರಾಯಪಟ್ಟಣದ ಸೈಫ್ ಅಲಿಖಾನ್ ಜೊತೆ ವಿವಾಹವಾಗಿದ್ದರು. ದಂಪತಿಗೆ ಎರಡು ಗಂಡು ಮಕ್ಕಳಿದ್ದು ಸೈಫ್ ಅಲಿಖಾನ್ ಗಾರೆ ಕೆಲಸ ಮಾಡಿಕೊಂಡಿದ್ದ. ಹಣಕ್ಕಾಗಿ ಮಕ್ಕಳನ್ನು ಮಾರಾಟ ಮಾಡಿದ್ದ ಎಂದು ಆರೋಪಿಲಾಗಿದೆ.

ಮದುವೆ ಎರಡು ವರ್ಷ ದಂಪತಿ ಅನ್ಯೋನ್ಯವಾಗಿದ್ದರು. ನಂತರ ವರದಕ್ಷಿಣೆ ಹಣ ತರುವಂತೆ ಪತ್ನಿಗೆ ಕಿರುಕುಳ ನೀಡುತ್ತಿದ್ದ. ಪತ್ನಿಗೆ ಮನಬಂದಂತೆ ಹಲ್ಲೆ ನಡೆಸುತ್ತಿದ್ದ. ಈ ಸಂಬಂಧ ಚನ್ನರಾಯಪಟ್ಟಣ ಹಾಗೂ ಹಾಸನ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆದರೂ ಸೈಫ್ ಅಲಿಖಾನ್ ಬದಲಾಗಿರಲಿಲ್ಲ. ಮೂರ್ನಾಲ್ಕು ಬಾರಿ ಕುಟುಂಬಸ್ಥರು ರಾಜಿ ಪಂಚಾಯ್ತಿ ಮಾಡಿದ್ದರೂ ಸಹ ಹಣಕ್ಕಾಗಿ ಪೀಡಿಸುತ್ತಲೇ ಇದ್ದ.ಮಗಳ ಸ್ಥಿತಿ ಕಂಡ ಪೋಷಕರು ಅಳಿಯನಿಗೆ 50,000 ರೂ. ಹಣ ಹಾಗೂ ಒಂದು ಆಟೋ ಕೊಡಿಸಿದ್ದರು.

# ವೃದ್ಧ ವೈದ್ಯ ದಂಪತಿ ಮನೆಯಲ್ಲಿ 1.2 ಕೋಟಿ ಚಿನ್ನಾಭರಣ ಕಳ್ಳತನ ಪ್ರಕರಣ: ಕೇರ್ ಟೇಕರ್ ಸೇರಿ ಮತ್ತೊಬ್ಬ ಆರೋಪಿಗೆ ಹೆಡೆಮುರಿ ಕಟ್ಟಿದ ಬೆಳಗಾವಿ ಪೊಲೀಸರು

• **ಉದಯವಾಹಿನಿ, ಬೆಳಗಾವಿ**

ಕೇರ್ ಟೇಕರ್ ಹೆಸರಿನಲ್ಲಿ ವೃದ್ಧ ವೈದ್ಯ ದಂಪತಿಯೊಬ್ಬರ ಮನೆಯಲ್ಲಿ ಕೆಲಸಕ್ಕೆ ಸೇರಿ ಮನೆಯಲ್ಲಿದ್ದ ಬರೋಬ್ಬರಿ 1.2 ಕೋಟಿ ಮೌಲ್ಯದ 930 ಗ್ರಾಂ ಚಿನ್ನಾಭರಣ ಕದ್ದು ಪರಾರಿ ಆಗಿದ್ದ ಆರೋಪಿ ಮತ್ತು ಆತನಿಗೆ ಚಿನ್ನಾಭರಣ ಮಾರಾಟಕ್ಕೆ ಸಹಕರಿಸಿದ್ದ ಆರೋಪಿಯನ್ನು ಬಂಧಿಸುವಲ್ಲಿ ಬೆಳಗಾವಿ ಕ್ಯಾಂಪ್ ಠಾಣೆ ಪೊಲೀಸರು ಯಶಸ್ವಿ ಆಗಿದ್ದಾರೆ.

ಕಾಗವಾಡ ತಾಲ್ಲೂಕಿನ ಶೇಡಬಾಳದ ರಾಹುಲ್ ಸತೀಶ ಕಾಂಬಳೆ(27) ಮತ್ತು ಬಾಬಾಸಾಬ ಈರಪ್ಪ ಕಟಗೇರಿ ಬಂಧಿತ ಆರೋಪಿಗಳು. ಬಂಧಿತರಿಂದ 52 ಲಕ್ಷ 50 ಸಾವಿರ ರೂ. ಮೌಲ್ಯದ 350 ಗ್ರಾಂ ಚಿನ್ನಾಭರಣ ಮತ್ತು ಚಿನ್ನಾಭರಣ ಮಾರಾಟ ಮಾಡಿ ಬ್ಯಾಂಕ್ ಖಾತೆಯಲ್ಲಿ ಇಟ್ಟುಕೊಂಡಿದ್ದ 22 ಲಕ್ಷ 80 ಸಾವಿರ ರೂ. ನಗದು ಸೇರಿ ಒಟ್ಟು 75 ಲಕ್ಷ 30 ಸಾವಿರ ರೂ. ಮೌಲ್ಯದ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿಕೊಂಡಿದ್ದಾರೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ, ದೂರುದಾರರಾದ ಅನ್ನಪೂರ್ಣಾ ಅವರ ಪತಿ ಡಾ.ವಿಶ್ವನಾಥ ಅವರು ಅನಾರೋಗ್ಯದಿಂದ ಹಾಸಿಗೆ ಹಿಡಿದಿದ್ದರು. ವೈದ್ಯ ಮಗ ಬೇರೆ ಕಡೆ ಇರುತ್ತಾರೆ. ಡಾ.ವಿಶ್ವನಾಥ ಧಡೇದ್ ಅವರ ಮನೆಯಲ್ಲಿ ಹಳೆ ಕಾಲದ ಲಾಕರ್ ಇತ್ತು. ಬಾಗಿಲು ಹಾಕಿದಾಗ ಲಾಕ್ ಆದಂತೆ ಎನಿಸುತ್ತಿತ್ತು. ಆದರೆ, ವಾಸ್ತವವಾಗಿ ಅದು ಲಾಕ್ ಆಗುತ್ತಿರಲಿಲ್ಲ. ಜೋರಾಗಿ ತೆಗೆದಾಗ ಓಪನ್ ಆಗುತ್ತಿತ್ತು. ಇದನ್ನು ಆರೋಪಿ ತಿಳಿದುಕೊಂಡು ಕೃತ್ಯ ಎಸಗಿದ್ದ. ಕಳ್ಳತನ ಆಗಿದ್ದು ಒಟ್ಟು 1.2 ಕೋಟಿ ಮೌಲ್ಯದ ಚಿನ್ನಾಭರಣ. ಅದರಲ್ಲಿ ಈಗ 75.3 ಲಕ್ಷ ಮೌಲ್ಯದ ಚಿನ್ನಾಭರಣ ಮತ್ತು ನಗದು ಜಪ್ತಿ ಪಡಿಸಿಕೊಳ್ಳಲಾಗಿದೆ. ಇನ್ನುಳಿದ ಚಿನ್ನಾಭರಣ ಕೂಡ ಶೀಘ್ರವೇ ರಿಕವರಿ ಮಾಡಲಾಗುವುದು ಎಂದು ತಿಳಿಸಿದರು. ಈ ಪ್ರಕರಣ ಬೇಧಿಸಿದ ತಂಡದಲ್ಲಿ ಸಿಪಿಐ ಆನಂದ ಒನಕುದ್ರೆ, ಜೊತೆಗೆ ಪಿಎಸ್‌ಐ ಎ.ರುಕ್ಮಿಣಿ, ಪಿಎಸ್ ಐ ಆರ್.ಐ.ಸನದಿ, ಪಿಎಸ್‌ಐ ಎಲ್.ಕೆ.ಪಾಟೀಲ, ಎಎಸ್‌ಐ ಎಸ್.ವ್ಹಿ.ಪಾಟೀಲ, ಸಿಬ್ಬಂದಿಗಳಾದ ಬಸವರಾಜ ಉಜ್ಜಿನಕೊಪ್ಪ, ಶಿವಾನಂದ. ಹೆಗಡೆನ್ನವರ, ಭರಮಣ್ಣ ಕರೆಗಾರ, ವಾಯ್. ಎಮ್. ಮುನವಳ್ಳಿ, ಜೆ. ಎಸ್. ಲಮಾಣಿ, ಎನ್. ಎಮ್. ತೇಲಿ, ಪ್ರಕಾಶ ಸಣಮನಿ ಹಾಗೂ ತಾಂತ್ರಿಕ ಸಿಬ್ಬಂದಿಗಳಾದ ಆರ್. ಎಸ್. ಅಕ್ಕಿ, ಎಮ್. ಎಸ್. ಕಾಸಿದ. ದೀಪಕ, ದೊಡಗೋನಿ ಭಾಗವಹಿಸಿದ್ದರು. ಈ ತಂಡಕ್ಕೆ ನಗದು ಬಹುಮಾನ ಕೂಡ ನೀಡಲಾಗುವುದು ಎಂದರು. ಸಾರ್ವಜನಿಕರು ತಮ್ಮ ಬಳಿ ದೊಡ್ಡ ಮಟ್ಟದ ಚಿನ್ನಾಭರಣ ಇದ್ದರೆ, ಅವುಗಳನ್ನು ಬ್ಯಾಂಕ್‌ನಲ್ಲಿ ಇಟ್ಟರೆ ಒಳ್ಳೆಯದು. ಮನೆಯಲ್ಲಿ ಇಟ್ಟಿದ್ದರೆ ಲಾಕರ್ ಸರಿಯಾಗಿ ಇದೆಯೇ ಎನ್ನುವುದನ್ನು ಖಚಿತ ಪಡಿಸಿಕೊಳ್ಳಬೇಕು. ಬರ್ಗಲ್ ಅಲಾರಾಮ್ ಅಳವಡಿಸಿದರೆ ಇನ್ನೂ ಒಳ್ಳೆಯದು. ಹಾಗಾಗಿ, ಹೆಚ್ಚು ಜಾಗೃತಿ ವಹಿಸುವಂತೆ ಪೊಲೀಸ್ ಕಮಿಷನರ್ ಕಿವಿಮಾತು ಹೇಳಿದರು.


ಉದಯವಾಹಿನಿ ಚಿತ್ರ

### ಏನಿದು ಪ್ರಕರಣ..?

**ಮೇ 11ರಂದು ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಇಲ್ಲಿನ ಕ್ಲಬ್ ರಸ್ತೆಯ ನಿವಾಸಿ ಡಾ.ಅನ್ನಪೂರ್ಣಾ ವಿಶ್ವನಾಥ ಧಡೇದ ಅವರು ದೂರು ನೀಡಿದ್ದರು. ನಮ್ಮ ಮನೆಯಲ್ಲಿ 930 ಗ್ರಾಂ ಚಿನ್ನಾಭರಣ ಕಳ್ಳತನ ಆಗಿದೆ. ಯಾವುದೇ ರೀತಿ ಟ್ರೇಜರ್ರಿ, ಲಾಕರ್ ಮುರಿದು ಕಳ್ಳತನ ಮಾಡಿರಲಿಲ್ಲ ಅಂತಾ ದೂರಿನಲ್ಲಿ ತಿಳಿಸಿದ್ದರು.**

**ಹೀಗಾಗಿ, ಮನೆಯಲ್ಲಿ ಕೆಲಸ ಮಾಡುವವರು ಕಳ್ಳತನ ಮಾಡಿರುವ ಶಂಕೆ ಪೊಲೀಸರಿಗೆ ವ್ಯಕ್ತವಾಗಿತ್ತು. ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ನಿರಂಜನ್ ರಾಜೆ ಅರಸ್, ಎಸಿಪಿ ಶೇಖರಪ್ಪ, ಸಿಪಿಐ ಆನಂದ ಒನಕುದ್ರೆ, ಅವರ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು. ಈ ತಂಡ ಇಬ್ಬರು ಆರೋಪಿಗಳನ್ನು ಬಂಧಿಸಿದೆ. ಹೀಗಾಗಿ, ಅವರ ಆರೈಕೆಗೆ ಅಂತಾ ಆರೋಪಿ ರಾಹುಲ್ ಕೇರ್ ಟೇಕರ್ ಆಗಿ ಡಿಸೆಂಬರ್ ತಿಂಗಳಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದ. ಮೂರು ತಿಂಗಳಲ್ಲಿ ಹಂತ ಹಂತವಾಗಿ 930 ಗ್ರಾಂ ಚಿನ್ನಾಭರಣ ಕಳ್ಳತನ ಮಾಡಿ ಪರಾರಿ ಆಗಿದ್ದ. ಆರೋಪಿ ರಾಹುಲ್ ಕಾಂಬಳೆ ಕದ್ದ ಚಿನ್ನಾಭರಣಗಳನ್ನು ಮತ್ತೋರ್ವ ಆರೋಪಿ ಬಾಬಾಸಾಬ ಕಟಗೇರಿ ಮೂಲಕ ಮಾರಾಟ ಮಾಡಲು ಪ್ರಯತ್ನಿಸಿದ್ದ ಎಂದು ವಿವರಿಸಿದರು.**

